
ಸಂಪುಟ: 04 ಸಂಚಿಕೆ: 56 ಪುಟಗಳು: 08 ಶುಕ್ರವಾರ 10 ಮೇ 2024
www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833
₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ನಿಮಗೆ ನಾನು ಅದನ್ನು ಮಾಡಬಲ್ಲೆ... ಎಂಬ ನಂಬಿಕೆಯಿದ್ದರೆ ನಿಮಗೆ ಆರಂಭದಲ್ಲಿ ಸಾಮರ್ಥ್ಯವಿರದಿದ್ದರೂ ಕೆಲಸ ಮಾಡಲು ಪ್ರಾರಂಭಿಸಿದಾಗ ಆ ಸಾಮರ್ಥ್ಯ ಖಂಡಿತವಾಗಿಯೂ ಬರುತ್ತದೆ




# ಜೆಡಿಎಸ್ ದೂರು ಕಿತ್ತಾಟ ಜೋರು

ಹಾಸನ ಪೆನ್‌ಡ್ರೈವ್ ಪ್ರಕರಣಕ್ಕೆ ಸಂಬಂಧಿಸಿದಂತೆ ಎಸ್‌ಐಟಿ ತನಿಖೆ ಪಾರದರ್ಶಕವಾಗಿ ನಡೆಯುತ್ತಿಲ್ಲ ಎಂದು ಮಾಜಿ ಸಿಎಂ ಎಚ್‌ಡಿ ಕುಮಾರಸ್ವಾಮಿ ಅವರು ರಾಜ್ಯಪಾಲರಿಗೆ ದೂರು ನೀಡಿದ್ದಾರೆ. ಜೆಡಿಎಸ್ ನಾಯಕರ ನಿಯೋಗದ ಜೊತೆಗೆ ಗುರುವಾರ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರನ್ನು ಭೇಟಿ ಮಾಡಿ, ದೂರನ್ನು ನೀಡಿದರು. ಅಲ್ಲದೆ ಡಿಸಿಎಂ ಡಿಕೆ ಶಿವಕುಮಾರ್ ಅವರನ್ನು ಸಂಪುಟದಿಂದ ವಜಾ ಮಾಡುವಂತೆ ಸೂಚನೆ ನೀಡಬೇಕು ಎಂದು ಮನವಿ ಮಾಡಿದರು.

**● ರಾಜ್ಯಪಾಲರ ಅಂಗಳ ತಲುಪಿದ ಪ್ರಜ್ವಲ್ ರೇವಣ್ಣ ಕೇಸ್ ..! ● ಎಚ್‌ಡಿಕೆ ನೇತೃತ್ವದ ಜೆಡಿಎಸ್ ನಿಯೋಗದಿಂದ ದೂರು, ● ಕಾಂಗ್ರೆಸ್ ಒಕ್ಕಲಿಗ ನಾಯಕರಿಗೆ ಎಚ್‌ಡಿಕೆ ತಿರುಗೇಟು**

• ಉದಯವಾಹಿನಿ, ಬೆಂಗಳೂರು

ಹಾಸನ ಸಂಸದ ಪ್ರಜ್ವಲ್ ರೇವಣ್ಣ ಪೆನ್ ಡ್ರೈವ್ ಪ್ರಕರಣದ ದೂರು ರಾಜಭವನಕ್ಕೂ ತಲುಪಿದೆ. ರಾಜ್ಯದಲ್ಲಷ್ಟೇ ಅಲ್ಲ, ಇಡೀ ದೇಶ, ವಿದೇಶದಲ್ಲೂ ಪ್ರಜ್ವಲ್ ರೇವಣ್ಣ ಲೈಂಗಿಕ ಹಗರಣ ಸದ್ದು ಮಾಡಿತ್ತು. ಇದೀಗ ಈ ಬಗ್ಗೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರಿಗೂ ದೂರು ಸಲ್ಲಿಸಲಾಗಿದೆ. ಎಚ್‌ಡಿ ಕುಮಾರಸ್ವಾಮಿ ನೇತೃತ್ವದ ಜೆಡಿಎಸ್ ನಿಯೋಗ ರಾಜಭವನಕ್ಕೆ ತೆರಳಿ, ಈ ಕೇಸ್ ಕುರಿತಂತೆ ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಗಿದೆ.

ರಾಜ್ಯಪಾಲರಿಗೆ ಜೆಡಿಎಸ್ ನಿಯೋಗ ಮನವಿ ಪ್ರಜ್ವಲ್ ರೇವಣ್ಣ ಪೆನ್ ಡ್ರೈವ್ ಪ್ರಕರಣಕ್ಕೆ ಸಂಬಂಧಿಸಿದಂತೆ ಜೆಡಿಎಸ್ ನಿಯೋಗ ರಾಜ್ಯಪಾಲರನ್ನು ಭೇಟಿಯಾಗಿದೆ. ಎಚ್‌ಡಿ ಕುಮಾರಸ್ವಾಮಿ ನೇತೃತ್ವದ ನಿಯೋಗ ರಾಜಭವನಕ್ಕೆ ಭೇಟಿ ನೀಡಿ, ಪ್ರಕರಣದ ಕುರಿತಂತೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರಿಗೆ ಮಾಹಿತಿ ನೀಡಿದೆ. ಪ್ರಜ್ವಲ್ ಪೆನ್‌ಡ್ರೈವ್ ಕೇಸ್ ಸಿಬಿಐ ತನಿಖೆಗೆ ವಹಿಸಲು ಜೆಡಿಎಸ್ ನಿಯೋಗ ರಾಜ್ಯಪಾಲರಿಗೆ ಮನವಿ ಮಾಡಿದೆ. ಜೆಡಿಎಸ್ ರಾಜ್ಯಾಧ್ಯಕ್ಷ ಎಚ್.ಡಿ. ಕುಮಾರಸ್ವಾಮಿ ನೇತೃತ್ವದ ನಿಯೋಗದಲ್ಲಿ ಶಾಸಕ ಜಿ.ಟಿ.ದೇವೆಗೌಡ, ಬಂಡೆಪ್ಪ ಕಾಶ್ಯಂಪೂರ್ ಸೇರಿತೆ ಹಲವರು ಇದ್ದರು. ಇನ್ನು ಇದಕ್ಕೂ ಮುನ್ನ ಸುದ್ದಿಗೋಷ್ಠಿ ನಡೆಸಿದ್ದ ಎಚ್‌ಡಿಕೆ, ಕಾಂಗ್ರೇಸ್‌ನ ಒಕ್ಕಲಿಗ ಸಚಿವರು, ಶಾಸಕರ ಸುದ್ದಿಗೋಷ್ಠಿಗೆ ತಿರುಗೇಟು ನೀಡಿದ್ರು. ಈ ಪೆನ್‌ಡ್ರೈವ್ ಯಾರು ರಿಲೀಸ್ ಮಾಡಿದ್ದು? ಇಂತಹ ದೊಡ್ಡ ಲೈಂಗಿಕ ಪ್ರಕರಣ ಅಲ್ವೇ, ಪೆನ್‌ಡ್ರೈವ್ ಬಿಟ್ಟಿದ್ದು ವಿಶ್ವಾದ್ಯಂತ ಪ್ರಚಾರಕ್ಕಾ...? ನರೇಂದ್ರ ಮೋದಿ, ಅಮಿತ್ ಶಾರನ್ನ ಪ್ರಶ್ನೆ ಮಾಡಿದ್ರಿ. ಆದರೆ ನಿಮಗೆ ಲೈಂಗಿಕ ದೌರ್ಜನ್ಯ ಕ್ಕೊಳಗದಾವರಿಗೆ ಶಿಕ್ಷೆಯಾಗೋದು ಬೇಕಾ..? ಅಂತ ಪ್ರಶ್ನಿಸಿದ್ರು. ಹಾಸನ ರಾಜಕೀಯದಲ್ಲಿ ಇನ್ವಾಲ್ ಆಗಿಲ್ಲ. ನಾವು ನಾಲ್ಕು ಜನ ಮಕ್ಕಳು ಬೇರೆ ಬೇರೆಯಾಗಿ ವಾಸವಾಗಿದ್ದೇವೆ. ಹಾಸನ ರಾಜಕಾರಣಕ್ಕೆ ಬಂದ್ರೆ ಈ ಕ್ಷಣದವರೆಗೂ ಇನ್ವಾಲ್ವ್ ಆಗಿದ್ದೀನಾ..? 2023ರಲ್ಲಿ ಭವಾನಿ ಸ್ಪರ್ಧೆ ವಿಚಾರ ಬಂದಾಗ ಸಾಮಾನ್ಯ ಕಾರ್ಯಕರ್ತನಿಗೆ ಟಿಕೆಟ್ ಕೊಡಿಸಿದೆ ಅಂತ ಎಚ್‌ಡಿಕೆ ಹೇಳಿದ್ರು.

**1** ಹಾಸನ ಪೆನ್‌ಡ್ರೈವ್ ಪ್ರಕರಣಕ್ಕೆ ಸಂಬಂಧಿಸಿದಂತೆ ಎಸ್‌ಐಟಿ ತನಿಖೆ ಪಾರದರ್ಶಕವಾಗಿ ನಡೆಯುತ್ತಿಲ್ಲ ಎಂದ ಎಚ್‌ಡಿ ಕುಮಾರಸ್ವಾಮಿ.

**2** ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರನ್ನು ಭೇಟಿ ಮಾಡಿ ದೂರು ನೀಡಿದ ಎಚ್‌ಡಿಕೆ.

**3** ಡಿಸಿಎಂ ಡಿಕೆ ಶಿವಕುಮಾರ್ ಕೈವಾಡವಿದ್ದು, ಅವರನ್ನು ಸಂಪುಟದಿಂದ ಕೈಬಿಡಲು ಸೂಚನೆ ನೀಡಬೇಕು ಎಂದು ಮನವಿ ಮಾಡಿದ ಡಿಕೆ ಶಿವಕುಮಾರ್.



## ರಾಜ್ಯಪಾಲರಿಗೆ ನೀಡಿದ ದೂರಿನಲ್ಲಿ ಏನಿದೆ?

ರಾಜ್ಯಪಾಲರು ಸಾಂವಿಧಾನಿಕ ಹುದ್ದೆಯಲ್ಲಿರುವುದರಿಂದ ರಾಜ್ಯ ಸರ್ಕಾರಕ್ಕೆ ಕೆಲವು ಸಂದರ್ಭದಲ್ಲಿ ಸೂಕ್ತ ನಿರ್ದೇಶನಗಳನ್ನು ನೀಡುವ ಅಧಿಕಾರ ಇದೆ. ಅಲ್ಲದೆ ರಾಜ್ಯದಲ್ಲಿ ನಡೆಯುತ್ತಿರುವ ಬೆಳವಣಿಗೆಳಗಳ ಕುರಿತಾಗಿ ರಾಷ್ಟ್ರಪತಿಗಳಿಗೆ ವರದಿ ನೀಡುವ ಅಧಿಕಾರ ಇದೆ. ಲೋಕಸಭೆ ಚುನಾವಣೆಯ ಸಂದರ್ಭದಲ್ಲೇ ಹಾಸನದಲ್ಲಿ ಪ್ರಜ್ವಲ್ ರೇವಣ್ಣ ಅವರಿಗೆ ಸಂಬಂಧಿಸಿದ್ದು ಎನ್ನಲಾಗಿರುವ ವಿಡಿಯೋಗಳನ್ನು ಹರಿಯಬಿಡಲಾಗಿತ್ತು. ಇವುಗಳು ಮಹಿಳೆಯರ ಘನತೆಗೆ ಕುಂದು ಉಂಟು ಮಾಡುವ ವಿಡಿಯೋಗಳಾಗಿವೆ. ಈ ಹಿನ್ನೆಲೆಯಲ್ಲಿ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರು ಈ ಬಗ್ಗೆ ವಿಶೇಷ ತನಿಖಾ ತಂಡ ರಚನೆ ಮಾಡುವಂತೆ ಕೋರಿ ಸಿಎಂಗೆ ಪತ್ರವನ್ನು ಬರೆಯುತ್ತಾರೆ. ಈ ವರದಿ ಆಧರಿಸಿ ರಾಜ್ಯ ಸರ್ಕಾರ ಎಸ್‌ಐಟಿ ರಚನೆ ಮಾಡಿದೆ ಎಂದು ತಿಳಿಸಿದ್ದಾರೆ.

## ಹೆಚ್.ಡಿ ರೇವಣ್ಣಗೆ '3 ದಿನ' ಜೈಲೇ ಗತಿ



ಮಹಿಳೆ ಕಿಡ್ನ್ಯಾಪ್ ಪ್ರಕರಣದಲ್ಲಿ ಮಾಜಿ ಸಚಿವ ಹೆಚ್.ಡಿ ರೇವಣ್ಣ ಸಲ್ಲಿಸಿದ್ದಂತ ಜಾಮೀನು ಅರ್ಜಿಯ ವಿಚಾರಣೆ ಬೆಂಗಳೂರಿನ ಜನಪ್ರತಿನಿಧಿಗಳ ನ್ಯಾಯಾಲಯ ನಡೆಸಿತು. ವಾದ-ಪ್ರತಿವಾದ ಆಲಿಸಿದಂತ ನ್ಯಾಯಪೀಠವು, ಸೋಮವಾರದ ಬೆಳಿಗ್ಗೆ 11.30ಕ್ಕೆ ಮುಂದೂಡಿಕೆ ಮಾಡಿದೆ.ನ್ಯಾಯಾಂಗ ಬಂಧನದಲ್ಲಿರುವಂತ ಅವರಿಗೆ 3 ದಿನ ಜೈಲೇ ಗತಿಯಾದಂತೆ ಆಗಿದೆ. ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದಲ್ಲಿ ಮಾಜಿ ಸಚಿವ ಹೆಚ್.ಡಿ ರೇವಣ್ಣ ಸಲ್ಲಿಸಿದ್ದಂತ ಜಾಮೀನು ಅರ್ಜಿಯ ವಿಚಾರಣೆ ಕೈಗೆತ್ತಿಕೊಳ್ಳಲಾಗಿದೆ. ಮಹಿಳೆ ಕಿಡ್ನ್ಯಾಪ್ ಪ್ರಕರಣದ ವಿಚಾರಣೆ ಆರಂಭವಾಗುತ್ತಿದ್ದಂತೆ, ಹೆಚ್.ಡಿ ರೇವಣ್ಣಗೆ ಸದ್ಯಕ್ಕೆ ಜಾಮೀನು ನೀಡದಂತೆ ಎಸ್‌ಐಟಿ ಪರ ಎಸ್ ಪಿಪಿ ಅವರು ಆಕ್ಷೇಪಣೆ ಸಲ್ಲಿಸಿದ್ದಾರೆ. ಕೋರ್ಟ್ ಮುಂದೆ ಎಸ್‌ಐಟಿಯ ಎಸ್ ಪಿಪಿ ಜಾಯ್ನಾ ಕೋಥಾರಿ ಅವರು ವಾದ ಮಂಡಿಸಿ, ಜಾಮೀನು ಅರ್ಜಿಗೆ ನಾವು ಆಕ್ಷೇಪಣೆ ಸಲ್ಲಿಸುತ್ತಿರುವುದರ ಹಿಂದೆ ವಿಳಂಪದ ಉದ್ದೇಶವಿಲ್ಲ. ನಮ್ಮ ವಾದ ಮಂಡನೆಗೆ ಕಾಲಾವಕಾಶ ನೀಡಬೇಕು ಎಂಬುದಾಗಿ ಕೋರಿದರು. ಈ ವೇಳೆ ನ್ಯಾಯಪೀಠವು ಜಾಮೀನು ಅರ್ಜಿ ವಿಚಾರಣೆಗೆ ಕಾಲಾವಕಾಶ ನೀಡುವುದಿಲ್ಲ. ಬೇರೆ ಪ್ರಕರಣಗಳಲ್ಲಿ ನಾವು ಕಾಲಾವಕಾಶ ನೀಡಿಲ್ಲ. ಸುಪ್ರೀಂ ಕೋರ್ಟ್ ಕೂಡ ಇದನ್ನೇ ಹೇಳಿದೆ ಎಂಬುದಾಗಿ ಸ್ಪಷ್ಟ ಪಡಿಸಿತು. ಈ ಬಳಿಕ ಹೆಚ್.ಡಿ ರೇವಣ್ಣ ಪರವಾಗಿ ಹಿರಿಯ ವಕೀಲ ಸಿ.ವಿ ನಾಗೇಶ್ ವಾದಿಸುತ್ತಾ, ಜಾಮೀನು ಅರ್ಜಿ ಊರ್ಜಿತವೆಂಬ ನನ್ನ ವಾದದ ಬಗ್ಗೆ ತಕರಾರು ತೆಗೆದಿದ್ದಾರೆ. ನನ್ನ 56 ವರ್ಷಗಳ ವಕೀಲ ವೃತ್ತಿಯಲ್ಲಿ ಎಂದಿಗೂ ತಪ್ಪು ಮಾಹಿತಿ ನೀಡಿಲ್ಲ. 2023ರ ತಿಸ್ತಾ ಸೆಟಲ್ ವಾರ್ಡ್ ಪ್ರಕರಣದಲ್ಲಿ ಸುಪ್ರೀಂ ಕೋರ್ಟ್ ತೀರ್ಪಿದೆ. ನಿರಂಜರ್ ಸಿಂಗ್ ಕೇಸಲ್ಲೂ ಜಾಮೀನು ಅರ್ಜಿ ಸಲ್ಲಿಸಬಹುದೆಂಬ ತೀರ್ಪಿದೆ. 22 ತೀರ್ಪುಗಳಲ್ಲಿ ನಿರಂಜನ್ ಸಿಂಗ್ ಕೇಸ್ ಅನ್ನು ಅನುಸರಿಸಲಾಗಿದೆ ಎಂಬುದಾಗಿ ನ್ಯಾಯಪೀಠಕ್ಕೆ ಮನವರಿಕೆ ಮಾಡಿಕೊಟ್ಟರು.

ಹೆಚ್.ಡಿ ರೇವಣ್ಣ ವಿರುದ್ಧ ಮಹಿಳೆ ಕಿಡ್ನ್ಯಾಪ್ ಪ್ರಕರಣ ದಾಖಲಾದ ನಂತ್ರ ಮಧ್ಯಂತರ ಜಾಮೀನಿಗೆ ಅರ್ಜಿ ಸಲ್ಲಿಸಿದಾಗ ಮಹಿಳೆಯ ಸುರಕ್ಷತೆಯಿಂದ ಜಾಮೀನು ನಿರಾಕರಿಸಲಾಗಿತ್ತು. ಆ ಬಳಿಕ ಅಂದೇ ಅವರು ಪತ್ತೆಯಾಗಿದ್ದರು. ಏಪ್ರಿಲ್.28ರಂದು ಹೊಳೇನರಸೀಪುರದಲ್ಲಿ ಮೊದಲ ಕೇಸ್ ದಾಖಲಾಗಿತ್ತು. ಮೇ.2ರಂದು ಹಾಜರಾಗುವಂತೆ ಎಸ್‌ಐಟಿ ಅಧಿಕಾರಿಗಳು ನೋಟಿಸ್ ನೀಡಿದ್ದರು ಎಂಬುದಾಗಿ ಹೆಚ್.ಡಿ ರೇವಣ್ಣ ಪರ ಹಿರಿಯ ವಕೀಲ ಸಿ.ವಿ ನಾಗೇಶ್ ವಾದಿಸಿದರು.

### ಜಾಮೀನು ನೀಡುವಂತೆ ಕೋರಿಕೆ

ಮೇ.3ರಂದು ನೋಟಿಸ್ ನೀಡಿ ಮೇ.4ರಂದು ಹಾಜರಾಗಲು ಹೇಳಿದ್ರು. ಈ ಕೇಸಲ್ಲಿ ವಿಚಾರಣೆಗೆ ಹಾಜರಾದ್ರೇ ಕಿಡ್ನ್ಯಾಪ್ ಪ್ರಕರಣದಲ್ಲಿ ಬಂಧಿಸೋ ಉದ್ದೇಶವನ್ನು ಹೊಂದಿರಲಾಗಿತ್ತು. ಆದರೇ ಹೆಚ್.ಡಿ ರೇವಣ್ಣ ವಿರುದ್ಧ ಜಾಮೀನು ನೀಡಬಹುದಾದಂತ ಆರೋಪಗಳಿವೆ. ಹೀಗಾಗಿ ಮಾಜಿ ಸಚಿವ ಹೆಚ್.ಡಿ ರೇವಣ್ಣ ಅವರಿಗೆ ಕಿಡ್ನ್ಯಾಪ್ ಪ್ರಕರಣದಲ್ಲಿ ಜಾಮೀನು ನೀಡುವಂತೆ ಬೆಂಗಳೂರಿನ ಜನಪ್ರತಿನಿಧಿಗಳ ನ್ಯಾಯಾಲಯದ ನ್ಯಾಯಪೀಠಕ್ಕೆ ಹೆಚ್.ಡಿ ರೇವಣ್ಣ ಪರ ವಕೀಲ ಸಿ.ವಿ ನಾಗೇಶ್ ಕೋರಿದರು.

## ಪ್ರಜ್ವಲ್ ಬರುವವರೆಗೂ ತೀವ್ರ ಗತಿಯ ವಿಚಾರಣೆ ಕಷ್ಟ: ಸಚಿವ

• ಉದಯವಾಹಿನಿ, ಬೆಂಗಳೂರು

ಹಾಸನದಲ್ಲಿ ಹಂಚಿಕೆಯಾಗಿದ್ದ ಅಶ್ಲೀಲ ಪೆನ್‌ಡ್ರೈವ್ ಪ್ರಕರಣಕ್ಕೆ ಸಂಬಂಧಿಸಿದಂತೆ ಈವರೆಗೆ 3 ಮಂದಿಯನ್ನು ಬಂಧನ ಮಾಡಲಾಗಿದೆ. ಇನ್ನು ಈ ಪ್ರಕರಣದಲ್ಲಿ ಹಾಸನ ಸಂಸದ ಪ್ರಜ್ವಲ್ ರೇವಣ್ಣ ಬರುವವರೆಗೂ ತೀವ್ರಗತಿಯ ವಿಚಾರಣೆ ಕಷ್ಟ ಎಂದು ಗೃಹ ಸಚಿವ ಡಾ ಜಿ ಪರಮೇಶ್ವರ್ ಹೇಳಿದ್ದಾರೆ. ಬೆಂಗಳೂರಿನಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಪ್ರಜ್ವಲ್ ರೇವಣ್ಣ ವಿರುದ್ಧ ಬ್ಲೂ ಕಾರ್ನರ್ ನೋಟಿಸ್ ಜಾರಿ ಮಾಡಲಾಗಿದೆ. ಇಂಟರ್ ಪೋಲ್ ಬ್ಲೂ ಕಾರ್ನರ್ ನೋಟಿಸ್ ಜಾರಿ ಮಾಡಿದ್ದು, ನಮ್ಮ ದೇಶದ ತನಿಖಾ ಸಂಸ್ಥೆಗಳಿಗೆ ಮಾಹಿತಿ ನೀಡಲಿದ್ದಾರೆ ಎಂದರು. ಸದ್ಯ ಬಂಧನದಲ್ಲಿರುವ ಮಾಜಿ ಸಚಿವ ಎಚ್‌ಡಿ ರೇವಣ್ಣ ಅವರಿಂದ ಮಾಹಿತಿ ಕಲೆ ಹಾಕಲಾಗುತ್ತಿದೆ. ದೂರುದಾರರಿಂದಲೂ ಮಾಹಿತಿಗಳನ್ನು ಸಂಗ್ರಹ ಮಾಡುವ ಕೆಲಸ ಆಗುತ್ತಿದೆ. ಹೀಗಿರುವಾಗ ಮಾಜಿ ಮುಖ್ಯಮಂತ್ರಿ ಎಚ್‌ಡಿ ಕುಮಾರಸ್ವಾಮಿ ಸುದ್ದಿಗೋಷ್ಠಿಯಲ್ಲಿ, 'ಎಸ್‌ಐಟಿ ಸಮರ್ಥವಲ್ಲ ಹಾಗಾಗಿ ಸಿಬಿಐಗೆ ನೀಡಬೇಕು' ಎಂದಿದ್ದಾರೆ. ಕುಮಾರಸ್ವಾಮಿ ಮುಖ್ಯಮಂತ್ರಿಯಾಗಿದ್ದವರು. ಎಸ್‌ಐಟಿ ಕಾರ್ಯವೈಖರಿ ಅವರಿಗೂ ಗೊತ್ತಿರುತ್ತದೆ, ಎಂದು ತಿರುಗೇಟು ನೀಡಿದರು.

## ಡಿಕೆಶಿ ಎಲ್ಲಾ ಮಾಡುತ್ತಿರುವುದು ಸಿಎಂ ಪಟ್ಟಕ್ಕಾಗಿ ಎಂದ ಸೋಮಣ್ಣ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಈಗ ಭಾರೀ ಸಂಚಲನ ಎಬ್ಬಿಸಿರುವ ಪ್ರಜ್ವಲ್ ರೇವಣ್ಣ ವಿಡಿಯೋ ಕೇಸ್ ನಲ್ಲಿ ಡಿಕೆ ಶಿವಕುಮಾರ್ ಕೈವಾಡವಿದೆ ಎಂದು ಪ್ರತಿಪಕ್ಷಗಳು ಆರೋಪಿಸುತ್ತಿವೆ. ಪ್ರಜ್ವಲ್ ವಿಡಿಯೋ ರಿಲೀಸ್ ಮಾಡಲು ಡಿಕೆ ಶಿವಕುಮಾರ್ ಕುಮ್ಮಕ್ಕು ಕಾರಣ ಎಂಬ ಆರೋಪವಿದೆ. ಈ ಬಗ್ಗೆ ಮಾಜಿ ಸಚಿವ, ತುಮಕೂರು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ವಿ. ಸೋಮಣ್ಣ ಪ್ರತಿಕ್ರಿಯಿಸಿದ್ದಾರೆ. ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಡಿಕೆ ಶಿವಕುಮಾರ್ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಡಿಕೆ ಶಿವಕುಮಾರ್ ಇಷ್ಟೆಲ್ಲಾ ಮಾಡುತ್ತಿರುವುದು ಸಿಎಂ ಕುರ್ಚಿ ಮೇಲಿನ ಆಸೆಯಿಂದ. ಅವರು ಮುಖ್ಯಮಂತ್ರಿಯಾಗಲಿ ಎಂದು ನನಗೂ ಆಸೆಯಿತ್ತು. ಆದರೆ ಮುಖ್ಯಮಂತ್ರಿ ಪಟ್ಟಕ್ಕಾಗಿ ಇಷ್ಟೆಲ್ಲಾ ದುಡುಕುವುದು ಬೇಡ ಎಂದು ಸೋಮಣ್ಣ ಟಾಂಗ್ ಕೊಟ್ಟಿದ್ದಾರೆ. ಸಿಎಂ ಸಿದ್ದರಾಮಯ್ಯ, ಸಿಂಧ್ಯಾ ಮುಂತಾದವರೆಲ್ಲಾ ರಾಜಕೀಯಣದಲ್ಲಿ ಸಂಸ್ಕಾರವನ್ನು ಕಲಿತಿದ್ದೇ ದೇವೇಗೌಡರಿಂದ. ಪ್ರಜ್ವಲ್ ದೇವೇಗೌಡರ ಮೊಮ್ಮಗ ಎಂಬ ಕಾರಣಕ್ಕೆ ಅವರು ತಪ್ಪು ಮಾಡಿದರೂ ರಿಯಾಯಿತಿ ತೋರುವುದು ಬೇಡ. ಅವರು ತಪ್ಪು ಮಾಡಿದ್ದರೆ ಗಲ್ಲಿಗೇರಿಸಲಿ ಎಂದರು.

## ಜಾತಿಗಳ ಹೆಸರಲ್ಲಿ ಹಿಂದೂ ಸಮಾಜ ಒಡೆಯುವ ಕೆಲಸ ಮಾಡುತ್ತಿವೆ

• ಉದಯವಾಹಿನಿ, ಶಿವಮೊಗ್ಗ

ಬಿಜೆಪಿಯ ಶುದ್ಧೀಕರಣವಾಗಬೇಕು ಎಂದು ಬಯಸಿರುವ, ಹಿಂದೂತ್ವದಲ್ಲಿ ನಂಬಿಕೆಯಿರುವ ಎಲ್ಲಾರೂ ನನ್ನ ಪರ ಮತ ಹಾಕಿದ್ದಾರೆ ಎಂದು ಮಾಜಿ ಸಚಿವ ಕೆ.ಎಸ್.ಈಶ್ವರಪ್ಪ ತಿಳಿಸಿದ್ದಾರೆ. ಶಿವಮೊಗ್ಗದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕೆ.ಎಸ್. ಈಶ್ವರಪ್ಪ, ಲೋಕಸಭಾ ಚುನಾವಣೆಯಲ್ಲಿ ನಾನು ನಿಶ್ಚಿತವಾಗಿಯೂ ಗೆಲ್ಲುತ್ತೇನೆ. ಈ ಬಾರಿ ಚುನಾವಣೆಯಲ್ಲಿ ಮುಸ್ಲಿಂ ಮತದಾರರು ಜಾಗೃತಗೊಂಡು ಹೆಚ್ಚಿನ ಸಂಖ್ಯೆಯಲ್ಲಿ ಮತದಾನ ಮಾಡಿದ್ದಾರೆ ಎಂದರು. ರಾಜಕೀಯ ಪಕ್ಷಗಳು ಜಾತಿ ಹೆಸರಲ್ಲಿ ಹಿಂದೂ ಸಮಾಜವನ್ನು ಒಡೆಯುವ ಕೆಲಸ ಮಾಡುತ್ತಿವೆ. ಅದಕ್ಕೆ ತದ್ವಿರುದ್ಧವಾಗಿ ಮುಸ್ಲಿಂರು ಐಕ್ಯತೆ ಪ್ರದರ್ಶಿಸುತ್ತಿದ್ದಾರೆ. ಶಿವಮೊಗ್ಗದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಗೀತಾ ಶಿವರಾಜ್ ಕುಮಾರ್ ಹಾಗೂ ಬಿಜೆಪಿ ಅಭ್ಯರ್ಥಿ ಬಿ.ವೈ.ರಾಘವೇಂದ್ರ ಜಾತಿ ಹೆಸರಲ್ಲಿ ಮತಯಾಚಿಸಿದ್ದಾರೆ ಎಂದು ಆರೋಪಿಸಿದರು. ಇದೇ ವೇಳೆ ನನ್ನ ವಿರುದ್ಧ ಬಿ.ವೈ.ರಾಘವೇಂದ್ರ ಷಡ್ಯಂತ್ರ ನಡೆಸಿದ ಹೊರತಾಗಿಯೂ ನಾನು ಉತ್ತಮ ಲೀಡ್ ನಲ್ಲಿ ಗೆಲುವು ಸಾಧಿಸುತ್ತೇನೆ ಎಂಬ ವಿಶ್ವಾಸವಿದೆ ಎಂದು ಹೇಳಿದರು.

## ಘೋರ ದುರಂತ : ಪಿಜಿ ಕಟ್ಟಡದ ಮೇಲಿಂದ ಹಾರಿ ಯುವಕ ಆತ್ಮಹತ್ಯೆ

• ಉದಯವಾಹಿನಿ, ಬೆಂಗಳೂರು


ಬೆಂಗಳೂರಿನಲ್ಲಿ ಘೋರ ದುರಂತ ಒಂದು ನಡೆದಿದ್ದು ಪಿಜಿ ಕಟ್ಟಡದ ಮೇಲಿನಿಂದ ಹಾರಿ ಯುವಕನೊಬ್ಬ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ವೈಟ್ ಫೀಲ್ಡ್ ಠಾಣಾ ವ್ಯಾಪ್ತಿಯ ಅಂಬೇಡ್ಕರ್ ನಗರದಲ್ಲಿ ನಡೆದಿದೆ.

ಮೃತನನ್ನು ಕಲಬುರ್ಗಿ ಮೂಲದ 28 ವರ್ಷದ ಯುವಕ ಎಂದು ಹೇಳಲಾಗುತ್ತಿದ್ದು, ಪಿಜಿ ಕಟ್ಟಡದ ಮೇಲಿಂದ ಹಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂದು ತಿಳಿದುಬಂದಿದೆ. ಆತ್ಮಹತ್ಯೆ ಮಾಡಿಕೊಂಡ ಯುವಕ ಕೆಲಸ ಹುಡುಕಿಕೊಂಡು ಬಂದಿದ್ದ ಎನ್ನಲಾಗುತ್ತಿದೆ. ಆದರೆ ಆತನಿಗೆ ಎಲ್ಲೂ ಕೂಡ ಕೆಲಸ ಸಿಕ್ಕಿರಲಿಲ್ಲ. ಇದರಿಂದ ಮನನೊಂದು ಆತ್ಮಹತ್ಯೆ ಮಾಡಿಕೊಂಡಿರುವ ಶಂಕೆ ವ್ಯಕ್ತವಾಗುತ್ತಿದ್ದು, ಘಟನೆ ಕುರಿತಂತೆ ವೈಟ್ ಫೀಲ್ಡ್ ಠಾಣೆ ಪೊಲೀಸರು ಕೇಸ್ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ.

# ಸೋನಿಯಾ ಬಣ್ಣ ಯಾವುದು? ಅವರು ಭಾರತೀಯರಾ?

• ಉದಯವಾಹಿನಿ, ಬೆಂಗಳೂರು

ದಕ್ಷಿಣ ಭಾರತೀಯರನ್ನು ಆಫ್ರಿಕಾ ಜನರಿಗೆ ಹೋಲಿಕೆ ಮಾಡಿದ ಕಾಂಗ್ರೆಸ್ ಸಾಗರೋತ್ತರ ಘಟಕದ ಅಧ್ಯಕ್ಷರಾಗಿದ್ದ ಸ್ಯಾಮ್ ಪಿತ್ರೋಡ 420 ಆಗಿದ್ದಾರೆ. ಅವರು ದೇಶ ವಿಭಜನೆಯ ಮುನ್ನಲೆ ಗಾಯಕರಾಗಿದ್ದಾರೆ. ಆದರೆ ಅವರದ್ದೇ ರೀತಿಯಲ್ಲಿ ದೇಶ ವಿಭಜನೆಯ ಹೇಳಿಕೆ ಕೊಟ್ಟಿದ್ದ ಸಂಸದ ಡಿಕೆ ಸುರೇಶ್ ಹಿನ್ನಲೆ ಗಾಯಕ ಎಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ್ ವಾಗ್ದಾಳಿ ನಡೆಸಿದ್ದಾರೆ. ಅಲ್ಲದೆ ಸಿಎಂ ಸಿದ್ದರಾಮಯ್ಯ ಅವರು ಯಾವಾಗ ಆಫ್ರಿಕಾಗೆ ಹೋಗುತ್ತಿರಾ? ಎಂದು ಪ್ರಶ್ನಿಸಿದ್ದಾರೆ.



ಬಿಜೆಪಿ ಕಚೇರಿಯಲ್ಲಿ ಮಾತನಾಡಿದ ಅವರು, ಸ್ಯಾಮ್ ಪಿತ್ರೋಡ ಹೇಳಿಕೆ ದೇಶವನ್ನು ಛಿದ್ರ ಮಾಡುವ ಹೇಳಿಕೆಯಾಗಿದೆ. ಡಿಕೆಶಿ ಹಿನ್ನಲೆ ಗಾಯಕ. ಅವರು ಭಾರತವನ್ನು ಛಿದ್ರ ಮಾಡಬೇಕು ಎಂದಿದ್ದರು. ಕಾಂಗ್ರೆಸ್ ಇದೀಗ ಬಣ್ಣದ ಭಾಗ್ಯವನ್ನು ಕೊಡುತ್ತಿದೆ. ಬಣ್ಣದ ಗ್ಯಾರಂಟಿಗಳನ್ನು ಕೊಡುತ್ತಿದೆ. ಬಣ್ಣದ ಜನಾಂಗೀಯ ಗಲಭೆಯನ್ನು ಸಾವಿರಾರು ಜನರು ಪ್ರಾಣ ತೆತ್ತಿದ್ದಾರೆ. ನೆಲ್ಸನ್ ಮಂಡೇಲಾ, ಮಹಾತ್ಮಾ ಗಾಂಧಿಯ ಹೋರಾಟ ಇದಕ್ಕೆ ಅಂತ್ಯ ಹಾಡಿತ್ತು ಎಂದರು.

ಸ್ಯಾಮ್ ಪಿತ್ರೋಡ 420. ರಾಜೀನಾಮೆ ಕೊಟ್ಟರೆ ಈ ವಿವಾದ ಬಗೆಹರಿಸಲು ಸಾಧ್ಯವಿಲ್ಲ. ನಾನು ಭಾರತೀಯನೆ ಅಲ್ಲ ಎಂಬ ಪ್ರಶ್ನೆಯನ್ನು ಅವರು ಎತ್ತಿದ್ದಾರೆ. ನಮಗೆ 5000 ವರ್ಷದ ಇತಿಹಾಸ ಇದೆ. ಹಾಗಿದ್ದರೂ ನಮ್ಮನ್ನು ಆಫ್ರಿಕಾದ ಜನರಿಗೆ ಹೋಲಿಕೆ ಮಾಡಿದ್ದಾರೆ. ಸೋನಿಯಾ ಗಾಂಧಿ ಇಟಲಿಯಿಂದ ಬಂದಿದ್ದರೂ ಅವರನ್ನು ಭಾರತೀಯರು ಎಂದು ಒಪ್ಪಿಕೊಳ್ಳಿ ಎಂದು ಕಾಂಗ್ರೆಸ್ ನವರು ಒತ್ತಾಯ ಮಾಡ್ತಾರೆ.

### ರಾಹುಲ್, ಪ್ರಿಯಾಂಕಾ ಯಾರು?

ಸೋನಿಯಾ ಯಾರು ಎಂದು ಪಿತ್ರೋಡ ಹೇಳಬೇಕು. ಸೋನಿಯಾ ಬಣ್ಣ ಯಾವುದು? ಅವರು ಭಾರತೀಯರಾ? ರಾಹುಲ್, ಪ್ರಿಯಾಂಕಾ ಯಾರು? ಸಿದ್ದರಾಮಯ್ಯ ಮಾತು ಮಾತಿಗೆ ಐದು ಗ್ಯಾರಂಟಿ ಅನ್ನುತ್ತಾರೆ. ಆದರೆ ಇದೀಗ ಬಣ್ಣವು ಕಾಂಗ್ರೆಸ್ ಒಂದು ಗ್ಯಾರಂಟಿಯಾಗಿದೆ. ಇನ್ನು ಮುಂದೆ ಕಾಂಗ್ರೆಸ್ ಬಣ್ಣದ ಗ್ಯಾರಂಟಿಯನ್ನು ನೀಡಬೇಕಿದೆ ಎಂದರು.

# ಕಾಂಗ್ರೆಸ್‌ಗೆ ಮೈತ್ರಿ ಮುಂದುವರೆಯುತ್ತೋ ಇಲ್ಲವೋ ಎನ್ನುವುದು ಮುಖ್ಯ

**● 15 ದಿನಗಳ ಪ್ರಚಾರಕ್ಕೆ ಕಾಂಗ್ರೆಸ್ ನಾಯಕರು ಹೆಣ್ಣುಮಕ್ಕಳ ಮಾನಹರಣ ಮಾಡಿದ್ದಾರೆ ● ನಾನು ಕಥಾನಾಯಕ ಡಿಕೆಶಿ ಖಳನಾಯಕ**

• ಉದಯವಾಹಿನಿ, ಬೆಂಗಳೂರು

ಅಶ್ಲೀಲ ವಿಡಿಯೋ ಪ್ರಕರಣಕ್ಕೆ ಸಂಬಂಧಿಸಿದಂತೆ ಬೆಂಗಳೂರಿನ ಜೆಡಿಎಸ್ ಕಚೇರಿಯಲ್ಲಿ ಮಾಜಿ ಮುಖ್ಯಮಂತ್ರಿ ಎಚ್ ಡಿ ಕುಮಾರಸ್ವಾಮಿ ಸುದ್ದಿಗೋಷ್ಠಿ ನಡೆಸುತ್ತಿದ್ದು, ಪ್ರಕರಣ ಕುರಿತಂತೆ ತಪ್ಪಿಸಸ್ಥರಿಗೆ ಶಿಕ್ಷೆಯಾಗುವುದು ಬೇಕಿಲ್ಲ ಮೈತ್ರಿ ಮುಂದುವರೆಯುತ್ತೋ ಅಥವಾ ಇಲ್ಲವೋ ಎನ್ನುವುದು ಕಾಂಗ್ರೆಸ್ ನವರಿಗೆ ಮುಖ್ಯವಾಗಿದೆ ಎಂದು ಎಚ್ ಡಿ ಕುಮಾರಸ್ವಾಮಿ ಕಾಂಗ್ರೆಸ್ ನಾಯಕರು ವಿರುದ್ಧ ಆಕ್ರೋಶ ಹೊರಹಾಕಿದರು.

ನಿನ್ನೆ ಹಲವು ಸಚಿವರು ಜಂಟಿ ಸುದ್ದಿಗೋಷ್ಠಿ ನಡೆಸಿದ್ದಾರೆ. ನನ್ನನ್ನೇ ಗುರಿಯಾಗಿಸಿಕೊಂಡು ನಿನ್ನೆ ಸುದ್ದಿಗೋಷ್ಠಿ ನಡೆಸಿದ್ದಾರೆ.ಪೆನ್ ಡ್ರೈವ್ ಬಿಡುಗಡೆ ಮಾಡಲು ಹುನ್ನಾರ ನಡೆಸಿದ್ದೇನೆಂದು ಹೇಳಿದ್ದಾರೆ. ಒಕ್ಕಲಿಗ ನಾಯಕನೆಂದು ಎಲ್ಲೂ ಹೇಳಿಲ್ಲ. ನಾಯಕತ್ವಕ್ಕಾಗಿ ಪೈಪೋಟಿ ನಡೆಸಿಲ್ಲ. ನಾನು ಹಿಟ್ ಅಂಡ್ ರನ್ ಅಲ್ಲ ಎಂದು ಸಚಿವ ಕೃಷ್ಣ ಬೈರೇಗೌಡರು ಹೆಚ್‌ಡಿ ಕುಮಾರಸ್ವಾಮಿ ವಾಗ್ದಾಳಿ ನಡೆಸಿದರು.



ಉಪ್ಪು ತಿಂದವನು ನೀರು ಕುಡಿಯಲೇ ಬೇಕು ಎಂದು ನಾನು ಹೇಳಿದ್ದೇನೆ. 2006ರಲ್ಲಿ ನಾನು ಏಕಾಂಗಿಯಾಗಿ ಹೋರಾಟ ಮಾಡಿದ್ದೇನೆ. ಆಗ ನಾನು ಸಿಎಂ ಆಗಿದ್ದರೂ ನನ್ನ ಮೇಲೆ ಆಪಾದನೆ ಮಾಡಲಾಗಿತ್ತು. ಈ ಒಂದು ಪ್ರಕರಣ ರಾಜ್ಯದಲ್ಲಿ ಅತ್ಯಂತ ಕೆಟ್ಟ ಘಟನೆಯಾಗಿದೆ ಈ ಪ್ರಕರಣದಲ್ಲಿ ಜಾತಿಯಿಂದ ರಕ್ಷಣೆ ಪಡೆದುಕೊಳ್ಳುವುದಿಲ್ಲ ಎಂದು ತಿಳಿಸಿದರು. ಪೆನ್ ಡ್ರೈವ್ ಬಿಡುಗಡೆಗೆ ನಾನೇ ಕಾರಣ ಎಂದು ಹೇಳಿದ್ದಾರೆ. ಕಥೆ ನಿರ್ದೇಶನ ನಿರ್ಮಾಪಕ ನಾನೇ ಎಂದು ಹೇಳಿದ್ದಾರೆ. ಸಿನೆಮಾದಲ್ಲಿ ನಿರ್ದೇಶನ, ನಿರ್ಮಾಪಕನಾಗಿದ್ದೆ. ಆದರೆ ಎಂದಿಗೂ ಆಕ್ಟ್ ಮಾಡಿಲ್ಲ ಎಂದು ತಿಳಿಸಿದರು. ಪ್ರಜ್ವಲ್ ಪ್ರಕರಣವನ್ನು ನಾವು ಮುಚ್ಚಿ ಹಾಕುತ್ತಿಲ್ಲ. ಪ್ರಕರಣವನ್ನು ವೈಭವೀಕರಿಸುವುದು ನಾವಲ್ಲ ನೀವು ಎಂದು ಕಿಡಿ ಕಾರಿದರು. ಈ ಒಂದು ಪ್ರಕರಣದಲ್ಲಿ ಎಂತಹ ದೊಡ್ಡ ವ್ಯಕ್ತಿ ಆಗಿರಲಿ ಎಷ್ಟೇ ಪ್ರಭಾವಿಯಾಗಿದ್ದರು ಕೂಡ ಆ ವ್ಯಕ್ತಿಗೆ ಶಿಕ್ಷೆ ಆಗಲೇಬೇಕು ಎಂದು ಕೃಷ್ಣಬೈರೇಗೌಡರೇ ನಿಮಗಿಂತಲೂ ಮೊದಲು ಧ್ವನಿ ಎತ್ತಿದವನು ನಾನು. ಆದರೆ ಕಾಂಗ್ರೆಸ್ ನವರಿಗೆ ಮೈತ್ರಿ ಮುಂದುವರೆಯುತ್ತೋ ಇಲ್ಲವೋ ಎಂಬ ಪ್ರಶ್ನೆಯಾಗಿದೆ ಹೊರತು ತಪ್ಪಿತಸ್ಥರಿಗೆ ಶಿಕ್ಷೆ ಆಗುತ್ತೋ ಇಲ್ಲವೋ ಎನ್ನುವುದು ಅವರಿಗೆ ಮುಖ್ಯವಾಗಿಲ್ಲ. ಅಲ್ಲೊಬ್ಬ ದೊಡ್ಡ ನಾಯಕರು ಹೇಳಿದ್ದಾರೆ.2900 ವಿಡಿಯೋ ಎಂದು ಹೇಳುತ್ತಿದ್ದಾರೆ ಎಂದು ಮೈಸೂರಿನ ಕಾಂಗ್ರೆಸ್ ಅಭ್ಯರ್ಥಿಯಾಗಿರುವ ಎಂ.ಲಕ್ಷ್ಮಣ ಹೆಸರು ಪ್ರಸ್ತಾಪಿಸಿದರು.

ಮಹಿಳೆಯರ ದೌರ್ಜನದ ಬಗ್ಗೆ ಹೇಳುತ್ತಿದ್ದೀರಲ್ಲ ಪ್ರಕರಣವನ್ನು ಎಸಐಟಿಗೆ ಕೊಟ್ಟು ಎಷ್ಟು ದಿನವಾಯಿತು? ಹುಬ್ಬಳ್ಳಿಯಲ್ಲಿ ಸ್ನೇಹ ಪ್ರಕರಣ ಆಯ್ತಲ್ಲ ಆಗ ಹೆಣ್ಣು ಮಕ್ಕಳ ಬಗ್ಗೆ ಇರುವ ಕಾಳಜಿ, ರಕ್ಷಣೆ ಕುರಿತು ಎಲ್ಲಿ ಹೋಗಿತ್ತು. ಏನಿಲ್ಲ ಮಹಿಳೆಯರಿಗೆ ರಕ್ಷಣೆ ಕೊಡ್ತೀವಿ ಅಂತೀರಿ ಎಲ್ಲಿ ರಕ್ಷಣೆ ಕೊಡುತ್ತಿದ್ದೀರಿ ಎಂದು ತಿಳಿಸಿದರು.

### ಕಥಾನಾಯಕ ಖಳನಾಯಕ

ಇದೀಗ ಇಡೀ ದೇಶದಲ್ಲಿ ಹಾಸನ ಸಂಸದ ಪ್ರಜ್ವಲ್ ರೇವಣ್ಣ ಅಶ್ಲೀಲ ವಿಡಿಯೋ ಪ್ರಕರಣ ಸದ್ದು ಮಾಡುತ್ತಿದ್ದು ಈ ಕುರಿತಂತೆ ಬೆಂಗಳೂರಿನಲ್ಲಿ ಮಾಜಿ ಸಿಎಂ ಎಚ್ ಡಿ ಕುಮಾರಸ್ವಾಮಿ ಸುದ್ದಿಗೋಷ್ಠಿ ನಡೆಸಿದ್ದು ಈ ಒಂದು ಪ್ರಕರಣದ ಕಥಾನಾಯಕ ನಾನಾದರೆ ಇದರ ಖಳನಾಯಕ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಎಂದು ವಾಗ್ದಾಳಿ ನಡೆಸಿದರು. ಜೂನ್ ನಾಲ್ಕರನಂತರ ಈ ಪ್ರಕರಣ ಇರುತ್ತೋ ಇಲ್ಲವೋ ಗೊತ್ತಿಲ್ಲ ಪೆನ್ ಡ್ರೈವ್ ಹಂಚಿದ ನಾಲ್ವರು ರಾಜಾರೋಷವಾಗಿ ಓಡಾಡುತ್ತಿದ್ದಾರೆ

### ಹೆಣ್ಣುಮಕ್ಕಳ ಮಾನಹರಣ

ಕಾಂಗ್ರೆಸ್ 15 ದಿನಗಳ ಪ್ರಚಾರಕ್ಕಾಗಿ ಹೆಣ್ಣುಮಕ್ಕಳ ಮಾನಹರಣ ಮಾಡಿದ್ದಾರೆ. ಮಹಿಳೆಯರ ಬಗ್ಗೆ ಕಿಂಚಿತ್ತು ಗೌರವ ಇದ್ದಿದ್ದರೆ ಇಂತಹ ಗೌಪ್ಯ ವಿಚಾರವನ್ನು ಇಷ್ಟು ದೊಡ್ಡ ವಿಚಾರ ಮಾಡಲು ಬಿಡುತ್ತಿರಲಿಲ್ಲ ಎಂದು ಮಾಜಿ ಸಿಎಂ ಹೆಚ್‌ಡಿ ಕುಮಾರಸ್ವಾಮಿ ಕಿಡಿಕಾರಿದ್ದಾರೆ.

**ಈ ದಿನದ ದರ** | ಪೆಟ್ರೋಲ್: 99.84 ₹/L | ಡೀಸೆಲ್ : 85.93 ₹/L | ಬಂಗಾರ: ₹7,216/Gram(24ct) ₹6,615/Gram(22ct) | ಬೆಳ್ಳಿ: ₹85.20/Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

### ಪ್ರವರ್ತಕ ಕರ್ಮವೆನಿಪುದು

ನಿಜಗುಣರ ಪರಮಾನುಭವ ಬೋಧೆಯ ಮಾತು. ಕರ್ಮ ಕ್ರಿಯೆ. ಅದು ಫಲಕ್ಕೆ ಕಾರಣ. ಕಾರ್ಯವಿಲ್ಲದೇ ಫಲ ಅಸಾಧ್ಯ. ತೆಂಗಿನ ಸಸಿ ನೆಡದೇ ತೆಂಗು ಫಲ ಕೊಡದು. ವಾಹನವನ್ನು ಚಲಾಯಿಸಿದರೆ ಸ್ಥಳ ಬಿಡುವುದು. ಹೆಜ್ಜೆ ಹಾಕಿದರೆ ಸ್ಥಳಾಂತರ! ಪರಿವರ್ತನೆ ಬದಲಾವಣೆ ಅಭಿವೃದ್ಧಿ ಫಲಪ್ರಾಪ್ತಿ ಪ್ರವೃತ್ತಿಗೆ ಕಾರಣ ಕರ್ಮ ಪ್ರವರ್ತಕ. ಪ್ರವೃತ್ತಿಯನ್ನುಂಟುಮಾಡುವ ಕರ್ಮ. ಬದಲಾಗಿ ನಿವೃತ್ತಿಯನ್ನುಂಟುಮಾಡುವ ಕರ್ಮ ನಿವರ್ತಕ. ಪ್ರವರ್ತಕ ಕರ್ಮ ಪ್ರಾಪಂಚಿಕ ವ್ಯವಹಾರವನ್ನು ಜೇಡರ ಬಲೆಯಂತೆ ವಿಸ್ತರಿಸಿ, ಜೇಡರ ಹುಳುವನ್ನು ತಾ ಹೆಣೆದ ಬಲೆಯೊಳಗೆ ಸಿಲುಕಿಸುವಂತೆ, ತಾ ವಿಸ್ತರಿಸಿದ ವ್ಯವಹಾರ ತನ್ನನ್ನೇ ಕಟ್ಟಿಹಾಕುವುದು! ಪ್ರವರ್ತಕ ಸುಖ ದುಃಖ ಮಿಶ್ರ ಫಲ ನೀಡುವ, ಸಂಸಾರ ಬಂಧ ಬೀಜ. ನಿವರ್ತಕ ಇದನ್ನು ನಾಶಪಡಿಸಿ ಮೋಕ್ಷಸುಖ ನೀಡುವ ಸಾಧನ. ನಿವರ್ತಕ ಕರ್ಮ ಒಂದೇ. ಪ್ರವರ್ತಕ ಕರ್ಮ, ಅಹಂ ಭ್ರಮೆ ಅಜ್ಞಭ್ರಮೆ ಕರಣಭ್ರಮೆ ಇಂದ್ರಿಯಭ್ರಮೆ ದೇಹಭ್ರಮೆ ವಿಶ್ವಭ್ರಮೆ ತೈಜಸಭ್ರಮೆ ಪ್ರಾಜ್ಞಭ್ರಮೆ ಎಂದು ಎಂಟು ವಿಧ.

# ಬೈಕ್ ಸ್ಟಂಟ್ ಮಾಡುವವರ ಆನ್‌ಲೈನ್ ಮೂಲಕ ಕಣ್ಣು!

■ ನಗರದಲ್ಲಿ ಬೈಕ್ ಸ್ಟಂಟ್ ಮಾಡುವುದು ಆಗುತ್ತಿಲ್ಲ ಕಡಿಮೆ ■ ಜನರು ಪೊಲೀಸರಿಗೆ ದೂರು, ಕಣ್ಣಿಡಲು ಹೊಸ ಪ್ರಯೋಗ

• **ಉದಯವಾಹಿನಿ, ಬೆಂಗಳೂರು**

ಎಷ್ಟು ಜಾಗೃತಿ ಮೂಡಿಸಿದರೂ, ದಂಡ ಪ್ರಯೋಗ ಮಾಡಿದರೂ ಸಹ ಬೆಂಗಳೂರು ನಗರದಲ್ಲಿ ಬೈಕ್ ಸ್ಟಂಟ್ ಮಾಡುವುದು ಕಡಿಮೆ ಆಗುತ್ತಿಲ್ಲ. ಈ ಕುರಿತು ಜನರು ಸಹ ಪೊಲೀಸರಿಗೆ ದೂರು ನೀಡುತ್ತಲೇ ಇದ್ದಾರೆ. ಆದ್ದರಿಂದ ಸಂಚಾರಿ ಪೊಲೀಸರು ಇದರ ಮೇಲೆ ಕಣ್ಣಿಡಲು ಹೊಸ ಪ್ರಯೋಗ ಮಾಡುತ್ತಿದ್ದಾರೆ.

ಬೆಂಗಳೂರು ನಗರದಲ್ಲಿ 121 ದಿನದಲ್ಲಿ 191 ಬೈಕ್ ವ್ಹೀಲಿಂಗ್ ಪ್ರಕರಣಗಳು ದಾಖಲಾಗಿವೆ. ಇವುಗಳಲ್ಲಿ 27 ಅಪ್ರಾಪ್ತರು ಸೇರಿದ್ದಾರೆ. ಈ ಹಿನ್ನಲೆಯಲ್ಲಿ ಬೆಂಗಳೂರು ಪೊಲೀಸರು ಶೀಘ್ರವೇ ಆನ್‌ಲೈನ್ ಮೂಲಕವೇ ಕಾರ್ಯಾಚರಣೆ ಮಾಡಲಿದ್ದಾರೆ. ಈ ಅಭಿಯಾನದ ಭಾಗವಾಗಿ ಜನರು ತಮ್ಮ ರಸ್ತೆಯಲ್ಲಿ ಬೈಕ್ ವ್ಹೀಲಿಂಗ್ ಮಾಡುವ, ಬೈಕ್ ಸ್ಟಂಟ್ ಮಾಡುವವರ ಕುರಿತು ದೂರು ನೀಡಬಹುದು. ಪೊಲೀಸರು ಇಂತಹ ಅಪಾಯಕಾರಿ ಸ್ಟಂಟ್ ಮಾಡುವವರನ್ನು ಪತ್ತೆ ಹಚ್ಚಿ ಕೇಸು ದಾಖಲು ಮಾಡಲಿದ್ದಾರೆ.

ಹೇಗೆ ನಡೆಯಲಿದೆ ಕಾರ್ಯಾಚರಣೆ; ಈ ಹಿಂದೆ ಇದೇ ಮಾದರಿಯಲ್ಲಿ ಮಾಡಿದ ಕಾರ್ಯಾಚರಣೆ ವೇಳೆ ಬೈಕ್ ವ್ಹೀಲಿಂಗ್ ಮಾಡುವವರು, ಸ್ಟಂಟ್ ಮಾಡುವವರನ್ನು ಪತ್ತೆ ಮಾಡಲು ಸಹಾಯಕವಾಗಿತ್ತು. ಈಗ ಪೊಲೀಸರು ತಂಡವೊಂದನ್ನು ರಚನೆ ಮಾಡಿ ಈ ಅಭಿಯಾನವನ್ನು ಕೈಗೊಳ್ಳಲಿದ್ದಾರೆ. ಬೈಕ್ ವ್ಹೀಲಿಂಗ್, ಸ್ಟಂಟ್ ಮಾಡುವವರು ಅವುಗಳ ಚಿತ್ರ, ವಿಡಿಯೋಗಳನ್ನು ಸಾಮಾಜಿಕ ಜಾಲತಾಣದಲ್ಲಿ ಅಪ್‌ಲೋಡ್ ಮಾಡುತ್ತಾರೆ. ಆದ್ದರಿಂದ ಸಂಚಾರಿ ಪೊಲೀಸರ ತಂಡ ವಿಶೇಷವಾಗಿ ಸಾಮಾಜಿಕ ಜಾಲತಾಣದ ಮೇಲೆ ಕಣ್ಣಿಡಲಿದೆ.

ಅಲ್ಲದೇ ಜನರು ತಮ್ಮ ಬಡಾವಣೆಗಳಲ್ಲಿ ನಡೆಯುವ ಬೈಕ್ ವ್ಹೀಲಿಂಗ್, ಸ್ಟಂಟ್ ಕುರಿತು ದೂರು ನೀಡಿದರೆ ಅದನ್ನು ಪರಿಹಾರ ಮಾಡಲು ಸಹ ತಂಡ ಕೆಲಸ ಮಾಡಲಿದೆ. ನಗರದೊಳಗೆ ಮಾತ್ರವಲ್ಲ ನಗರದ ಹೊರವಲಯದ ರಸ್ತೆಗಳ ಮೇಲೆ ಸಹ ಕಣ್ಣಿಡಲಾಗುತ್ತದೆ ಎಂದು ಪೊಲೀಸರು ಹೇಳಿದ್ದಾರೆ.

ನೈಸ್ ರಸ್ತೆ, ಹೊರ ವರ್ತುಲ ರಸ್ತೆ, ಶಾಲೆ, ಕಾಲೇಜುಗಳ ಬಳಿ ಬೈಕ್ ವ್ಹೀಲಿಂಗ್, ಸ್ಟಂಟ್ ಮಾಡುವುದು ಅಧಿಕ. ಈ ಕುರಿತು ಆಗಾಗ ಜನರು ದೂರು ನೀಡುತ್ತಾರೆ. ಈಗ ಇಂತಹ ದೂರನ್ನು ಆಧರಿಸಿ ಬೈಕ ಸವಾರರನ್ನು ಪತ್ತೆ ಹಚ್ಚಲು ವಿಶೇಷ ತಂಡ ಕೆಲಸ ಮಾಡಲಿದೆ. ವಿವಿಧ ರಸ್ತೆಗಳಲ್ಲಿ ವ್ಹೀಲಿಂಗ್, ಸ್ಟಂಟ್ ಮಾಡುವ ಬಗ್ಗೆ ಜನರು ಸಾಮಾಜಿಕ ಜಾಲತಾಣಗಳ ಮೂಲಕ ದೂರು ನೀಡುತ್ತಿದ್ದಾರೆ. ಇಂತಹ ದೂರುಗಳನ್ನು ಬಗೆಹರಿಸಲು ವಿಶೇಷ ತಂಡ ಶೀಘ್ರವೇ ಕೆಲಸ ಆರಂಭಿಸಲಿದೆ. ಜನರು ಬೈಕ್ ಸ್ಟಂಟ್ ವಿಡಿಯೋ, ಚಿತ್ರಗಳನ್ನು ಶೇರ್ ಮಾಡಲು ಸಹ ವ್ಯವಸ್ಥೆ ಮಾಡಲಾಗುತ್ತದೆ.


ಉದಯವಾಹಿನಿ ಚಿತ್ರ

**191 ಬೈಕ್ ವ್ಹೀಲಿಂಗ್ ಪ್ರಕರಣ**

**ಇಂತಹ ಸ್ಟಂಟ್‌ಗಳನ್ನು ಮಾಡಲು ಹೋಗಿ ಇತರ ವಾಹನ ಸವಾರರಿಗೂ ಕಿರಿಕಿರಿ ಉಂಟು ಮಾಡುತ್ತಾರೆ. ಇದಕ್ಕಾಗಿಯೇ ಬೈಕ್‌ಗಳನ್ನು ವಿಶೇಷವಾಗಿ ವಿನ್ಯಾಸಗೊಳಿಸುತ್ತಾರೆ. ನಕಲಿ ನಂಬರ್ ಪ್ಲೇಟ್ ಅಳವಡಿಕೆ ಮಾಡುತ್ತಾರೆ. ಆದ್ದರಿಂದ ಇಂತಹ ಪ್ರಕರಣಗಳನ್ನು ಪತ್ತೆ ಹಚ್ಚುವುದು ಸಹ ಪೊಲೀಸರಿಗೆ ಸವಾಲಿನ ಕೆಲಸವಾಗಿದೆ.**

**15 ರಿಂದ 25 ವರ್ಷದವರು ವಿವಿಧ ರಸ್ತೆಗಳಲ್ಲಿ ವ್ಹೀಲಿಂಗ್, ಸ್ಟಂಟ್ ಮಾಡಿ ಇತರರನ್ನು ಆಕರ್ಷಣೆ ಮಾಡಲು ಪ್ರಯತ್ನಿಸುತ್ತಾರೆ. ಇಂತಹ ಅಪಾಯಕಾರಿ ಸಾಹಸ ಮಾಡಲು ಹೋಗಿ ರಸ್ತೆ ಅಪಘಾತಗಳಲ್ಲಿ ಗಾಯಗೊಳ್ಳುತ್ತಿದ್ದಾರೆ, ಪ್ರಾಣ ಹಾನಿಯೂ ಸಂಭವಿಸುತ್ತದೆ. ಆದ್ದರಿಂದ ಇಂತಹವುಗಳ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.**

**ಕಳೆದ 4 ತಿಂಗಳಿನಲ್ಲಿ ಉತ್ತರ ವಿಭಾಗದಲ್ಲಿ 14 ವ್ಹೀಲಿಂಗ್ ಪ್ರಕರಣ ದಾಖಲು ಮಾಡಿದ್ದು, 12 ಆರೋಪಿಗಳನ್ನು ಬಂಧಿಸಲಾಗಿದೆ, ಇವರಲ್ಲಿ ಇಬ್ಬರು ಅಪ್ರಾಪ್ತರು. ವಿವಿಧ ರಸ್ತೆಗಳಲ್ಲಿ ವ್ಹೀಲಿಂಗ್ ಮಾಡಿ ಅಪ್ರಾಪ್ತರು ಸಿಕ್ಕಿಬಿದ್ದರೆ ಅವರ ಪೋಷಕರ ಮೇಲೆ, ಬೈಕ್ ಮಾಲೀಕರ ಮೇಲೆ ಸಹ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಪೊಲೀಸರು ಎಚ್ಚರಿಕೆ ನೀಡಿದ್ದಾರೆ.**

## ನೃತ್ಯ ಪ್ರದರ್ಶನ ಕಾರ್ಯಕ್ರಮ

• **ಉದಯವಾಹಿನಿ, ಬೆಂಗಳೂರು**


ಉದಯವಾಹಿನಿ ಚಿತ್ರ

ಜಯನಗರದ 5ನೇ ಬಡಾವಣೆಯ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ 1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶಾನುಸಾರ ಶ್ರೀ ಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್.ಕೆ. ವಾದೀಂದ್ರಾಚಾರ್ ಅವರ ನೇತೃತ್ವದಲ್ಲಿ ಅಕ್ಷಯ ತೃತೀಯ ಪ್ರಯುಕ್ತ ಮೇ 10, ಶುಕ್ರವಾರ ಸಂಜೆ 6-30ಕ್ಕೆ ವಿದುಷಿ ಶ್ರೀಮತಿ ನಾಗಶ್ರೀ ರಾಘವೇಂದ್ರ ಇವರ ನಿರ್ದೇಶನದಲ್ಲಿ ನಾಟ್ಯ ಸಂಕುಲ ಭರತನಾಟ್ಯ ಕಲಾ ಶಾಲೆಯ ವಿದ್ಯಾರ್ಥಿಗಳಿಂದ ನೃತ್ಯ ಪ್ರದರ್ಶನ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ಶ್ರೀ ನಂದಕಿಶೋರ್ ಆಚಾರ್ ತಿಳಿಸಿದ್ದಾರೆ.

## ಪ್ರಕರಣಗಳಿಗೆ ಇಬ್ಬರು ಹೆಚ್ಚುವರಿ ವಿಶೇಷ ಸರ್ಕಾರಿ ಅಭಿಯೋಜಕರ ನೇಮಕ

• **ಉದಯವಾಹಿನಿ, ಬೆಂಗಳೂರು**

ಹಾಸನ ಸಂಸದ ಪ್ರಜ್ವಲ್ ರೇವಣ್ಣ ಅವರು ಲೈಂಗಿಕ ದೌರ್ಜನ್ಯ ನಡೆಸಿದ್ದಾರೆಂಬ ಆರೋಪದ ಪ್ರಕರಣಗಳ ತನಿಖೆಗೆ ರಚಿಸಲಾಗಿರುವ ವಿಶೇಷ ತನಿಖಾ ದಳವು ದಾಖಲಿಸುವ ಪ್ರಕರಣಗಳಲ್ಲಿ ನ್ಯಾಯಾಲಯದಲ್ಲಿ ಹಾಜರಾಗಲು ಹಾಗೂ ಪ್ರಕರಣಗಳನ್ನು ನಡೆಸಲು ಸರ್ಕಾರಿ ಅಭಿಯೋಜಕರ ತಂಡವನ್ನು ಬಲಪಡಿಸುವ ಉದ್ದೇಶದಿಂದ ಹಿರಿಯ ವಕೀಲರಾದ ಅಶೋಕ್ ನಾಯಕ್ ಹಾಗೂ ಜಯನಾ ಕೊಠಾರಿ ಅವರನ್ನು ಹೆಚ್ಚುವರಿ ವಿಶೇಷ ಸರ್ಕಾರಿ ಅಭಿಯೋಜಕರನ್ನಾಗಿ ನೇಮಕ ಮಾಡಿ ಸರ್ಕಾರ ಆದೇಶ ಹೊರಡಿಸಿದೆ.

## 4 ವರ್ಷದ ಪದವಿ ಬದಲು 3 ವರ್ಷದ ಪದವಿ ಮತ್ತೆ ಜಾರಿ

• **ಉದಯವಾಹಿನಿ, ಬೆಂಗಳೂರು**

ರಾಷ್ಟ್ರೀಯ ಶಿಕ್ಷಣ ನೀತಿ (ಎನ್‌ಇಪಿ)ಯಡಿ ಆನರ್ಸ್ ಪದವಿ ಪಡೆಯಲು ನೀಡಿದ್ದ ಅವಕಾಶ ವನ್ನು 2024-25 ಶೈಕ್ಷಣಿಕ ಸಾಲಿ ನಿಂದ ರದ್ದುಪಡಿಸಿ ಉನ್ನತ ಶಿಕ್ಷಣ ಇಲಾಖೆ ಆದೇಶ ಹೊರಡಿಸಿದೆ. ಆದರೆ ಈಗಾಗಲೇ ಎನ್‌ಇಪಿಯಡಿ ಪ್ರವೇಶ ಪಡೆದು ಓದುತ್ತಿರುವ ವಿದ್ಯಾರ್ಥಿಗಳಿಗೆ ಆನರ್ಸ್ ಪದವಿ ಪಡೆಯುವ ಅವಕಾಶವನ್ನು ನೀಡಲಾಗಿದ್ದು ಈ ಶೈಕ್ಷಣಿಕ ವರ್ಷದಿಂದ ಪ್ರವೇಶ ಪಡೆಯುವ ವಿದ್ಯಾರ್ಥಿಗಳ ಡಿಗ್ರಿ ಪದವಿ ಎನ್‌ಇಪಿ ಪೂರ್ವದಲ್ಲಿದ್ದಂತೆ ಮೂರು ವರ್ಷಕ್ಕೆ ಸೀಮಿತ ವಾಗಲಿದೆ. ಎನ್‌ಇಪಿಯ ಬದಲಿಯಾಗಿ ತಮ್ಮದೇ ಆದ ಶೈಕ್ಷಣಿಕ ನೀತಿ ರಚಿಸುವ ಉದ್ದೇಶದಿಂದ ಈ ತೀರ್ಮಾನ ತೆಗೆದುಕೊಳ್ಳಲಾಗಿದೆ ಎಂದು ರಾಜ್ಯ ಸರಕಾರ ಹೇಳಿದೆ. ಆದರೆ 2021-22, 2022-23 ಮತ್ತು 2023-24ರಲ್ಲಿ ಪದವಿಗೆ ಪ್ರವೇಶಾತಿ ಪಡೆದಿರುವ ವಿದ್ಯಾರ್ಥಿಗಳು ಎನ್‌ಇಪಿ ಯಡಿಯೇ ತಮ್ಮ ಶಿಕ್ಷಣ ಮುಂದು ವರಿಸಿ ಮೂರನೇ ವರ್ಷದ ಸ್ನಾತಕ ಪದವಿ ಅಥವಾ 4ನೇ ವರ್ಷದ ಆನರ್ಸ್ ಸ್ನಾತಕ ಪದವಿಯೊಂದಿಗೆ ಸ್ನಾತಕ ಅಧ್ಯಯನವನ್ನು ಪೂರ್ಣಗೊಳಿಸಲು ಅವಕಾಶ ಕಲ್ಪಿಸಲಾಗಿದೆ.

## ಜೈಲಿನಲ್ಲಿರೋ ರೇವಣ್ಣನಿಗೆ ಹೊಟ್ಟೆ ನೋವು, ವೈದ್ಯರಿಂದ ಚಿಕಿತ್ಸೆ

• **ಉದಯವಾಹಿನಿ, ಬೆಂಗಳೂರು**



ಜೆಡಿಎಸ್ ಶಾಸಕ ಎಚ್.ಡಿ.ರೇವಣ್ಣ ಅವರನ್ನು 7 ದಿನಗಳ ಕಾಲ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿ ಕೋರ್ಟ್ ಆದೇಶ ಹೊರಡಿಸಿದೆ.ನಾಲ್ಕು ದಿನಗಳ ಪೊಲೀಸ್ ಕಸ್ಟಡಿ ಅವಧಿ ಮುಗಿದ ಬಳಿಕ ರೇವಣ್ಣ ಅವರನ್ನು ಬೆಂಗಳೂರಿನ 17ನೇ ಎಸಿಎಂಎಂ ನ್ಯಾಯಾಲಯಕ್ಕೆ ಹಾಜರುಪಡಿಸಲಾಯಿತು. ಎರಡೂ ಕಡೆಯ ವಾದ-ಪ್ರತಿವಾದ ಆಲಿಸಿದ ನ್ಯಾಯಾಧೀಶರು ರೇವಣ್ಣ ಅವರನ್ನು ಮೇ 14ರವರೆಗೆ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದರು.ಕರ್ನಾಟಕ ವಿಧಾನಸಭೆಯಲ್ಲಿ ಹೊಳೆನರಸೀಪುರವನ್ನು ಪ್ರತಿನಿಧಿಸುವ ರೇವಣ್ಣ ಅವರನ್ನು ಹಾಸನ ಲೈಂಗಿಕ ದೌರ್ಜನ್ಯ ಪ್ರಕರಣಕ್ಕೆ ಸಂಬಂಧಿಸಿದ ಸಂತ್ರಸ್ತೆಯನ್ನು ಅಪಹರಿಸಿದ ಆರೋಪದ ಮೇಲೆ ವಿಶೇಷ ತನಿಖಾ ತಂಡ (ಎಸ್‌ಐಟಿ) ಮೇ 4 ರಂದು ಬಂಧಿಸಿತ್ತು ಇನ್ನೂ ಜೈಲಿನಲ್ಲಿರುವ ರೇವಣ್ಣನವರಿಗೆ ಹೊಟ್ಟೆ ನೋವು ಕಾಣಿಸಿಕೊಂಡಿದೆ ಎನ್ನಲಾಗಿದ್ದು, ಸದ್ಯ ಅವರಿಗೆ ಜೈಲಿನ ವೈದ್ಯರೇ ಚಿಕಿತ್ಸೆ ನೀಡಿದ್ದಾರೆ ಎನ್ನಲಾಗಿದೆ.

## ರೋಹಿಣಿ ಸಿಂಧೂರಿ, ಡಿ.ರೂಪಾಗೆ ಸುಪ್ರಿಂ ಕೋರ್ಟ್ ಮಹತ್ವದ ಸಲಹೆ

• **ಉದಯವಾಹಿನಿ, ಬೆಂಗಳೂರು**

ಇತ್ತೀಚೆಗಷ್ಟೇ ಡಿ.ರೂಪಾ ಅವರು ರೋಹಿಣಿ ಸಿಂಧೂರಿ ಅವರ ಕೆಲ ವೈಯಕ್ತಿಕ ಫೋಟೋಗಳನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡದ್ದು, ಬಳಿಕ ಭ್ರಷ್ಟಾಚಾರದ ಆರೋಪ ಹಿನ್ನೆಲೆ ಇಬ್ಬರೂ ಮಹಿಳಾ ಅಧಿಕಾರಿಗಳು ಸಾರ್ವಜನಿಕವಾಗಿ ವಾಗ್ವಾದಕ್ಕೆ ಇಳಿದಿದ್ದರು. ನಂತರ ರೂಪಾ ವಿರುದ್ಧ ರೋಹಿಣಿ ಸಿಂಧೂರಿ ಅವರು ಮಾನನಷ್ಟ ಮೊಕದ್ದಮೆ ದಾಖಲಿಸಿದ್ದರು. ಇದೀಗ ಈ ವಿಚಾರದಲ್ಲಿ ಸುಪ್ರಿಂಕೋರ್ಟ್ ಮಹತ್ವದ ಸಲಹೆಯೊಂದನ್ನು ನೀಡಿದೆ. ಹಾಗಾದರೆ ಆ ಸಲಹೆ ಏನು ಎಂದು ಇಲ್ಲಿ ತಿಳಿಯಿರಿ. ಪರಸ್ಪರ ಆರೋಪ-ಪ್ರತ್ಯಾರೋಪ ಬಿಟ್ಟು ಸಂಧಾನದ ಮೂಲಕ ವಿವಾದವನ್ನು ನೀವೇ ಪರಿಹರಿಸಿಕೊಳ್ಳಿ ಎಂದು ಐಎಎಸ್ ಅಧಿಕಾರಿ ರೋಹಿಣಿ ಸಿಂಧೂರಿ, ಐಪಿಎಸ್ ಅಧಿಕಾರಿ ಡಿ.ರೂಪಾ ಮೌದ್ಗಿಲ್ ಸುಪ್ರೀಂ ಕೋರ್ಟ್ ಸಲಹೆ ನೀಡಿದೆ. ನಿಮ್ಮಬ್ಬಿರ ನಡುವಿನ ಜಗಳ ಹೀಗೆಯೇ ಮುಂದುವರಿದರೆ ನಿಮ್ಮ ವೃತ್ತಿ ಮೇಲೆ ಕೆಟ್ಟ ಪರಿಣಾಮ ಬೀರಲಿದೆ. ಸಾರ್ವಜನಿಕ ಜೀವನದಲ್ಲಿರುವ ನೀವು ಇಂತಹ ನಡವಳಿಕೆ ಮುಂದುವರೆಸಬಾರದು ನ್ಯಾ.ಅಭಯ್ ಎಸ್.ಓಕಾ ಪಂಕಜ್ ಮಿತ್ತಲ್ ಅವರಿದ್ದ ಪೀಠವು ಅಭಿಪ್ರಾಯಪಟ್ಟು, ವಿಚಾರಣೆಯನ್ನು ಮುಂದಿನ ವಾರಕ್ಕೆ ಮುಂದೂಡಿದೆ ಎಂದು ತಿಳಿದುಬಂದಿದೆ. ಇನ್ನು ಒಂದು ವೇಳೆ ಇಬ್ಬರೂ ತಮ್ಮ ಆರೋಪ-ಪ್ರತ್ಯಾರೋಪಗಳನ್ನು ಕೈಬಿಡಲು ಮುಂದಾದರೆ, ಇಲಾಖೆಯ ಕ್ರಮ ಕೈಗೊಳ್ಳದಂತೆ ರಾಜ್ಯಕ್ಕೆ ಸೂಚನೆ ನೀಡುವುದಾಗಿ ಸುಪ್ರೀಂ ಕೋರ್ಟ್ ವಿಚಾರಣೆ ವೇಳೆ ಸೂಚಿಸಿದೆ.

## ಸೋಶಿಯಲ್ ಮೀಡಿಯಾ, ಮೊಬೈಲ್‌ನಿಂದ ದೂರವಿರಿ

• **ಉದಯವಾಹಿನಿ, ಬೆಂಗಳೂರು**

ಮಾರ್ಚ್ 25 ರಿಂದ ಏಪ್ರಿಲ್ 26ರವರೆಗೂ ನಡೆದ ಎಸ್.ಎಲ್.ಎಲ್.ಸಿ ಪರೀಕ್ಷಾ ಫಲಿತಾಂಶವನ್ನು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಳಿ ಇಂದು ಪ್ರಕಟಿಸಿದೆ.


ಉದಯವಾಹಿನಿ ಚಿತ್ರ

625 ಕ್ಕೆ 625 ಅಂಕಿತಾ ಬಸಪ್ಪಾ ಕನ್ನೂರ ಬಾಗಲಕೋಟೆ ಜಿಲ್ಲೆಯ ಮುರಾರ್ಜಿ ದೇಸಾಯಿ ಶಾಲೆಯ ವಿದ್ಯಾರ್ಥಿನಿ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದಿದ್ದಾರೆ. 7 ಮಂದಿ ವಿದ್ಯಾರ್ಥಿಗಳು 624 ಅಂಕಗಳೊಂದಿಗೆ ಎರಡನೇ ಸ್ಥಾನ ಪಡೆದಿದ್ದಾರೆ.

ಈ ನಡುವೆ ಮುಧೋಳ ತಾಲ್ಲೂಕಿನ ಮೆಳ್ಳಗೆರಿಯ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ವಿದ್ಯಾರ್ಥಿನಿಯಾಗಿರುವ ಅಂಕಿತಾ ಅವರು 625 ಕ್ಕೆ 625 ಅಂಕ ಪಡೆದಿದ್ದಾರೆ. ಮಾಧ್ಯಮಗಳ ಜೊತೆಗೆ ಮಾತನಾಡಿರುವ ಅಂಕಿತಾ ಅವರು ವಿದ್ಯಾರ್ಥಿಗಳು ಯಶಸ್ವಿಯಾಗಿ ಎಕ್ಸಾಂನಲ್ಲಿ ಉತ್ತಮ ಅಂಕಗಳನ್ನು ಪಡೆದುಕೊಳ್ಳಬೇಕಾದ್ರೆ, ಸಾಮಾಜಿಕ ಜಾಲತಾಣ ಮತ್ತು ಮೊಬೈಲ್ ಬಳಕೆಯಿಂದ ದೂರವಿದ್ದಲ್ಲಿ ಸಾಧನೆ ಮಾಡುವುದರಲ್ಲಿ ಅನುಮಾನವಿಲ್ಲ ಅಂತ ಹೇಳಿದ್ದಾರೆ.

**ಮೊರರ್ಜಿ ಹಾಸ್ಟೆಲ್‌ನಲ್ಲಿ ಓದುತ್ತಿದ್ದ ಕಾರಣಕ್ಕೆ ನಮಗೆ ಮೊಬೈಲ್ ಬಳಕೆ ಮಾಡುವುದಕ್ಕೆ ಅವಕಾಶ ನೀಡುತ್ತ ಇರಲಿಲ್ಲ, ಇದಲ್ಲದೇ ಪಠ್ಯಕ್ಕೆ ಸಂಬಂಧಪಟ್ಟ ಮಾಹಿತಿಗಾಗಿ ನಾನು ಯ್ಯೂಟ್ಯೂಬ್ ಬಳಕೆ ಮಾಡುತ್ತಿದೆ. ನನ್ನ ಅಂಕಗಳನ್ನು ಹೆಚ್ಚು ತೆಗೆದಕೊಳ್ಳುವುದರಲ್ಲಿ ಹಾಸ್ಟೆಲ್ ಸಿಬ್ಬಂದಿಗಳು ಕೂಡ ನನಗೆ ಸಹಾಯ ಮಾಡಿದರು ಅಂಥ ಹೇಳಿದರು. ಇನ್ನೂ ಇದೇ ವೇಳೆ ಅವರು ಮುಂದೆ ನಾನು ಸೈನ್ಸ್‌ನಲ್ಲಿ ವಿದ್ಯಾಬ್ಯಾಸವನ್ನು ಮುಂದುವರೆಸುವ ಆಸೆಯನ್ನು ವ್ಯಕ್ತಪಡಿಸಿದ್ದು, ಇದಲ್ಲದೇ ಮುಂದೆ ಐಎಎಸ್ ಅಧಿಕಾರಿಯಾಗಬೇಕು ಅಂತ ಹೇಳಿದ್ದಾರೆ.**

## ವಿದ್ಯುತ್ ಸಮಸ್ಯೆ ನಿವಾರಣೆಗೆ ಬೆಸ್ಕಾಂನಿಂದ ವಾಟ್ಸಾಪ್ ಸಂಖ್ಯೆ ಬಿಡುಗಡೆ

• **ಉದಯವಾಹಿನಿ, ಬೆಂಗಳೂರು**


ಉದಯವಾಹಿನಿ ಚಿತ್ರ

ರಾಜ್ಯದಲ್ಲಿ ಮುಂಗಾರು ಮಳೆ ಆರಂಭಕ್ಕೂ ಮುನ್ನವೇ ಮಳೆಗಾಲದಲ್ಲಿ ವಿದ್ಯುತ್ ಸಮಸ್ಯೆ ಉಂಟಾದಾಗ ಅದನ್ನು ಪರಿಹರಿಸೋದಕ್ಕಾಗಿ ಬೆಸ್ಕಾಂನಿಂದ ತನ್ನ ಗ್ರಾಹಕರಿಗಾಗಿ ವಾಟ್ಸಾಪ್ ನಂಬರ್ ಬಿಡುಗಡೆ ಮಾಡಲಾಗಿದೆ.

ಈ ಬಗ್ಗೆ ಪತ್ರಿಕಾ ಪ್ರಕಟಣೆಯಲ್ಲಿ ಬೆಸ್ಕಾಂ ಮಾಹಿತಿ ಬಿಡುಗಡೆ ಮಾಡಿದ್ದು, ಬೆಸ್ಕಾಂ ವ್ಯಾಪ್ತಿಯಲ್ಲಿ ಕಳೆದ ಮೂರು ದಿನಗಳಿಂದ ಸುರಿದ ಗಾಳಿ-ಮಳೆಗೆ ವಿದ್ಯುತ್ ಕಂಬಗಳು ಮುರಿದು, ವಿದ್ಯುತ್ ಮೂಲ ಸೌಕರ್ಯಗಳು ಹಾನಿಗೊಳಗಾಗಿವೆ. ಹೀಗಾಗಿ ಬೆಸ್ಕಾಂ ಸಹಾಯವಾಣಿ 1912ಗೆ ದೂರುಗಳು ಹರಿದು ಬಂದಿದ್ದು, ಕರೆಗಳ ಒತ್ತಡದಿಂದಾಗಿ ಗ್ರಾಹಕರಿಗೆ 1912 ಸಂಪರ್ಕ ಸಾಧ್ಯವಾಗುತ್ತಿಲ್ಲ ಎಂದಿದೆ. ಮಳೆಗಾಲದಲ್ಲಿ ಗ್ರಾಹಕರ ವಿದ್ಯುತ್ ಸಮಸ್ಯೆಗಳನ್ನು ತ್ವರಿತವಾಗಿ ಪರಿಹರಿಸಲು ಬೆಸ್ಕಾಂ ವ್ಯಾಪ್ತಿಯ 8 ಜಿಲ್ಲೆಗಳ ಗ್ರಾಹಕರಿಗೆ ಈ ಕೆಳಕಂಡ ಪರ್ಯಾಯ ವಾಟ್ಸ್ ಆಪ್ ಸಂಖ್ಯೆಗಳನ್ನು ನೀಡಲಾಗಿದೆ. ವಾಟ್ಸ್ ಪ್ ಸಂಖ್ಯೆಗಳಿಗೆ ಗ್ರಾಹಕರು ಸಂದೇಶ ಹಾಗೂ ಛಾಯಚಿತ್ರಗಳನ್ನು ತಮ್ಮ ವಿಳಾಸದೊಂದಿಗೆ ಕಳುಹಿಸಿ ತಮ್ಮ ವಿದ್ಯುತ್ ಸಂಬಂಧಿತ ಸಮಸ್ಯೆಗಳಿಗೆ ಪರಿಹಾರ ಪಡೆಯಬಹುದಾಗಿದೆ. ಜೊತೆಗೆ ಎಸ್ ಎಂಎಸ್ ಗಳನ್ನು ಕಳುಹಿಸಲು ಬೆಸ್ಕಾಂ ಬೆಂಗಳೂರು ಮಹಾನಗರ ವ್ಯಾಪ್ತಿಯ ಗ್ರಾಹಕರಿಗೆ 12 ಮೊಬೈಲ್ ಸಂಖ್ಯೆಗಳನ್ನು ಕೂಡ ಒದಗಿಸಲಾಗಿದೆ ಎಂದು ತಿಳಿಸಿದೆ.

ಈ ಕೆಳಗಿನ ಮೊಬೈಲ್ ಸಂಖ್ಯೆಗಳು- ಕೇವಲ ಎಸ್‌ಎಂಎಸ್ ಗಳಿಗೆ ಮಾತ್ರ 9480816108, 9480816109, 948081 6110, 9480816111, 9480816112, 9480816113, 9480816114, 9480816115, 9480816116, 9480816117, 9480816118 ಮತ್ತು 9480816119.

### ಹೀಗಿದೆ ಜಿಲ್ಲಾವಾರು ವಾಟ್ಸ್ ಆಪ್ ಸಂಖ್ಯೆಗಳು

**ಬೆಂಗಳೂರು ಪೂರ್ವ- 8277884013, ಬೆಂಗಳೂರು ಪಶ್ಚಿಮ- 8277884012, ಬೆಂಗಳೂರು ಉತ್ತರ- 8277884014, ಬೆಂಗಳೂರು ದಕ್ಷಿಣ- 8277884011. ಕೋಲಾರ- 8277884015, ಚಿಕ್ಕಬಳ್ಳಾಪುರ- 8277884016, ಬೆಂಗಳೂರು ಗ್ರಾಮಾಂತರ- 8277884017, ರಾಮನಗರ- 8277884018, ತುಮಕೂರು- 8277884019, ಚಿತ್ರದುರ್ಗ- 8277884020 ಹಾಗೂ ದಾವಣಗೆರೆ- 8277884021. ಸುರಕ್ಷತೆ ಸಂಬಂಧಿಸಿದ ದೂರುಗಳಿಗೆ ವಾಟ್ಸ್ ಆಪ್ ಸಂಖ್ಯೆ - 9483191212, 9483191222 ಮತ್ತು ಬೆಸ್ಕಾಂ ಸಾಮಾನ್ಯ ವಾಟ್ಸ್ ಆಪ್ ಸಂಖ್ಯೆ- 9449844640.**

## ಸಂತ್ರಸ್ತೆಯನ್ನು ಮದುವೆಯಾಗಲು ಒಪ್ಪಿದ ಪೋಕ್ಸೊ ಆರೋಪ

• **ಉದಯವಾಹಿನಿ, ಬೆಂಗಳೂರು**



ಲೈಂಗಿಕ ಅಪರಾಧಗಳಿಂದ ಮಕ್ಕಳ ರಕ್ಷಣೆ (ಪೋಕ್ಸೊ) ಕಾಯ್ದೆಯ ಆರೋಪಿಗೆ ಕರ್ನಾಟಕ ಹೈಕೋರ್ಟ್ ಇತ್ತೀಚೆಗೆ ಜಾಮೀನು ನೀಡಿದೆ.

ಸಂತ್ರಸ್ತೆಯ ಪೋಷಕರು ಸಹ ಇದಕ್ಕೆ ಒಪ್ಪಿ ಅಫಿಡವಿಟ್ ಸಲ್ಲಿಸಿದರು. ನ್ಯಾಯಮೂರ್ತಿ ರಾಜೇಂದ್ರ ಬಾದಾಮಿಕರ್ ಅವರ ಏಕಸದಸ್ಯ ಪೀಠವು ಏಪ್ರಿಲ್ 18 ರಂದು 1 ಲಕ್ಷ ರೂ.ಗಳ ಬಾಂಡ್ ಸಲ್ಲಿಸಿದ ನಂತರ ವ್ಯಕ್ತಿಗೆ ಜಾಮೀನು ನೀಡಿತು. ಪ್ರಾಸಿಕ್ಯೂಷನ್ ಪ್ರಕಾರ, ಆರೋಪಿ ಮತ್ತು ಸಂತ್ರಸ್ತೆ ಶಾಲೆಯಿಂದಲೂ ಪರಸ್ಪರ ಪರಿಚಿತರಾಗಿದ್ದರು. ಮದುವೆಯ ನೆಪದಲ್ಲಿ ಬಾಲಕಿಯ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದಾನೆ ಎಂದು ಆರೋಪಿಸಲಾಗಿದೆ. ಅವಳು ಗರ್ಭಿಣಿಯಾದಾಗ ಮತ್ತು ವೈದ್ಯಕೀಯ ಕಾರಣಗಳಿಗಾಗಿ ಗರ್ಭಪಾತಕ್ಕೆ ಒಳಗಾಗಲು ಆಸ್ಪತ್ರೆಗೆ ಹೋದಾಗ, ವೈದ್ಯಕೀಯ ಅಧಿಕಾರಿ ಅವಳಿಗೆ ಕೇವಲ 17 ವರ್ಷ ಎಂದು ಕಂಡು ಹಿಡಿದರು. ಇದರ ಆಧಾರದ ಮೇಲೆ ಪೋಕ್ಸೊ ಕಾಯ್ದೆ ಸೇರಿದಂತೆ ಹಲವಾರು ಆರೋಪಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ. ದೂರಿನಲ್ಲಿ ಮಾಡಲಾದ ಆರೋಪಗಳು ಅರ್ಜಿದಾರರು ಮತ್ತು ಸಂತ್ರಸ್ತೆ ಶಾಲಾ ದಿನಗಳಿಂದಲೂ ಪ್ರೀತಿಸುತ್ತಿದ್ದಾರೆ ಎಂದು ಬಹಿರಂಗಪಡಿಸಿದೆ. ಘಟನೆ ನಡೆದ ಸ್ಥಳದ ಪ್ರಕಾರ, ಸಂತ್ರಸ್ತೆಯ ವಯಸ್ಸು 17 ವರ್ಷಕ್ಕಿಂತ ಹೆಚ್ಚಾಗಿದೆ. ಇದಲ್ಲದೆ, ಸಂತ್ರಸ್ತ ಹುಡುಗಿ ಮದುವೆ ವಯಸ್ಸು ದಾಟಿದ ಕೂಡಲೇ ಮದುವೆಯಾಗುವುದಾಗಿ ಆರೋಪಿ ಅಫಿಡವಿಟ್ ಸಲ್ಲಿಸಿದ್ದಾನೆ ಸಂತ್ರಸ್ತೆಯ ಪೋಷಕರು ಸಹ ಅಫಿಡವಿಟ್ ಸಲ್ಲಿಸಿದ್ದು, ಸಂತ್ರಸ್ತೆ ಮದುವೆ ವಯಸ್ಸು ದಾಟಿದ ತಕ್ಷಣ ಆರೋಪಿಯೊಂದಿಗೆ ಸಂತ್ರಸ್ತೆಯ ಮದುವೆಯನ್ನು ಮಾಡಲು ಸಿದ್ಧ ಎಂದು ಹೇಳಿದ್ದಾರೆ

## ಬಿಯರ್ ಕೊರತೆಯ ನಡುವೆಯೂ ಬೆಂಗಳೂರಿನಲ್ಲಿ ಮದ್ಯದ ಬೆಲೆ ಮತ್ತಷ್ಟು ಏರಿಕೆ ಸಾಧ್ಯತೆ: ಗ್ರಾಹಕರ ಆತಂಕ

• **ಉದಯವಾಹಿನಿ, ಬೆಂಗಳೂರು**

ನಗರದಲ್ಲಿ ನೀರಿನ ಬಿಕ್ಕಟ್ಟಿನ ನಂತರ, ಬೆಂಗಳೂರು ಈಗ ಬಿಯರ್ ಕೊರತೆಯನ್ನು ಎದುರಿಸುತ್ತಿದೆ, ಏಕೆಂದರೆ ಇತ್ತೀಚಿನ ದಿನಗಳಲ್ಲಿ ಹೆಚ್ಚುತ್ತಿರುವ ತಾಪಮಾನದಿಂದಾಗಿ ಬಿಯರ್ ಬೇಡಿಕೆ ಹೆಚ್ಚಾಗಿದೆ.



ಇತ್ತೀಚಿನ ವರದಿಗಳ ಪ್ರಕಾರ, ಬೆಂಗಳೂರಿನಲ್ಲಿ ಹೆಚ್ಚುತ್ತಿ ರುವ ಬಿಯರ್ ಬೇಡಿಕೆಯು ನಗರದ ಈ ಬಿಕ್ಕಟ್ಟಿಗೆ ಪ್ರಮುಖ ಕಾರಣವಾಗಿದೆ. ಬಿಯರ್ ಕೊರತೆಯಿಂದಾಗಿ, ಮದ್ಯದ ಬೆಲೆಗಳು ಹೆಚ್ಚಾಗುವ ಸಾಧ್ಯತೆಯಿದೆ, ಗ್ರಾಹಕರ ಮೇಲೆ ಪರಿಣಾಮ ಬೀರುತ್ತದೆ ಎಂದು ವರದಿಯಾಗಿದೆ. ನಗರದಲ್ಲಿ ಹೆಚ್ಚುತ್ತಿರುವ ಮದ್ಯದ ಬೆಲೆಗಳ ಬಗ್ಗೆ ಗ್ರಾಹಕರು ಕಳವಳ ವ್ಯಕ್ತಪಡಿಸಿದ್ದಾರೆ ಮತ್ತು ಬೆಲೆ ಏರಿಕೆಯಿಂದ ಅವರಿಗೆ ಹೆಚ್ಚು ಪರಿಣಾಮ ಬೀರುತ್ತದೆ ಎಂದು ಹೇಳಿದ್ದಾರೆ. ಬಿಸಿಗಾಳಿಯ ನಂತರ ಇತ್ತೀಚಿನ ದಿನಗಳಲ್ಲಿ ಪಬ್ಗಳು ಮತ್ತು ಬ್ರೂವರಿಗಳಲ್ಲಿ ಮದ್ಯದ ಬೇಡಿಕೆ ಹೆಚ್ಚಾಗಿದೆ ಎಂದು ನಂಬಲಾಗಿದೆ, ಇದು ಈ ವಾಣಿಜ್ಯ ಸಂಸ್ಥೆಗಳಲ್ಲಿ ಮದ್ಯದ ಕೊರತೆಗೆ ಕಾರಣವಾಗಿದೆ.

ಹೆಚ್ಚುತ್ತಿರುವ ಬೇಡಿಕೆ ಮತ್ತು ಬಿಯರ್ ಮಾರಾಟದಲ್ಲಿ ನಿರಂತರ ಹೆಚ್ಚಳದಿಂದಾಗಿ, ನಗರದಲ್ಲಿ ಅಗತ್ಯವಾದ ಮದ್ಯದ ಪೂರೈಕೆಯನ್ನು ಪೂರೈಸಲಾಗುತ್ತಿಲ್ಲ ಮತ್ತು ಹೆಚ್ಚುತ್ತಿರುವ ಬೇಡಿಕೆ ಮತ್ತು ಮಾರಾಟದ ಹೆಚ್ಚಳವು ಈ ಪರಿಸ್ಥಿತಿಗೆ ಕಾರಣವಾಗಿದೆ. ಆದಾಗ್ಯೂ, ಈ ಕೊರತೆಯನ್ನು ನೀಗಿಸಲು ಮತ್ತು ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತರಲು, ಬೆಂಗಳೂರಿನ ಬಿಯರ್ ಅಂಗಡಿಗಳಲ್ಲಿ ವಾರಾಂತ್ಯದ ಕೊಡುಗೆಗಳನ್ನು ನಿಲ್ಲಿಸಲು ನಗರದಲ್ಲಿ ವ್ಯವಸ್ಥೆ ಮಾಡಲಾಗುತ್ತಿದೆ.

## ಎಸ್‌ಎಸ್‌ಎಲ್‌ಸಿ ಜಿಲ್ಲಾವಾರು ಫಲಿತಾಂಶ ಪಟ್ಟಿ

• **ಉದಯವಾಹಿನಿ, ಬೆಂಗಳೂರು**


ಉದಯವಾಹಿನಿ ಚಿತ್ರ

2023-24ನೇ ಸಾಲಿನ ಎಸ್‌ಎಸ್‌ಎಲ್ ಸಿ ಪರೀಕ್ಷೆಯ ಫಲಿತಾಂಶ ಹೊರಬಿದ್ದಿದೆ. ಮಾ.25ರಿಂದ ಏ.6ರವರೆಗೆ ನಡೆದಿದ್ದ ಪರೀಕ್ಷೆಯಲ್ಲಿ ಶೇ.73.40 ರಷ್ಟು ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಈ ಬಾರಿಯ ಪರೀಕ್ಷೆಯಲ್ಲಿ ಉಡುಪಿ ಮೊದಲ ಸ್ಥಾನ ಪಡೆದಿದ್ದರೆ, ದಕ್ಷಿಣ ಕನ್ನಡ ಜಿಲ್ಲೆ ಎರಡನೇ ಸ್ಥಾನ ಪಡೆದಿದೆ. ಯಾದಗಿರಿ ಕೊನೆಯ ಸ್ಥಾನದಲ್ಲಿದೆ.

8.69 ಲಕ್ಷ ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು, 6,31,204 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ.

**2023-24ರ ಎಸ್‌ಎಸ್‌ಎಲ್ ಸಿ ಜಿಲ್ಲಾವಾರು ಫಲಿತಾಂಶ (ಶೇಕಡಾವಾರು)**

| | |
|---|---|
| 1 ಉಡುಪಿ | 94 |
| 2 ದಕ್ಷಿಣ ಕನ್ನಡ | 92.12 |
| 3 ಶಿವಮೊಗ್ಗ | 88.67 |
| 4 ಕೊಡಗು | 88.67 |
| 5 ಉತ್ತರ ಕನ್ನಡ | 86.54 |
| 6 ಹಾಸನ | 86.28 |
| 7 ಮೈಸೂರು | 85.5 |
| 8 ಶಿರಸಿ | 84.64 |
| 9 ಬೆಂಗಳೂರು ಗ್ರಾಮಾಂತರ | 83.67 |
| 10 ಚಿಕ್ಕಮಗಳೂರು | 83.39 |
| 11 ವಿಜಯಪುರ | 79.82 |
| 12 ಬೆಂಗಳೂರು ದಕ್ಷಿಣ | 79 |
| 13 ಬಾಗಲಕೋಟೆ | 77.92 |
| 14 ಬೆಂಗಳೂರು ಉತ್ತರ | 77.09 |
| 15 ಹಾವೇರಿ | 75.89 |
| 16 ತುಮಕೂರು | 75.16 |
| 17 ಗದಗ | 74.76 |

| | |
|---|---|
| 18 ಚಿಕ್ಕಬಳ್ಳಾಪುರ | 73.61 |
| 19 ಮಂಡ್ಯ | 73.59 |
| 20 ಕೋಲಾರ | 73.57 |
| 21 ಚಿತ್ರದುರ್ಗ | 72.85 |
| 22 ಧಾರವಾಡ | 72.67 |
| 23 ದಾವಣಗೆರೆ | 72.49 |
| 24 ಚಾಮರಾಜನಗರ | 71.59 |
| 25 ಚಿಕ್ಕೋಡಿ | 69.82 |
| 26 ರಾಮನಗರ | 69.53 |
| 27 ವಿಜಯನಗರ | 65.61 |
| 28 ಬಳ್ಳಾರಿ | 64.99 |
| 29 ಬೆಳಗಾವಿ | 64.93 |
| 30 ಮಧುಗಿರಿ | 62.44 |
| 31 ರಾಯಚೂರು | 61.2 |
| 32 ಕೊಪ್ಪಳ | 61.16 |
| 33 ಬೀದರ್ | 57.52 |
| 34 ಕಲಬುರಗಿ | 53.04 |
| 35 ಯಾದಗಿರಿ | 50.59 |

# ಪ್ರಜ್ವಲ್ ಬಂಧಿಸಿ ಕರೆತರಲು ವಿದೇಶಕ್ಕೆ ಎಸ್‌ಐಟಿ ತಂಡ

■ ರೆಡ್ ಕಾರ್ನರ್, ಬ್ಲೂ ಕಾರ್ನರ್ ನೋಟಿಸ್ ಜಾರಿ, 196 ರಾಷ್ಟ್ರಗಳಿಗೆ ಮಾಹಿತಿ ರವಾನಿಸಿರುವುದಾಗಿ ಇಂಟರ್ ಪೋಲ್ ಎಸ್‌ಐಟಿಗೆ ಮಾಹಿತಿ

• **ಉದಯವಾಹಿನಿ, ಬೆಂಗಳೂರು**

ಅಶ್ಲೀಲ ವಿಡಿಯೋ ಪ್ರಕರಣಕ್ಕೆ ಸಂಬಂಧಿಸಿದಂತೆ ವಿದೇಶದಲ್ಲಿರುವ ಸಂಸದ ಪ್ರಜ್ವಲ್ ರೇವಣ್ಣ ಅವರ ವಿರುದ್ಧ ಈಗಾಗಲೇ ರೆಡ್ ಕಾರ್ನರ್ ಹಾಗೂ ಬ್ಲೂ ಕಾರ್ನರ್ ನೋಟಿಸ್ ಜಾರಿ ಮಾಡಲಾಗಿದ್ದು, ಈ ಸಂಬಂಧ 196 ರಾಷ್ಟ್ರಗಳಿಗೆ ಮಾಹಿತಿ ರವಾನಿಸಿರುವುದಾಗಿ ಇಂಟರ್ ಪೋಲ್ ಎಸ್‌ಐಟಿಗೆ ಮಾಹಿತಿ ನೀಡಿದೆ.

ಇದೆಲ್ಲದರ ಮಧ್ಯ ಪ್ರಜ್ವಲ್ ಅವರನ್ನು ಬಂಧಿಸಲು ಕಳೆದ ಎರಡು ದಿನಗಳ ಹಿಂದೆ ಎಸ್‌ಐಟಿ ಒಂದು ತಂಡ ವಿದೇಶಕ್ಕೆ ತೆರಳಿದೆ ಎಂಬ ಮಾಹಿತಿ ಲಭ್ಯವಾಗಿದೆ.

ಅಶ್ಲೀಲ ವಿಡಿಯೋ ಪ್ರಕಾರಕ್ಕೆ ಸಂಬಂಧಿಸಿದಂತೆ ಹಾಸನ ಸಂಸದ ಪ್ರಜ್ವಲ್ ರೇವಣ್ಣ ಅವರ ಬಂಧನಕ್ಕೆ ಇದೀಗ ಎಸ್‌ಐಟಿ ಅಧಿಕಾರಿಗಳು ಅವರ ಬಂಧನಕ್ಕೆ ಬಲೆ ಬೀಸಿದ್ದು, ಕಳೆದ ಎರಡು ದಿನಗಳ ಹಿಂದೆ ಎಸ್‌ಐಟಿ ಒಂದು ತಂಡ ವಿದೇಶಕ್ಕೆ ತೆರಳಿದೆ. ಹಾಗಾಗಿ ವಿದೇಶದಲ್ಲಿ ರೇವಣ್ಣ ಸಿಕ್ಕರೆ ಬಹುತೇಕ ಅವರನ್ನು ಅಲ್ಲಿ ಬಂಧಿಸಲಿದ್ದಾರೆ ಎಂದು ಬಲ್ಲಮೂಲಗಳಿಂದ ತಿಳಿದು ಬಂದಿದೆ.

ಹೌದು ಅಶ್ಲೀಲ ವಿಡಿಯೋ ಪ್ರಕರಣಕ್ಕೆ ಸಂಬಂಧಿಸಿದಂತೆ ಎಸ್‌ಐಟಿ ಅಧಿಕಾರಿಗಳು ವಿಚಾರಣೆಗೆ ಹಾಜರಾಗುವಂತೆ ಪ್ರಜ್ವಲ್ ರೇವಣ್ಣಗೆ ನೋಟಿಸ್ ನೀಡಿದರು. ಆದರೆ ಪ್ರಜ್ವಲ್ ರೇವಣ್ಣ ವಿದೇಶದಲ್ಲಿರುವ ಕಾರಣ ನನಗೆ ಸಮಯಾವಕಾಶ ಕೊಡಿ ಎಂದು ತಮ್ಮ ವಕೀಲರ ಮೂಲಕ ಕೇಳಿಕೊಂಡಿದ್ದರು. ಇದೀಗ ಅವರ ಸಮಯಾವಕಾಶ ಅಂತ್ಯವಾಗಿದ್ದು, ಪ್ರಜ್ವಲ್ ಬಂಧನಕ್ಕೆ ಬಲೆ ಬೀಸಿದ ಎಸ್‌ಐಟಿ ಅಧಿಕಾರಿಗಳು ಒಂದು ಎಸ್‌ಐಟಿತಂಡ ವಿದೇಶಕೆ ಹೋಗಿರೋ ಬಗ್ಗೆ ಮಾಹಿತಿ ಸಿಕ್ಕಿದೆ. ಎರಡು ದಿನಗಳ ಹಿಂದೆ ಎಸ್‌ಐಟಿ ತಂಡ ವಿದೇಶಕ್ಕೆ ತೆರಳಿದ್ದಾರೆ. ಪ್ರಜ್ವಲ್ ಕೇಳಿದ ಸಮಯಾವಕಾಶ ಮುಗಿದ ಹಿನ್ನೆಲೆ ಸೊಸೈಟಿ ಅಧಿಕಾರಿಗಳು ಆಗಿದ್ದು ಎರಡು ದಿನಗಳ ಹಿಂದೆ ವಿದೇಶಕ್ಕೆ ಹೋಗಿರುವ ಬಗ್ಗೆ ಮಾಹಿತಿ ಲಭ್ಯವಾಗಿದೆ.

**ವಿದೇಶಕ್ಕೆ ತೆರಳಿದೆ ಮಾಹಿತಿ ಲಭ್ಯ**



**ಈಗಾಗಲೇ ಮಹಿಳೆ ಅಪಹರಣ ಪ್ರಕರಣದಲ್ಲಿ ಪ್ರಜ್ವಲ್ ರೇವಣ್ಣ ಅವರ ತಂದೆ ಹಾಸನ ಜಿಲ್ಲೆಯ ಹೊಳೆನರಸೀಪುರ ಜೆಡಿಎಸ್ ಶಾಸಕರಾಗಿರುವ ಎಚ್ ಡಿ ರೇವಣ್ಣ ಅವರು ಬೆಂಗಳೂರಿನ ಪರಪ್ಪನ ಅಗ್ರಹಾರ ಜೈಲಿನಲ್ಲಿದ್ದಾರೆ. ಇದೀಗ ಪ್ರಜ್ವಲ್ ರೇವಣ್ಣ ಅವರ ಬಂಧನಕ್ಕೆ ಎಸ್‌ಐಟಿ ಅಧಿಕಾರಿಗಳ ಒಂದು ತಂಡ ವಿದೇಶಕ್ಕೆ ತೆರಳಿದೆ ಒಂದು ವೇಳೆ ಅಲ್ಲಿಗೆ ಸಿಕ್ಕರೆ ಪ್ರಜ್ವಲ ರೇವಣ್ಣ ಅವರನ್ನು ವಿದೇಶದಲ್ಲಿಯೇ ಬಂಧಿಸಿ ಕರೆತರುವ ಸಾಧ್ಯತೆ ಇದೆ ಎನ್ನಲಾಗುತ್ತಿದೆ.**

ಸಂಸದ ಪ್ರಜ್ವಲ್ ರೇವಣ್ಣ ಬ್ಲೂ ಕಾರ್ನರ್ ನೋಟಿಸ್ ವಿಚಾರಕ್ಕೆ ಸಂಬಂಧಿಸಿದಂತೆ ಈಗಾಗ್ಲೇ 196 ರಾಷ್ಟ್ರಗಳಿಗೆ ಮಾಹಿತಿ ರವಾನಿಸಲಾಗಿದೆ.ಪ್ರಜ್ವಲ್ ರೇವಣ್ಣ ಬಗ್ಗೆ ಮಾಹಿತಿ ಸಿಕ್ಕರೆ ಹಂಚಿಕೊಳ್ಳುತ್ತೇವೆ ಎಂದು ಇಂಟರ್ ಪೋಲ್ ಮಾಹಿತಿ ರವಾನೆ ಬಗ್ಗೆ ಎಸ್‌ಐಟಿಗೆ ಮಾಹಿತಿ ನೀಡಿದೆ. ಪ್ರಜ್ವಲ್ ರೇವಣ್ಣ ಯಾವುದೇ ಏರ್ಪೋರ್ಟ್, ಬಂದರೂ, ಗಡಿಯಲ್ಲಿ ಕಾಣಿಸಿದರೆ ಮಾಹಿತಿ ನೀಡಲಾಗುತ್ತದೆ ಎಂದು ಇಂಟರ್ ಪೋಲ್ ಎಸ್‌ಐಟಿಗೆ ಮಾಹಿತಿ ನೀಡಿದೆ.ನೆನ್ನೆ ಸಂಜೆ ಎಸ್‌ಐಟಿಗೆ ಸಿಕ್ಕಿದೆ ಮಾಹಿತಿ ಲಭ್ಯವಾಗಿದೆ ಎಂದು ತಿಳಿದುಬಂದಿದೆ.

**ಬ್ಲೂ ಕಾರ್ನರ್ ಎ ನೋಟೀಸ್ ಮೂಲಕ ಸಂಸದ ಪ್ರಜ್ವಲ್ ರೇವಣ್ಣ ಯಾವ ದೇಶದಲ್ಲಿದ್ದಾರೆ ಅವರ ಚಲನ ವಲನಗಳು ಏನು ಅವರು ಏನು ಮಾಡುತ್ತಿದ್ದಾರೆ. ಒಂದು ದೇಶದಿಂದ ಮತ್ತೊಂದು ದೇಶಕ್ಕೆ ಯಾವಾಗ ಸಂಚರಿಸುತ್ತಾರೆ ಪ್ರತಿಯೊಂದು ವಿಷಯ ಕೂಡ ಎಂಟರ್ಪ್ರೈಟ್‌ನಿಂದ ಎಸ್‌ಐಟಿಗೆ ಮಾಹಿತಿ ಲಭ್ಯವಾಗುತ್ತದೆ. ಹಾಗಾಗಿ ಇದೀಗ ಎಂಟರ್ ಪೋಲ್ 196 ರಾಷ್ಟ್ರಗಳಿಗೆ ಮಾಹಿತಿ ಕಳುಹಿಸಿದೆ ಎಂದು ಎಸ್‌ಐಟಿಗೆ ಮಾಹಿತಿ ನೀಡಿದೆ.**

# ಹೆಚ್ಚುತ್ತಿರುವ ತಾಪಮಾನ: ಕ್ಷೀಣಿಸುತ್ತಿರುವ ಅಂತರ್ಜಲ

**• ಮಾವು, ತೆಂಗು, ಅಡಿಕೆ, ಸೀಬೆ, ಮೂಸಂಬಿ, ದಾಳಿಂಬೆ ಸೇರಿದಂತೆ ವಿವಿಧ ಬೆಳೆಗಳನ್ನು ಕಾಪಾಡಿಕೊಳ್ಳಲು ರೈತರು ಹರಸಾಹಸ**

• ಉದಯವಾಹಿನಿ ಪಾವಗಡ

ತಾಲ್ಲೂಕಿನಾದ್ಯಂತ ಒಂದೆಡೆ ತಾಪಮಾನ ಹೆಚ್ಚುತ್ತಿದ್ದರೆ, ಮತ್ತೊಂದೆಡೆ ಅಂತರ್ಜಲ ಮಟ್ಟ ಕುಸಿಯುತ್ತಿದೆ. ಇದರಿಂದಾಗಿ ತೋಟಗಳು ಒಣಗುತ್ತಿವೆ. ಮಾವು, ತೆಂಗು, ಅಡಿಕೆ, ಸೀಬೆ, ಮೂಸಂಬಿ, ದಾಳಿಂಬೆ ಸೇರಿದಂತೆ ವಿವಿಧ ಬೆಳೆಗಳನ್ನು ಕಾಪಾಡಿಕೊಳ್ಳಲು ರೈತರು ಹರಸಾಹಸ ಪಡುತ್ತಿದ್ದಾರೆ.



ಉದಯವಾಹಿನಿ ಚಿತ್ರ

ಕಳೆದ ವರ್ಷ ಅತ್ಯಲ್ಪ ಮಳೆಯಾಗಿದೆ. ಅತಿ ವೃಷ್ಟಿಯಾಗಿದ್ದಾಗ ಅನುಭವಿ ರೈತರು ಇನ್ನು 3 ರಿಂದ 4 ವರ್ಷಗಳ ಕಾಲ ಅಂತರ್ಜಲ ಉತ್ತಮವಾಗಿರುತ್ತದೆ ಎಂದು ವಿಶ್ಲೇಷಿಸಿದ್ದರು. ಕೆರೆ ತುಂಬಿ ಕೋಡಿ ಹರಿದ ಒಂದು ವರ್ಷದಲ್ಲಿಯೇ ಅಂತರ್ಜಲ ಮಟ್ಟ ಕುಸಿದಿರುವುದು ರೈತರ ಆತಂಕಕ್ಕೆ ಕಾರಣವಾಗಿದೆ.

2022ರಲ್ಲಿ ಉತ್ತಮ ಮಳೆ ಬಿದ್ದು ಕೆರೆಗಳು ತುಂಬಿದ ಕೂಡಲೆ ರೈತರಲ್ಲಿ ಇನ್ನೂ ಕೆಲ ವರ್ಷಗಳ ಕಾಲ ಕೊಳವೆ ಬಾವಿಗಳಲ್ಲಿ ನೀರು ಬತ್ತುವುದಿಲ್ಲ ಎಂಬ ಆತ್ಮ ವಿಶ್ವಾಸ ಮೂಡಿತು. ನೀರಾವರಿ ಮಾತ್ರವಲ್ಲದೆ ಮಳೆಯಾಶ್ರಿತ ಶೇಂಗಾ ಬೆಳೆಯುತ್ತಿದ್ದ ಪ್ರದೇಶ, ಬೀಳು ಬಿದ್ದಿದ್ದ ಜಮೀನು ಗಳಲ್ಲಿಯೂ ಕೊಳವೆ ಬಾವಿ ಕೊರೆಸಿ ಅಡಿಕೆ ನಾಟಿ ಮಾಡಲಾಯಿತು. ಅಡಿಕೆ, ಬಾಳೆ ಸಸಿಗಳನ್ನು ನೆಟ್ಟು ಜಮೀನುಗಳನ್ನು ತೋಟಗಳನ್ನಾಗಿ ಪರಿವರ್ತಿಸಲು ಆರಂಭಿಸಲಾಯಿತು.

**ತೋಟಗಳನ್ನು ಉಳಿಸಿಕೊಳ್ಳಲು ಅನಿವಾರ್ಯ**

ಏಕಾ ಏಕಿ ಒಂದು ವರ್ಷದಲ್ಲಿ ಕೊಳವೆ ಬಾವಿಗಳು ಬತ್ತುತ್ತಿರುವ ಹಿನ್ನೆಲೆ ಲಕ್ಷಾಂತರ ರೂ ಬಂಡವಾಳ ಹಾಕಿ ಹೊಸದಾಗಿ ತೋಟ ಕಟ್ಟಿರುವ ರೈತರು ಆತಂಕಕ್ಕೀಡಾಗಿದ್ದಾರೆ.

ತಾಲ್ಲೂಕಿನ ನಿಡಗಲ್ ಹೋಬಳಿ, ವೈಎನ್ ಹೊಸಕೋಟೆ ಹೋಬಳಿಯಲ್ಲಿ ಹೆಚ್ಚಿನ ಅಡಿಕೆ ತೋಟಗಳಿವೆ. ಕಸಬಾ ಹೋಬಳಿ, ನಾಗಲಮಡಿಕೆ ಹೋಬಳಿಯಲ್ಲಿ ಕಡಿಮೆ ಪ್ರದೇಶದಲ್ಲಿ ಅಡಿಕೆ ತೋಟಗಳಿವೆ. ಅಡಿಕೆ ತೋಟಗಳಿರುವ ಪ್ರದೇಶದಲ್ಲಿ ಹೆಚ್ಚಿನ ಕೊಳವೆ ಬಾವಿ ಕೊರೆಸಲಾಗುತ್ತಿದೆ. ನಾಗಲಮಡಿಕೆ ಹೋಬಳಿಯಲ್ಲಿ ಮೂಸಂಬಿ, ಸೀಬೆ, ಮಾವು ಬೆಳೆಗಳನ್ನು ಬೆಳೆಯಲಾಗುತ್ತಿದೆ.

ತೋಟಗಳನ್ನು ಉಳಿಸಿಕೊಳ್ಳಲು ಅನಿವಾರ್ಯವಾಗಿ ಕೊಳವೆ ಬಾವಿ ಕೊರೆಸಬೇಕಿದೆ.

ಕೊಳವೆ ಬಾವಿ ಕೊರೆಸಿದರೂ ನೀರು ಸಿಗುತ್ತದೆ ಎಂಬ ಖಾತರಿ ಇಲ್ಲ. ನೀರು ಸಿಕ್ಕರೂ ಯಾವಾಗ ಮತ್ತೆ ಕೊಳವೆ ಬಾವಿ ಬತ್ತುತ್ತದೆಯೊ ಎಂಬ ಆತಂಕ ತಾಲ್ಲೂಕಿನ ರೈತರನ್ನು ಕಾಡುತ್ತಿದೆ. 800 ರಿಂದ 1,000 ಅಡಿ ಕೊರೆಸಿದರೂ ನೀರು ಸಿಗದೆ ಒಂದರ ಹಿಂದೆ ಮತ್ತೊಂದು ಸರಣಿ ಕೊಳವೆ ಬಾವಿಗಳನ್ನು ಕೊರೆಸಿ ಸಾಲದ ಹೊರೆ ಹೆಚ್ಚಿಸಿಕೊಂಡಿರುವ ಸಾಕಷ್ಟು ನಿದರ್ಶನಗಳಿವೆ.

ಈ ಹಿಂದೆ ಒಂದು ಅಡಿಗೆ 92 ರಿಂದ 95 ಇದ್ದ ದರ ಏಕಾಏಕಿ 110-115ಕ್ಕೆ ಏರಿಕೆ ಮಾಡಲಾಗಿದೆ. 300 ರಿಂದ 500 ಅಡಿಗೆ ಮತ್ತೆ 10 ಹೆಚ್ಚಿಸಲಾಗುತ್ತದೆ. ನಂತರ ಪ್ರತಿ 100 ಅಡಿಗೆ 15 ರಿಂದ 25 ಹೆಚ್ಚಿಸಲಾಗುತ್ತದೆ. 1,000 ಅಡಿ ಒಂದು ಕೊಳವೆ ಬಾವಿ ಕೊರೆಸಲು 1.40 ಲಕ್ಷ ಖರ್ಚಾಗುತ್ತದೆ.

### ಸಾಲಗಾರನಾಗಬೇಕಾಗುತ್ತದೆ

**ಪಾಯಿಂಟ್ ಮಾಡುವವರಿಗೆ ಬೇಡಿಕೆ: ಕೊಳವೆ ಬಾವಿ ಕೊರೆಸಲು ಸೂಕ್ತ ಪಾಯಿಂಟ್ ಹುಡುಕಿಕೊಡುವವರಿಗೆ ತಾಲ್ಲೂಕಿನಾದ್ಯಂತ ಬೇಡಿಕೆ ಹೆಚ್ಚಿದೆ. ತೆಂಗಿನಕಾಯಿ, ಕಟ್ಟಿಗೆ, ತಾಮ್ರದ ಕಡ್ಡಿಗಳು, ಇಟ್ಟಿಗೆ, ಕಲ್ಲು ಇತ್ಯಾದಿ ಬಳಸಿ ನೀರು ಸಿಗುವ ಸ್ಥಳ ನಿಗದಿಪಡಿಸಲಾಗುತ್ತದೆ. ಇತ್ತೀಚೆಗೆ ವಿವಿಧ ತಂತ್ರಜ್ಞಾನ, ದಿಶಂಕ್ ತಂತ್ರಾಂಶ ಬಳಸಿ ಪಾಯಿಂಟ್ ನಿಗದಿಪಡಿಸಲಾಗುತ್ತಿದೆ. ಸ್ಥಳೀಯರ ಜತೆಗೆ ಬೆಂಗಳೂರು, ಚಿತ್ರದುರ್ಗ, ದಾವಣಗೆರೆ ಸೇರಿದಂತೆ ವಿವಿಧೆಡೆಯಿಂದ ಪಾಯಿಂಟ್ ಮಾಡಿಸಲು ಕರೆತರಲಾಗುತ್ತಿದೆ.**

**ಈ ಹಿಂದೆ ಸಾವಿರ ಅಡಿ ಕೊಳವೆ ಬಾವಿ ಕೊರೆಸಲು 80 ರಿಂದ 1 ಲಕ್ಷ ಆಗುತ್ತಿತ್ತು. ಇದೀಗ 1.40 ಲಕ್ಷದಿಂದ 1.50 ಲಕ್ಷ ಆಗುತ್ತದೆ. ಬೆಳೆ ಉಳಿಸಿಕೊಳ್ಳಲು ಚಿನ್ನಾಭರಣ ಅಡ ಇಟ್ಟು ಬೋರ್‌ವೆಲ್ ಕೊರೆಸುವ ಸ್ಥಿತಿ ಇದೆ ಎನ್ನುತ್ತಾರೆ ಕಸಬಾ ಹೋಬಳಿ ರೈತ**

**-ಹನುಮಂತರಾಯಪ್ಪ**

### ಬೆಲೆ ಏರಿಕೆ, ರೈತರ ಅಸಮಾಧಾನ

**ಕಳೆದ ವರ್ಷವೂ ಡೀಸೆಲ್ ಬೆಲೆ ಈಗಿರುವಷ್ಟೆ ಇತ್ತು. ಡೀಸೆಲ್ ಬೆಲೆಯಲ್ಲಿ ಗಣನೀಯ ಏರಿಕೆಯಾಗದಿದ್ದರೂ ಬೋರ್‌ವೆಲ್ ಲಾರಿ ಮಾಲೀಕರು ಸಭೆ ಸೇರಿ ಬೆಲೆ ಏರಿಸಿದ್ದಾರೆ. ಅಧಿಕಾರಿಗಳು, ಜನಪ್ರತಿನಿಧಿಗಳು ಈ ಬಗ್ಗೆ ರೈತರ ಸಹಾಯಕ್ಕೆ ಬಾರದಿರುವುದು ಬೇಸರದ ಸಂಗತಿ ಎಂದು ರೈತರು ಅಸಮಾಧಾನ ವ್ಯಕ್ತಪಡಿಸುತ್ತಿದ್ದಾರೆ.**


---

## ಕಾಯಕ ನಿಷ್ಠೆ ಧರ್ಮದ ಬುನಾದಿಯಾಗಬೇಕು

• ಉದಯವಾಹಿನಿ ತುಮಕೂರು

ಕಾಯಕ ನಿಷ್ಠೆ ಧರ್ಮದ ಬುನಾದಿಯಾಗಬೇಕು ಎಂದು ಬಲವಾಗಿ ನಂಬಿದ್ದ ಬಸವಣ್ಣ ತಮ್ಮ ವಚನಗಳ ಮೂಲಕ ಕಾಯಕವೇ ಕೈಲಾಸ, ದಯವೇ ಧರ್ಮದ ಮೂಲ, ಅಯ್ಯಾ ಎಂದರೆ ಸ್ವರ್ಗ ಎಲವೋ ಎಂದರೆ ನರಕ ಎಂದು ಸಾರುವ ಮೂಲಕ ಮಾನವತಾ ವಾದಕ್ಕೆ ಸಾಹಿತ್ಯದ ಸ್ಪರ್ಶ ನೀಡಿ, ಕನ್ನಡ ಸಾಹಿತ್ಯಕ್ಕೆ ವಚನಗಳ ಮೂಲಕ ಅಪೂರ್ವ ಕೊಡುಗೆ ನೀಡಿದ್ದರು ಎಂದು ನಿವೃತ್ತ ಇಂಜಿನಿಯರ್ ಮತ್ತು ಸಾಹಿತಿಗಳಾದ ಡಾ. ಗಂಗಾಧರ ಕೊಡ್ಲಿಯವರು ನುಡಿದರು.

ಅವರು ನಗರದ ಮುರುಘ ರಾಜೇಂದ್ರ ಸಭಾಂಗಣದಲ್ಲಿ ಬಸವಕೇಂದ್ರ ಏರ್ಪಡಿಸಿದ್ದ ಬಸವ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಕನ್ನಡ ನಾಡು ಕಂಡ ಮೊಟ್ಟಮೊದಲ ಅನುಭಾವಿಯಾಗಿದ್ದ ಅಲ್ಲಮಪ್ರಭು, ದೈವೀ ಅನುಭವವನ್ನು ಸೂಚಿಸಲು ಭಾರತೀಯ ವೇದಾಂತ ಪರಂಪರೆಯಲ್ಲಿ ಸೂಕ್ತ ಪದ ಇಲ್ಲದೇ ಇದ್ದ ಕಾಲದಲ್ಲಿ ಅನುಭಾವ ಎನ್ನುವ ಪದವನ್ನು ಟಂಕಿಸಿದರು. ಇದು ಭಾರತೀಯ ವೇದಾಂತ ಸಾಹಿತ್ಯಕ್ಕೆ ಕನ್ನಡ ವಚನಕಾರರ ಬಹುದೊಡ್ಡ ಕೊಡುಗೆಯಾಗಿದೆ ಎಂದರು. ಆಯುರ್ವೇದ ವೈದ್ಯರು ಮತ್ತು ಸಂಶೋಧಕರಾದ ಡಾ. ಬಿ.ನಂಜುಡ ಸ್ವಾಮಿಯವರು ಉಪನ್ಯಾಸ ನೀಡಿ, ಬಿಜ್ಜಳ ಮಹಾರಾಜರ ಪ್ರಧಾನಿಯಾಗಿದ್ದ ಬಸವಣ್ಣನವರು ರಾಜಪ್ರಭುತ್ವದ ದಬ್ಬಾಳಿಕೆಯ ವಿರುದ್ಧ ಜನಸಾಮಾನ್ಯರ ಪರವಾಗಿ ಹೋರಾಡಿದ ಮಹಾಪುರುಷ ಬಸವಣ್ಣನವರ ಅರಿವು, ಆಚಾರ, ಕಾಯಕ ಮತ್ತು ದಾಸೋಗಳಂಥಹ ತತ್ವ ಸಿದ್ಧಾಂತಗಳನ್ನು ನೀಡಿದರು. ದೇಹವನ್ನೇ ದೇವಾಲಯ ಮಾಡಿ ಅಲ್ಲಿಯವರೆಗೆ ಬೃಹದಾಕಾರವಾಗಿ ಬೆಳೆದಿದ್ದ ದೇವಾಲಯ ಸಂಸ್ಕೃತಿಗೆ ಕೊಡಲಿ ಪೆಟ್ಟನ್ನು ನೀಡಿ ಸ್ಥಾವರಕಳಿವುಂಟು ಜಂಗಮಕ್ಕಳಿವಿಲ್ಲ ಎಂದು ಹೇಳುವ ಮೂಲಕ ಅರಿವಿಗೆ ಹೆಚ್ಚು ಪ್ರಾಮುಖ್ಯತೆ ನೀಡಿದರು ಎಂದು ತಿಳಿಸಿದರು.



ಉದಯವಾಹಿನಿ ಚಿತ್ರ

ಸಭೆಯ ಅಧ್ಯಕ್ಷತೆಯನ್ನು ಸಿದ್ದಗಂಗಮ್ಮ ವಹಿಸಿದ್ದರು. ವೇದಿಕೆಯಲ್ಲಿ ಬಸವಕೇಂದ್ರದ ಮಾರ್ಗದರ್ಶಕರಾದ ಡಾ. ಡಿ.ಎನ್.ಯೋಗೀಶ್ವರಪ್ಪ, ಕೈಗಾರಿಕೋದ್ಯಮಿ ಡಿ.ವಿ. ಶಿವಾನಂದ್, ಹುಬ್ಬಳ್ಳಿ ಮಠದ ಅಕ್ಕನಾಗಮ್ಮ, ಕಮಲಮ್ಮ ತಾಯಿ ಹಾಜರಿದ್ದರು. ನಾಗಭೂಷಣ್ ಸ್ವಾಗತಿಸಿದರು, ಆಶಾ ನಿರಂಜನ್ ವಂದಿಸಿದರು, ಕಾರ್ಯದರ್ಶಿ ಚಂದ್ರಶೇಖರ್ ನಿರೂಪಿಸಿದರು.

## ಶೇ 69.53ರಷ್ಟು ತೇರ್ಗಡೆ ರಾಮನಗರಕ್ಕೆ 26ನೇ ಸ್ಥಾನ

• ಉದಯವಾಹಿನಿ ರಾಮನಗರ

ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಯಲ್ಲಿ ಶೇ 69.53ರಷ್ಟು ಫಲಿತಾಂಶ ಪಡೆದಿರುವ ಜಿಲ್ಲೆಯು ರಾಜ್ಯಮಟ್ಟದಲ್ಲಿ 26ನೇ ಸ್ಥಾನ ಪಡೆದಿದೆ.ಕಳೆದ 2022-23ನೇ ಶೈಕ್ಷಣಿಕ ವರ್ಷದಲ್ಲಿ ಶೇ 89.90ರಷ್ಟು ಫಲಿತಾಂಶದೊಂದಿಗೆ 21ನೇ ಸ್ಥಾನ ಪಡೆದಿದ್ದ ಜಿಲ್ಲೆಯ ಫಲಿತಾಂಶ ಈ ಸಲ 5 ಸ್ಥಾನಗಳಷ್ಟು ಕುಸಿತ ಕಂಡಿದೆ. ಜಿಲ್ಲೆಯಲ್ಲಿ 13,088 ವಿದ್ಯಾರ್ಥಿಗಳು ಎಸ್‌ಎಸ್‌ಎಲ್‌ಸಿ ಪರೀಕ್ಷೆ ಎದುರಿಸಿದ್ದು, ಈ ಪೈಕಿ 9,100 ಮಂದಿ ಪಾಸಾಗಿದ್ದಾರೆ.

ಇದೇ ಮೊದಲ ಬಾರಿಗೆ ಪರೀಕ್ಷೆಗೆ ವೆಬ್ ಕಾಸ್ಟಿಂಗ್ ವ್ಯವಸ್ಥೆ ಅಳವಡಿಸಿದ್ದು ಸಹ ಫಲಿತಾಂಶದಲ್ಲಿ ವ್ಯತ್ಯಾಸವಾಗಲು ಕಾರಣ ಎನ್ನಲಾಗಿದೆ.



ಉದಯವಾಹಿನಿ ಚಿತ್ರ

## ಕಟ್ಟಡ ತ್ಯಾಜ್ಯ ವಿಲೇವಾರಿ: ಪಾಲಿಕೆಗಿಲ್ಲ ಕಾಳಜಿ

• ಉದಯವಾಹಿನಿ ಮೈಸೂರು

ನಗರದ ಜಲಮೂಲಗಳನ್ನು ಉಳಿಸುವ ಇಚ್ಛಾಶಕ್ತಿಯನ್ನು ಪಾಲಿಕೆ ಪ್ರದರ್ಶಿಸುತ್ತಿಲ್ಲ. ಪ್ರತಿ ಬಾರಿಯ ಬಜೆಟ್‌ನಲ್ಲೂ ಕಟ್ಟಡ ತ್ಯಾಜ್ಯ ವಿಲೇವಾರಿಗೆ ಹಣ ನಿಗದಿ ಮಾಡುವ ಪಾಲಿಕೆಯು ನಿರ್ಮಾಣ ಕಾರ್ಯಕ್ಕೆ ಮುಂದಾಗಿಲ್ಲ. ಹೀಗಾಗಿ ನಗರ ಸುತ್ತಮುತ್ತಲ 'ಜಲನಿಧಿ' ನಾಶವಾಗುತ್ತಿದೆ.

3 ವರ್ಷದ ಹಿಂದೆಯೇ ಸಾತಗಳ್ಳಿಯಲ್ಲಿ 9 ಎಕರೆ 20 ಗುಂಟೆ ಜಾಗವನ್ನು ಗುರುತಿಸಲಾಗಿತ್ತು. ಕಾಂಪೌಂಡ್ ನಿರ್ಮಾಣ ಕಾಮಗಾರಿ ನಡೆದಿತ್ತು. ವಿಸ್ತೃತ ಯೋಜನಾ ವರದಿಯೂ ತಯಾರಾಗಿದ್ದರೂ ಅನುಷ್ಠಾನಗೊಳ್ಳಲಿಲ್ಲ. ಈ ವರ್ಷದ ಫೆ.17ರಂದು ಮಂಡಿಸಿದ ಪಾಲಿಕೆ ಬಜೆಟ್‌ನಲ್ಲಿ 11.66 ಕೋಟಿ ಮೀಸಲಿಡಲಾಗಿದೆ. ಆದರೆ, ಯೋಜನೆ ಕಾರ್ಯಾರಂಭವಾಗಿಲ್ಲ.

ಯೋಜನೆ ಅನುಷ್ಠಾನಕ್ಕೆ ಕೇಂದ್ರ ಸರ್ಕಾರದಿಂದ 1.94 ಕೋಟಿ, ರಾಜ್ಯ ಸರ್ಕಾರದಿಂದ 1.29 ಕೋಟಿ, ಪಾಲಿಕೆ ನಿಧಿಯಿಂದ 8.34 ಕೋಟಿ ಅನುದಾನ ಹರಿದು ಬರಲಿದೆಯೆಂದು ಬಜೆಟ್‌ನಲ್ಲಿ ಹೇಳಲಾಗಿದೆ. ಆದರೆ, ಘಟಕವು ಕಾರ್ಯಾಚರಿಸುವ ವೇಳೆಗೆ ನಗರ ಹಾಗೂ ಮೈಸೂರು ತಾಲ್ಲೂಕಿನ ಜಲಮೂಲಗಳಾದ ಕೆರೆ- ಕಟ್ಟೆ- ಕುಂಟೆಗಳು ಮುಚ್ಚಿ ಹೋಗುವ ಆತಂಕ ಪರಿಸರ ತಜ್ಞರದ್ದು.



ಉದಯವಾಹಿನಿ ಚಿತ್ರ

ರಿಂಗ್ ರಸ್ತೆಯ ಇಕ್ಕೆಲಗಳುದ್ದಕ್ಕೂ ಇರುವ ಹಳ್ಳದ ಭಾಗಗಳಲ್ಲಿ ಕಟ್ಟಡ ತ್ಯಾಜ್ಯ ಶೇಖರಣೆಗೊಂಡಿದೆ. ನಗರದ ಮಧ್ಯಭಾಗದಲ್ಲಿಯೇ ಇರುವ ಕುಕ್ಕರಹಳ್ಳಿ ಕೆರೆಯ ವಿಶ್ವಮಾನವ ಜೋಡಿ ರಸ್ತೆಗೆ ಹೊಂದಿಕೊಂಡಂತಿದ್ದ ಕೆರೆ ಕೋಡಿ ಜಾಗದಿಂದ ದೇವಯ್ಯನ ಕೊಳದವರೆಗೂ ಇದ್ದ ಹಳ್ಳದ ಭಾಗಕ್ಕೆ ತ್ಯಾಜ್ಯ ತುಂಬಿರುವುದು ಕಣ್ಣ ಮುಂದಿದೆ. ಅಲ್ಲಿ ಕಟ್ಟಡ, ಕಾಂಪೌಂಡ್‌ಗಳೂ ಎದ್ದಿವೆ' ಎನ್ನುತ್ತಾರೆ ಪರಿಸರ ತಜ್ಞ ಶೈಲಜೇಶ.

---

## ಗುಡಿಸಲು ಕಿತ್ತು ಐದು ವರ್ಷ ಕಳೆದರೂ ಮಂಜೂರಾಗದ ಮನೆ

• ಉದಯವಾಹಿನಿ ಸಾದಲಿ

ಗುಡಿಸಲು ಮುಕ್ತ ಗ್ರಾಮ ನಿರ್ಮಾಣಕ್ಕೆ ಸರ್ಕಾರ ಹಲವು ವಸತಿ ಯೋಜನೆ ಜಾರಿಗೊಳಿಸಿದೆ. ಇದೇ ಯೋಜನೆಯನ್ನು ನಂಬಿಕೊಂಡ ಬಡ ಪರಿಶಿಷ್ಟ ಕುಟುಂಬವೊಂದು ಇದ್ದ ಗುಡಿಸಲನ್ನು ಕಿತ್ತು ಹಾಕಿ ಐದು ವರ್ಷ ಕಳೆದಿದೆ. ಆದರೆ ಇದುವರೆಗೆ ಮನೆ ಮಂಜೂರು ಆಗಿಲ್ಲ.



ಉದಯವಾಹಿನಿ ಚಿತ್ರ

**ಕುಟುಂಬದ ಸ್ಥಿತಿ ಅತಂತ್ರ**

ತಾಲ್ಲೂಕಿನ ಸಾದಲಿ ಹೋಬಳಿ ತಲಕಾಯಲಬೆಟ್ಟ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಜಿ.ನಕ್ಕಲಹಳ್ಳಿಯಲ್ಲಿ ಮಂಜುನಾಥ್ -ಚೈತ್ರಾ ದಂಪತಿ ಗುಡಿಸಲಿನಲ್ಲಿ ವಾಸವಿದ್ದರೂ, ಪಂಚಾಯಿತಿ ಸದಸ್ಯರೊಬ್ಬರು ವಸತಿ ಯೋಜನೆಯಡಿ ಮನೆ ನಿರ್ಮಾಣಕ್ಕೆ ಸಹಾಯ ಧನ ಕೊಡಿಸುವುದಾಗಿ ಭರವಸೆ ನೀಡಿದ್ದರು.

ಇದರಿಂದ 'ಅರಸನನ್ನು ನಂಬಿಕೊಂಡು ಪುರುಷನನ್ನು ಕೈಬಿಟ್ಟರು' ಎಂಬ ಗಾದೆಯಂತೆ ಚೈತ್ರಾ -ಮಂಜುನಾಥ್ ಗುಡಿಸಲು ಕಿತ್ತು ಹಾಕಿ, ಮನೆ ನಿರ್ಮಾಣಕ್ಕೆ ಅಡಿಗಲ್ಲು ಹಾಕಿದರು.

ಐದು ವರ್ಷದಿಂದ ಸಹಾಯಧನ ಬಾರದ ಕಾರಣ ಅಡಿಪಾಯ ಕಾಮಗಾರಿ ಬಿಟ್ಟರೆ, ಬೇರೇನೂ ಕೆಲಸ ಆಗಿಲ್ಲ. ಪರಿಶಿಷ್ಟ ಪಂಗಡಕ್ಕೆ ಸೇರಿದ ಚೈತ್ರ-ಮಂಜುನಾಥ್ ದಂಪತಿಗೆ ಇಬ್ಬರು ಹೆಣ್ಣು ಮಕ್ಕಳು ಇದ್ದಾರೆ. ಕೆಲ ವರ್ಷದಿಂದ ಈ ದಂಪತಿ ತಮ್ಮ ಅತ್ತೆಯ ಮನೆಯಲ್ಲಿ ವಾಸವಿದ್ದಾರೆ. ಈಗ ಅವರು ಮನೆ ಖಾಲಿ ಮಾಡಲು ಹೇಳಿತ್ತಿದ್ದು, ಈಗ ದಂಪತಿಗೆ ಎಲ್ಲಿ ಹೋಗುವುದು ಎಂಬ ಚಿಂತೆ ಶುರುವಾಗಿದೆ.

### ನಾನು ಎಲ್ಲಿಗೆ ಹೋಗಬೇಕು?

**ತಲಕಾಯಲಬೆಟ್ಟ ಗ್ರಾಮ ಪಂಚಾಯಿತಿ ಕರವಸೂಲಿಗಾರರು ಪಾಯ ಹಾಕಿದ್ದ ಸ್ಥಳದ ಜಿಪಿಎಸ್ ಫೋಟೋ ತೆಗೆದುಕೊಂಡು ಹೋಗಿ ಸುಮಾರು ಐದು ವರ್ಷ ಕಳೆದರೂ ಇದುವರೆಗೂ ಮನೆ ಮಂಜೂರು ಮಾಡಿಲ್ಲ. ಗ್ರಾಮ ಪಂಚಾಯಿತಿ ಸದಸ್ಯರು ಮನೆ ಮಂಜೂರು ಮಾಡಲು ಸರ್ಕಾರದಿಂದ ಮನೆಗಳು ಬಂದಿಲ್ಲ ಎಂದು ಹೇಳುತ್ತಿದ್ದಾರೆ. ನಾನು ಐದು ವರ್ಷಗಳಿಂದ ನಮ್ಮ ಅತ್ತೆಯವರ ಮನೆಯಲ್ಲಿ ವಾಸ ಇದ್ದೇನೆ. ಈಗ ಮನೆ ಖಾಲಿ ಮಾಡಲು ಹೇಳುತ್ತಿದ್ದಾರೆ. ನಾನು ಎಲ್ಲಿಗೆ ಹೋಗಬೇಕು?. ದಿಕ್ಕು ತೋಚದಂತಾಗಿದೆ' ಮಂಜುನಾಥ್ ಅಳಲು ತೋಡಿಕೊಂಡರು.**

## ಹಣ್ಣು, ಎಳನೀರು ಮತ್ತು ನೆರಳಿಗೆ ಹುಡುಕಾಟ

• ಉದಯವಾಹಿನಿ ಯಳಂದೂರು

ತಾಲ್ಲೂಕಿನಲ್ಲಿ ಮಳೆ ಕೈಕೊಟ್ಟಿದೆ. ದಿನದಿಂದ ದಿನಕ್ಕೆ ತಾಪಮಾನ ಹೆಚ್ಚಾಗುತ್ತಿದೆ. ಬಿಸಿಗಾಳಿಯೂ ಬೀಸುತ್ತಿದೆ. ಈ ನಡುವೆ ಸಂಜೆ ವೇಳೆ ಮೇಘರಾಜ ಹಾಜರಿ ಹಾಕಿ ಸಾಗುತ್ತಿದ್ದಾನೆ. ವರುಣನಿಗೆ ಹರಕೆ, ಪೂಜೆ ಸಲ್ಲಿಕೆಯಾಗುತ್ತಿದೆ. ದಾಹ ನೀಗಿಸಿಕೊಳ್ಳಲು ಎಳನೀರು, ಪಾನೀಯ ಮತ್ತು ಹಣ್ಣು ಸೇವನೆಗೂ ಜನ ಮುಂದಾಗಿದ್ದು, ಇವುಗಳನ್ನು ಕೊಳ್ಳಲು ಬೆಲೆ ಏರಿಕೆಯ ಬಿಸಿಯೂ ನಾಗರಿಕರನ್ನು ಕಾಡಿದೆ.

ವಿವಿಧೆಡೆ ಮಳೆ ಬಂದಿದೆ. ಗ್ರಾಮೀಣ ಪ್ರದೇಶದಲ್ಲಿ ಹೆಸರಿಗಷ್ಟೇ ನಾಲ್ಕು ಹನಿಯ ಸಿಂಚನವಾಗಿದೆ. ಸಂಜೆ ಕೋಲ್ಮಿಂಚು, ಗುಡುಗು, ಗಾಳಿ ಅಬ್ಬರ ಕಂಡುಬಂದರೂ ವರುಣನನ್ನು ಕರೆತಂದಿಲ್ಲ. ಸುಡುಬಿಸಿಲು ಮತ್ತು ಬಿಸಿಗಾಳಿ 38-40 ಡಿಗ್ರಿ ಸೆಲ್ಸಿಯಸ್ ಇದ್ದು, ಜನ ಸಮುದಾಯ ಬಿಸಿಲ ರವಕ್ಕೆ ತತ್ತರಿಸುವಂತೆ ಆಗಿದೆ. ದೇಹ ತಂಪು ಮಾಡಿಕೊಳ್ಳಲು ಹಣ್ಣಿನ ರಸ, ಎಳನೀರು, ಕಿತ್ತಳೆ, ಮೂಸಂಬಿ ಸೇವನೆಗೆ ಮುಂದಾಗಿದ್ದಾರೆ. ಸಾರ್ವಜನಿಕ ಸ್ಥಳಗಳಲ್ಲಿ ಮಜ್ಜಿಗೆ, ಜ್ಯೂಸ್, ಕಬ್ಬಿನಹಾಲು ಕುಡಿದು ದೇಹದ ಉಷ್ಣಾಂಶ ಇಳಿಸಿಕೊಳ್ಳಲು ಪರದಾಡುತ್ತಿದ್ದಾರೆ. ಕಲ್ಲಂಗಡಿ, ಖರಬೂಜ, ನಿಂಬೆ ಷರಬತ್ತು ಅಂಗಡಿಗಳ ಮುಂದೆ ಜನರ ದಟ್ಟಣೆಯೂ ಕಂಡುಬರುತ್ತಿದೆ.



ಉದಯವಾಹಿನಿ ಚಿತ್ರ

### ಪೂರೈಕೆಯೂ ತಗ್ಗಿದೆ

**ಈಗ ಎಳನೀರು ಇಳುವರಿ ಕುಸಿದಿದ್ದು, ಸಣ್ಣ ಗಾತ್ರದ ಎಳನೀರಿಗೆ 40 ನೀಡಬೇಕಿದೆ. ತೋಟಗಾರಿಕಾ ಬೆಳೆಗಳಿಗೆ ನೀರು ಸಮೃದ್ಧವಾಗಿ ಸಿಗುತ್ತಿಲ್ಲ. ಹಾಗಾಗಿ, ಪೂರೈಕೆಯೂ ತಗ್ಗಿದೆ. ಬೆಲೆ ಹೆಚ್ಚು ನೀಡಿದರೂ ಉತ್ತಮ ಎಳನೀರು ಸಂಗ್ರಹ ಆಗುತ್ತಿಲ್ಲ' ಎನ್ನುತ್ತಾರೆ ಪಟ್ಟಣದ ನಾಗೇಂದ್ರ.**


---

## ಸುರಿದ ಧಾರಾಕಾರ ಮಳೆ: ಇಳೆಗೆ ತಂಪು

• ಉದಯವಾಹಿನಿ ಮಡಿಕೇರಿ

ಕೊಡಗಿನ ಕೆಲವೆಡೆ ಸುರಿದ ಧಾರಾಕಾರ ಮಳೆಯು ಇಳೆಯನ್ನು ತಂಪಾಗಿಸಿತು. ಸುಂಟಿಕೊಪ್ಪ, ಕೆದಕಲ್, ನಾಪೋಕ್ಲು, ಸೋಮವಾರಪೇಟೆ ಸೇರಿದಂತೆ ಹಲವೆಡೆ ಬಿರುಸಿನ ಮಳೆ ಸುರಿಯಿತು. ಅದರಲ್ಲೂ ಕೆದಕಲ್, ನಾಪೋಕ್ಲು, ಹಿರಿಕರ ಗ್ರಾಮದಲ್ಲಿ ಸುರಿದ ಆಲಿಕಲ್ಲು ಮಳೆ ಜನರ ಹೃಣ್ಮನಗಳನ್ನು ಪುಳಕಗೊಳಿಸಿತು.

ಬೆಳಿಗ್ಗೆಯಿಂದಲೇ ಆಗೊಮ್ಮೆ ಈಗೊಮ್ಮೆ ಮೋಡ ಕವಿದ ವಾತಾವರಣವು ಮಳೆ ಬರಬಹುದು ಎಂಬ ಮುನ್ಸೂಚನೆ ನೀಡಿತು. ಮಧ್ಯಾಹ್ನದ ನಂತರ ಆರಂಭವಾದ ಗುಡುಗು, ಸಿಡಿಲುಗಳು ಸುಂಟಿಕೊಪ್ಪ ಹಾಗೂ ಕೆದಕಲ್ ವ್ಯಾಪ್ತಿಯಲ್ಲಿ ಹೆಚ್ಚು ಮಳೆ ತರಿಸಿದವು. ಸಂಜೆಗೂ ಮುನ್ನವೇ ಫಳಾರನೇ ಮಿಂಚುತ್ತಿದ್ದ ಕಣ್ಣುಕೋರೈಸುವ ಬೆಳಕು ಚಕಿತಗೊಳಿಸಿತು. ಆಗಸದಲ್ಲಿ ನಿರಂತರವಾಗಿ ಕೋಲ್ಮಿಂಚುಗಳು ಮೂಡಿ, ಧಾರಾಕಾರ ಮಳೆಗೆ ನಾಂದಿ ಹಾಡಿತು. ಸುಂಟಿಕೊಪ್ಪ ವ್ಯಾಪ್ತಿಯ ಜನತಾ ಕಾಲೋನಿಯ ಮೆಟ್ಟಿಲು ಮಾರ್ಗದಲ್ಲಿ ಜಲಪಾತದಂತೆ ನೀರು ಧುಮ್ಮಿಕ್ಕಿತು. ಕಾಲೋನಿಯ ನಿವಾಸಿ ವಿನೋದ್ ಅವರ ಮನೆಯೊಳಗೆ ನೀರು ನುಗ್ಗಿ ಮನೆಯವರು ಚಿಂತಕ್ರಾಂತರಾದರು.ಮಳೆ ನಿಲ್ಲುವವರೆಗೂ ಮುಖ್ಯ ರಸ್ತೆಗೆ ಬಾರದಂತಹ ಸ್ಥಿತಿ ಎದುರಾಯಿತು. ಏಳನೇ ಮೈಲು, ಬೋಯಿಕೇರಿ, ಕಿಬ್ಬೆಟ್ಟ, ಗರ ಗಂದೂರು, ಮಳೂರು, ಏಳನೇ ಹೊಸಕೋಟೆ, ಕೊಡ ಗರಹಳ್ಳಿ, ಹರದೂರು ಸೇರಿದಂತೆ ಹಲವಡೆ ಉತ್ತಮ ಮಳೆಯಾಗಿದೆ.




ಉದಯವಾಹಿನಿ ಚಿತ್ರ

• ಉದಯವಾಹಿನಿ ಚಾಮರಾಜನಗರ

ಬರದ ಹೊಡೆತಕ್ಕೆ ನಲುಗಿದ್ದ ಜಿಲ್ಲೆಯ ರೈತರ ಮುಖದಲ್ಲಿ ಮೂರು ದಿನಗಳಿಂದ ಸುರಿಯುತ್ತಿರುವ ಸಾಧಾರಣ ಮಳೆ ಮಂದಹಾಸ ಮೂಡಿಸಿದೆ. ಕೃಷಿಕರು ನಿರಾಳರಾಗುವಷ್ಟು ಮಳೆ ಬಂದಿಲ್ಲ. ಆದರೆ, ಇನ್ನೂ ಕೆಲವು ದಿನಗಳ ಕಾಲ ಮಳೆಯಾಗಬಹುದು ಎಂಬ ಹವಾಮಾನ ಇಲಾಖೆಯ ಮುನ್ಸೂಚನೆ ಬೆಳೆಗಾರರಲ್ಲಿ ನೆಮ್ಮದಿಯ ಭಾವ ಮೂಡಿಸಿದೆ. ಮುಂಗಾರು ಪೂರ್ವ ಮಳೆ ಜಿಲ್ಲೆಗೆ ಕಾಲಿಡುತ್ತಿದ್ದಂತೆಯೇ ಕೆಲವು ಕೃಷಿಕರು ಭೂಮಿಯನ್ನು ಉಳುಮೆ ಮಾಡಲು ಮುಂದಡಿ ಇಟ್ಟಿದ್ದಾರೆ.

ಇತ್ತ ಕೃಷಿ ಇಲಾಖೆ ಕೂಡ ರೈತರಿಗೆ ಬಿತ್ತನೆ ವಿತರಿಸುವ ಕಾರ್ಯ ಆರಂಭಿಸಿದೆ. ಜಿಲ್ಲೆಯ ಎಲ್ಲಾ ರೈತ ಕೇಂದ್ರಗಳಲ್ಲಿ ವಿವಿಧ ಬಿತ್ತನೆ ಬೀಜಗಳು ಲಭ್ಯವಿವೆ. ಗುಂಡ್ಲುಪೇಟೆ, ಚಾಮರಾಜನಗರ, ಯಳಂದೂರು ತಾಲ್ಲೂಕುಗಳಲ್ಲಿ ರೈತರು ಬಿತ್ತನೆ ಬೀಜ ಖರೀದಿಸುತ್ತಿದ್ದಾರೆ.

## ವರುಣನ ಆಗಮನ: ಕೃಷಿಗೆ ರೈತರ ಗಮನ



ಉದಯವಾಹಿನಿ ಚಿತ್ರ

### ಶ್ರಮಿಕರಿಗೂ ಬೇಡಿಕೆ

**ಒಂದೆರಡು ದಿನಗಳಿಂದ ಸದ್ಯ ಟ್ರ್ಯಾಕ್ಟರ್ ಮತ್ತು ಟಿಲ್ಲರ್ ಕೆಲಸಗಳಿಗೆ ಬೇಡಿಕೆ ಬಂದಿದೆ. ಶ್ರಮಿಕರಿಗೂ ಬೇಡಿಕೆ ತಂದಿದೆ. ಕಾಫಿ ಮತ್ತು ಮೆಣಸು ತೋಟಗಳ ವಾಣಿಜ್ಯ ಕೃಷಿಕರು ಗೊಬ್ಬರ, ನೀರು ಮತ್ತು ಕೆಲಸಗಾರರನ್ನು ಹೊಂದಿಸುವತ್ತ ಚಿತ್ತ ಹರಿಸಿದ್ದು, ಮಳೆರಾಯನ ಕೃಪೆಗಾಗಿ ಕಾಯ್ದಿದ್ದಾರೆ.**

ಸೂರ್ಯಕಾಂತಿ, ಉದ್ದು, ಹೆಸರು, ಅಲಸಂದೆ ಬಿತ್ತನೆ ಬೀಜಗಳನ್ನು ಪ್ರಮುಖವಾಗಿ ವಿತರಿಸಲಾಗುತ್ತಿದೆ. ಜಿಲ್ಲಾ ಕೃಷಿ ಇಲಾಖೆಗೆ 921.80 ಕ್ವಿಂಟಲ್‌ಗಳಷ್ಟು ಬಿತ್ತನೆ ಬೀಜ ಪೂರೈಕೆಯಾಗಿದ್ದು, 57.77 ಕ್ವಿಂಟಲ್‌ಗಳಷ್ಟು ವಿತರಣೆ ಮಾಡಿದೆ. 864.03 ಕ್ವಿಂಟಲ್‌ಗಳಷ್ಟು ದಾಸ್ತಾನು ಇದೆ.

ಮಳೆಗಾಲ ಆರಂಭವಾಗುವ ನಿರೀಕ್ಷೆ ಮೂಡಿಸಿದ್ದು ಭೂಮಿ ಸಿದ್ಧತೆ ನಡೆಸಲಾಗಿದೆ.

ಉಳುಮೆ, ಕಳೆ, ಗಿಡಗಂಟಿ ನಿರ್ವಹಣೆ, ಕಾಲುವೆ ಸೋಸುವುದು, ನೀರಿನ ಮೂಲಗಳ ಸಂರಕ್ಷಣೆ ಹಾಗೂ ಅನುಪಯುಕ್ತ ತ್ಯಾಜ್ಯಗಳನ್ನು ಸುಟ್ಟು ಭೂಮಿ ಹಸನು ಮಾಡಲಾಗುತ್ತಿದೆ' ಎಂದು ಯಳಂದೂರು ತಾಲ್ಲೂಕಿನ ಅಂಬಳೆ ರೈತ ಶಿವಮೂರ್ತಿ ತಿಳಿಸಿದರು.

---

# ಕೊಡಗಿನ ಗುಂಡಿಯತ್ ಅಯ್ಯಪ್ಪ ದೇವರಿಗೆ ಅವಲಕ್ಕಿಯ ನೈವೇದ್ಯ

**ಈ ಆಚರಣೆ ವಿಭಿನ್ನ ಮತ್ತು ವಿಶಿಷ್ಟವಾಗಿದ್ದು, ಇಂತಹ ಆಚರಣೆ ಕೊಡಗು ಹೊರತುಪಡಿಸಿ ಬೇರೆಲ್ಲೂ ನೋಡಲು ಸಾಧ್ಯವಿಲ್ಲ**

• ಉದಯವಾಹಿನಿ ಮಡಿಕೇರಿ

ಕೊಡಗಿನಲ್ಲಿ ಮೇ ತಿಂಗಳಾಂತ್ಯಕ್ಕೆ ಎಲ್ಲ ಗ್ರಾಮದೇವರುಗಳ ಹಬ್ಬಗಳು ಮುಗಿದು ಹೋಗಲಿದೆ. ಮಳೆಗಾಲ ಆರಂಭವಾದ ಬಳಿಕ ಆಗಸ್ಟ್ 3ರ ಕಕ್ಕಡ ಪದ್ನಟ್ ತನಕ ಯಾವುದೇ ಹಬ್ಬಾಚರಣೆಗಳು ನಡೆಯುವುದಿಲ್ಲ. ಹೀಗಾಗಿ ಎಲ್ಲರೂ ತಮ್ಮ ಮನೆಗಳು ಸೇರಿದಂತೆ ಊರ ಹಬ್ಬಗಳನ್ನು ತಿಂಗಳಾಂತ್ಯದೊಳಗೆ ಮುಗಿಸಿಬಿಡುತ್ತಾರೆ.

ಮೊದಲೆಲ್ಲ ಮಳೆಗಾಲ ಕೊಡಗಿನಂತಹ ಪ್ರದೇಶಗಳಲ್ಲಿ ಮೇ ತಿಂಗಳ ಕೊನೆಯ ಭಾಗದಲ್ಲಿಯೇ ಆರಂಭವಾಗಿ ಬಿಡುತ್ತಿತ್ತು. ಮಳೆಗಾಲ ಆರಂಭವಾಗುತ್ತಿದ್ದಂತೆಯೇ ಕೃಷಿ ಚಟುವಟಿಕೆಗಳು ಆರಂಭವಾಗುತ್ತಿದ್ದವು. ಅದರ ಜತೆಗೆ ಮಳೆಗೆ ಒಂದು ಕಡೆಯಿಂದ ಮತ್ತೊಂದು ಕಡೆಗೆ ಹೋಗುವುದು ಕೂಡ ಕಷ್ಟವಾಗಿರುತ್ತಿತ್ತು. ಹೀಗಾಗಿಯೇ ಮುಂಗಾರಿಗಿಂತ ಮೊದಲೇ ಎಲ್ಲಾ ಹಬ್ಬ, ಶುಭಕಾರ್ಯಗಳನ್ನು ಮಾಡಿ ಮುಗಿಸಿಬಿಡುತ್ತಿದ್ದರು. ಬದಲಾದ ಕಾಲಘಟ್ಟದಲ್ಲಿ ಮೊದಲಿನಂತೆ ಯಾವುದೂ ಇಲ್ಲವಾಗಿದೆ. ಒಂದಷ್ಟು ಬದಲಾವಣೆಗಳು ಪ್ರಕೃತಿ ಸೇರಿದಂತೆ ಜನವಲಯದಲ್ಲಿಯೂ ಬದಲಾವಣೆಗಳಾಗಿವೆ. ಆದರೆ ಹಿಂದಿನಿಂದಲೂ ನಡೆದುಕೊಂಡು ಬಂದಂತಹ ಹಬ್ಬಗಳ ಆಚರಣೆಯನ್ನು ಈಗಲೂ ಮುಂದುವರೆಸಿಕೊಂಡು ಹೋಗುತ್ತಿರುವುದು ಕಂಡುಬರುತ್ತಿದೆ.

**ಈ ಇಬ್ಬರು ಪೂಜಾರಿಗಳು ಹಬ್ಬದ ದಿನದಂದು ಬೆಳಿಗ್ಗೆಯಿಂದಲೇ ಉಪವಾಸ ಮತ್ತು ಕಟ್ಟುನಿಟ್ಟಿನ ವೃತ ಮಾಡುತ್ತಾರೆ. ನೀರು ಸಹ ಸೇವಿಸುವಂತಿಲ್ಲ. ಬಳಿಕ ಪೊಲವಪ್ಪಂಡ ಕೋಟ ಪ್ರವೇಶಿಸಿ ವಿಶೇಷ ಪೂಜೆ ಸಲ್ಲಿಸಿ ಅಲ್ಲಿ ನೆರೆದ ಭಕ್ತರಿಗೆ ಅವಲಕ್ಕಿಗೆ ಬಾಳೆ ಹಣ್ಣು ಸೇರಿಸಿ ಅವುಲ್ ಎಂಬ ಪ್ರಸಾದವನ್ನು ನೀಡುತ್ತಾರೆ.**

ಇಲ್ಲಿ ನಡೆಯುವ ಹಬ್ಬಾಚರಣೆ ಪೈಕಿ ದಕ್ಷಿಣಕೊಡಗಿನ ಪೊನ್ನಂಪೇಟೆ ಸಮೀಪದ ಹಳ್ಳಿಗಟ್ಟು ಭದ್ರಕಾಳಿ ಹಾಗೂ ಗುಂಡಿಯತ್ ಅಯ್ಯಪ್ಪ ದೇವರ ವಾರ್ಷಿಕ ಬೇಡು ಹಬ್ಬ ವಿಶೇಷವಾಗಿದೆ.



ಉದಯವಾಹಿನಿ ಚಿತ್ರ

ಈ ಹಬ್ಬದ ಆಚರಣೆ ಹೇಗಿರುತ್ತದೆ ಎಂಬುದನ್ನು ನೋಡಿದ್ದೇ ಆದರೆ ಈ ಆಚರಣೆ ವಿಭಿನ್ನ ಮತ್ತು ವಿಶಿಷ್ಟವಾಗಿದ್ದು, ಇಂತಹ ಆಚರಣೆ ಕೊಡಗು ಹೊರತು ಪಡಿಸಿ ಬೇರೆಲ್ಲೂ ನೋಡಲು ಸಾಧ್ಯವಿಲ್ಲ.

ಹಬ್ಬದ ಆಚರಣೆ ಅಂಗವಾಗಿ ಗುಂಡಿಯತ್ ಅಯ್ಯಪ್ಪ ದೇವರ ಅವುಲ್ ಹಾಗೂ ರಾತ್ರಿ ಮನೆ ಮನೆ ಕಳಿ (ಮನೆಗಳಿಗೆ ತೆರಳಿ ನೃತ್ಯ) ನಡೆಯುತ್ತದೆ. ಇದು ಊರು ತಕ್ಕರಾದ ಚಮ್ಮಟೀರ ಮನೆಯಿಂದ ಹೊರಡುತ್ತದೆ. ಈ ವೇಳೆ ಕೃತಕವಾಗಿ ಶೃಂಗರಿಸಲಾದ ಒಂದು ಕುದುರೆ ಚಮ್ಮಟೀರ ಹಾಗೂ ಮತ್ತೊಂದು ಕುದುರೆ ಮೂಕಳೇರ ಕುಟುಂಬದ ಮನೆಯಿಂದ ಹೊರಟು ದೇವಸ್ಥಾನದ ಸಮೀಪ ಅಂಬಲ (ಮೈದಾನ)ದಲ್ಲಿ ಪರಸ್ಪರ ಕೆಸರು ಎರಚಾಟದ ನಂತರ ದೇವಸ್ಥಾನದಲ್ಲಿ ಹರಕೆ ಕಾಣಿಕೆ ಒಪ್ಪಿಸುವುದರೊಂದಿಗೆ ಹಬ್ಬಕ್ಕೆ ತೆರೆ ಬೀಳಲಿದೆ. ಎರಡು ದಿನಗಳ ಕಾಲ ನಡೆಯುವ ಈ ಹಬ್ಬದಲ್ಲಿ ಹಲವು ವಿಶೇಷತೆಗಳನ್ನು ನಾವು ಕಾಣಬಹುದಾಗಿದೆ. ಈ ಬೋಡು ಹಬ್ಬದಲ್ಲಿ ಅವಲಕ್ಕಿ ಪ್ರಸಾದ ಮತ್ತು ಕೆಸರು ಎರಚಾಟ ಪ್ರಮುಖವಾಗಿದ್ದು ಮೊದಲಿನಿಂದಲೂ ಇದಕ್ಕೆ ಹೆಚ್ಚಿನ ಮಹತ್ವ ನೀಡುತ್ತಾ ಬರಲಾಗಿದೆ. ಈ ಹಬ್ಬದ ಆಚರಣೆಯೂ ವಿಚಿತ್ರವಾಗಿದೆ.

### ಅವಲಕ್ಕಿ ಮಾಡಿ ದೇವರಿಗೆ ನೈವೇದ

**ಇದಕ್ಕೆ ಮುಂಚೆ ಇಬ್ಬರು ಕೊಡವ ಪೂಜಾರಿಗಳು (ಒಬ್ಬರು ಚಮ್ಮಟೀರ ಹಾಗೂ ಮತ್ತೊಬ್ಬರು ಮೂಕಳೇರ) ಮೂಕಳೇರ ಬಲ್ಯಮನೆಯ ಹತ್ತಿರದ ದೇವರ ಕೆರೆಯಲ್ಲಿ ಸ್ನಾನ ಮಾಡಿ ವಿವಿಧ ವಿಧಿ ವಿಧಾನದೊಂದಿಗೆ ಭಂಡಾರ ಪೆಟ್ಟಿಗೆ ಶುದ್ಧಿಗೊಳಿಸಿ ನಂತರ ಕೆರೆಯ ಹತ್ತಿರದಲ್ಲಿ ಹೊಸ ಮಣ್ಣಿನ ಮಡಿಕೆಯಲ್ಲಿ ಭತ್ತವನ್ನು ಬೇಯಿಸಿ ಹದಗೊಳಿಸಿ ಇದನ್ನು ಕುಟ್ಟಿ ಅವಲಕ್ಕಿಯನ್ನು ಮಾಡಿ ದೇವರಿಗೆ ನೈವೇದ ತಯಾರು ಮಾಡುತ್ತಾರೆ.**

### 2 ದಿನಗಳ ಹಬ್ಬಕ್ಕೆ ಚಾಲನೆ

**ಹಬ್ಬದ ದಿನ ಚಮ್ಮಟೀರ ಕುಟುಂಬದ ಮನೆಯಿಂದ ಮೂಲ ನಿವಾಸಿಗಳಲ್ಲಿ ಒಬ್ಬರಾದ ಪಣಿಕ ಜನಾಂಗದಿಂದ ಪೊಲವಂದೆರೆ ಹೊರಡುವ ಮೂಲಕ ಎರಡು ದಿನಗಳ ಹಬ್ಬಕ್ಕೆ ಚಾಲನೆ ನೀಡಲಾಗುತ್ತದೆ. ನಂತರ ಊರಿನ ಮೂರು ನಿಗದಿತ ದೇವರ ನೆಲೆಯಲ್ಲಿ ವಿಶೇಷ ಪೂಜೆ ಸಲ್ಲಿಸಿ ಪೊಲವಪ್ಪಂಡ ಕೋಟದಲ್ಲಿ (ದೇವಸ್ಥಾನ) ಊರಿನ ಜನರು, ಹೆಂಗಸರು, ಮಕ್ಕಳು ಸೇರುತ್ತಾರೆ.**

---

ಉದಯವಾಹಿನಿ

ಪ್ರಾದೇಶಿಕ

ಶುಕ್ರವಾರ 10 ಮೇ 2024



## ಮಿನಿ ನ್ಯೂಸ್

### ಬಸವ ಜಯಂತಿ ಹಾಗೂ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಆಚರಣೆ

• ಉದಯವಾಹಿನಿ ತುಮಕೂರು

ಜಿಲ್ಲಾಡಳಿತ, ಜಿಲ್ಲಾಪಂಚಾಯತ್, ಮಹಾನಗರ ಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್, ತುಮಕೂರು ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ: ಗುಬ್ಬಿ ವೀರಣ್ಣ ಕಲಾಕ್ಷೇತ್ರದಲ್ಲಿ ಮೇ 10ರಂದು ಬೆಳಿಗ್ಗೆ 10:30 ಗಂಟೆಗೆ ''ಬಸವ ಜಯಂತಿ ಹಾಗೂ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿ'' ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಲೋಕಸಭಾ ಚುನಾವಣೆಯ ನೀತಿ ಸಂಹಿತೆಯನ್ನು ಜಾರಿಗೊಳಿಸಿರುವ ಹಿನ್ನೆಲೆಯಲ್ಲಿ ಕಾರ್ಯಕ್ರಮವನ್ನು ಅತ್ಯಂತ ಸರಳವಾಗಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮುಖೇನ ಆಚರಿಸಲಾಗುವುದು. ಸಮಾಜದ ಗಣ್ಯರು, ವಿವಿಧ ಸಮುದಾಯದ ಮುಖಂಡರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಿ.ಎಂ. ರವಿ ಕುಮಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕನಕಪುರದಿಂದ ಬೆಂಗಳೂರಿಗೆ ಹೊರಟಿದ್ದ ಕೆಎಸ್‌ಆರ್ ಟಿಸಿ ಬಸ್ ಪಲ್ಟಿ: ನಾಲ್ವರಿಗೆ ಗಾಯ

• ಉದಯವಾಹಿನಿ ರಾಮನಗರ

ಕನಕಪುರದಿಂದ ಬೆಂಗಳೂರಿಗೆ ಹೊರಟಿದ್ದ ಕೆ ಎಸ್ ಆರ್ ಟಿಸಿ ಬಸ್ಸೊಂದು ಪಲ್ಟಿಯಾಗಿ ನಾಲ್ವರು ಪ್ರಯಾಣಿಕರು ಗಾಯಗೊಂಡಿರುವ ಘಟನೆ ಸೋಮನಹಳ್ಳಿ ಟೋಲ್ ಗೇಟ್ ಬಳಿ ಸಂಭವಿಸಿದೆ.



ಉದಯವಾಹಿನಿ ಚಿತ್ರ

ಗುರುವಾರ ಬೆಳಿಗ್ಗೆ 8.30 ರ ಸುಮಾರಿಗೆ ಟೋಲ್ ಗೇಟ್ ಬಳಿ ಬಸ್ ಪಲ್ಟಿ ಹೊಡೆದಿದೆ ಎನ್ನಲಾಗಿದ್ದು ಗಾಯಾಳುಗಳನ್ನು ಕಗ್ಗಲೀಪುರ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಚಿಕಿತ್ಸೆಗೆ ದಾಖಲು ಮಾಡಲಾಗಿದೆ. ಕನಕಪುರ ಡಿಪೋಗೆ ಸೇರಿದ ಬಸ್ ಕನಕಪುರದಿಂದ ಪ್ರಯಾಣಿಕರನ್ನು ಹೊತ್ತು ಬೆಂಗಳೂರಿಗೆ ತೆರಳುತಿತ್ತು ಎನ್ನಲಾಗಿದೆ.

### ಶಾಸಕ ಇಕ್ಬಾಲ್ ಹುಸೇನ್ ವಿಡಿಯೋ ವೈರಲ್ ಕೇಸ್: ಇಬ್ಬರ ಬಂಧನ

• ಉದಯವಾಹಿನಿ ರಾಮನಗರ



ಶಾಸಕ ಇಕ್ಬಾಲ್ ಹುಸೇನ್ ಅವರು ಮಹಿಳಾ ಕಾಂಗ್ರೆಸ್ ಕಾರ್ಯಕರ್ತೆಯ ಜೊತೆ ವಿಡಿಯೋ ಕಾಲ್‌ನಲ್ಲಿ ಮಾತನಾಡುತ್ತಿದ್ದ ವಿಡಿಯೋ ವೈರಲ್ ಮಾಡಿದ್ದ ಆರೋಪದಡಿ ಇಬ್ಬರನ್ನು ಬಂಧಿಸಲಾಗಿದೆ.

ಬಂಧಿತರನ್ನು ಹಾರೋಹಳ್ಳಿ ತಾಲ್ಲೂಕು ಗಾಣಾಳುದೊಡ್ಡಿ ಗ್ರಾಮದ ನಿವಾಸಿ ಶೇಷಾದ್ರಿ, ಮಾಯಗಾನಹಳ್ಳಿ ನಿವಾಸಿ ಶಶಿಕುಮಾರ್ ಎಂದು ಗುರುತಿಸಲಾಗಿದೆ. ಸಿಇಎನ್ ಪೊಲೀಸರು ಸಂತ್ರಸ್ತ ಮುಖಂಡೆ ನೀಡಿದ್ದ ದೂರಿನ ಮೇರೆಗೆ ಇಬ್ಬರನ್ನು ಬಂಧಿಸಿದ್ದಾರೆ.

ವಿನಾಕಾರಣ ಜೆಡಿಎಸ್ ಕಾರ್ಯಕರ್ತರನ್ನು ಬಂಧಿಸಲಾಗಿದೆ ಎಂದು ಆರೋಪಿಸಿ ಜೆಡಿಎಸ್ ಕಾರ್ಯಕರ್ತರು ಮತ್ತು ಮುಂಡರು ಸಿಇಎನ್ ಪೊಲೀಸ್ ಠಾಣೆ ಎದುರು ಪ್ರತಿಭಟನೆ ನಡೆಸಿದ್ದಾರೆ.

### ಕೆರೆಯ ಹೂಳೆತ್ತುವ ಕಾರ್ಯಕ್ಕೆ ಚಾಲನೆ



ಉದಯವಾಹಿನಿ ಚಿತ್ರ

• ಉದಯವಾಹಿನಿ ಸೋಮವಾರಪೇಟೆ

ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಡಿ ತಾಲ್ಲೂಕಿನ ಹಂಡ್ಲಿ ಹಾಗೂ ಹುಲುಸೆ ಕೆರೆ ಅಭಿವೃದ್ಧಿ ಸಮಿತಿ ವತಿಯಿಂದ ನಮ್ಮೂರು-ನಮ್ಮ ಕೆರೆ ಕಾರ್ಯಕ್ರಮದಡಿ ಹುಲುಸೆ ಕೆರೆಯ ಹೂಳೆತ್ತುವ ಕಾರ್ಯಕ್ಕೆ ಬುಧವಾರ ಚಾಲನೆ ನೀಡಲಾಯಿತು.ಯೋಜನೆಯ ಜಿಲ್ಲಾ ನಿರ್ದೇಶಕರಾದ ಲೀಲಾವತಿ ಮಾತನಾಡಿ, ಹನಿ ನೀರಿಗೂ ಇಂದು ಪರದಾಡಬೇಕಾದ ಅನಿವಾರ್ಯತೆ ಎದುರಾಗಿದೆ.

ಜೀವ ಜಲದ ರಕ್ಷಣೆ ಆಗಬೇಕು. ಕೆರೆಗಳ ಪುನಶ್ಚೇತನದೊಂದಿಗೆ ನೀರನ್ನು ಉಳಿಸಬೇಕಾದದು ನಮ್ಮ ಕರ್ತವ್ಯವಾಗಿದೆ ಎಂದರು.

ಜಿಲ್ಲಾ ಜನಜಾಗೃತಿ ವೇದಿಕೆ ಸದಸ್ಯ ಭಗವಾನ್, ಗ್ರಾಮಾಭಿವೃದ್ಧಿ ಯೋಜನೆಯ ಯೋಜನಾಧಿಕಾರಿ ರೋಹಿತ್, ಕೆರೆ ಅಭಿವೃದ್ಧಿ ಸಮಿತಿ ಅಧ್ಯಕ್ಷ ಭರತ್, ಹಂಡ್ಲಿ ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ಅಶೋಕ್, ಗ್ರಾಮ ಪಂಚಾಯಿತಿ ಸದಸ್ಯರುಗಳು, ಪ್ರಗತಿ ಬಂಧು ಮತ್ತು ಸ್ವಸಹಾಯ ಸಂಘದ ಸದಸ್ಯರು, ಗ್ರಾಮಸ್ಥರು ಪಾಲ್ಗೊಂಡಿದ್ದರು.

### ಬಿಸಿಯೂಟಕ್ಕೆ ಮಕ್ಕಳ ನಿರಾಸಕ್ತಿ

• ಉದಯವಾಹಿನಿ ಚಿಂತಾಮಣಿ



ಉದಯವಾಹಿನಿ ಚಿತ್ರ

ಬರಗಾಲದ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಬೇಸಿಗೆ ರಜೆಯಲ್ಲೂ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ಮಧ್ಯಾಹ್ನದ ಬಿಸಿಯೂಟದ ಯೋಜನೆ ಮುಂದುವರೆಸಿದೆ. ಆದರೆ ಸುಡು ಬಿಸಿಲಿನ ಕಾರಣಕ್ಕೆ ಬಹುತೇಕ ಮಕ್ಕಳು ಶಾಲೆಗಳತ್ತ ಸುಳಿಯುತ್ತಿಲ್ಲ. ಬರಪೀಡಿತ ತಾಲ್ಲೂಕಿನಲ್ಲಿ ಮಕ್ಕಳಿಗೆ ಪೌಷ್ಟಿಕಾಂಶದ ಕೊರತೆ ಕಾಡಬಾರದೆಂದು ಏಪ್ರಿಲ್ 11 ರಿಂದ ಮೇ 27 ರವರೆಗೆ 41 ದಿನಗಳ ಕಾಲ ಬಿಸಿಯೂಟ ನೀಡಲಾಗುತ್ತಿದೆ. ತಾಲ್ಲೂಕಿನಲ್ಲಿ 378 ಸರ್ಕಾರಿ ಮತ್ತು ಅನುದಾನಿತ ಶಾಲೆಗಳಿವೆ. 1 ರಿಂದ 9 ನೇ ತರಗತಿಯವರೆಗೆ 17,546 ವಿದ್ಯಾರ್ಥಿಗಳು ಓದುತ್ತಿದ್ದಾರೆ. ಅವರಲ್ಲಿ 12,670 ವಿದ್ಯಾರ್ಥಿಗಳು ಮಾತ್ರ ಬೇಸಿಗೆಯ ಬಿಸಿಯೂಟಕ್ಕೆ ನೋಂದಾಯಿಸಿಕೊಂಡಿದ್ದಾರೆ. ಇವರಲ್ಲಿ ಕೆಲವರು ಶಾಲೆಗಳತ್ತ ಮುಖ ಮಾಡಿಲ್ಲ. ಒಂದೊಂದು ದಿನ ಒಂದೊಂದು ರೀತಿ ಹಾಜರಾತಿ ಇರುತ್ತೆ. ಏಪ್ರಿಲ್ ತಿಂಗಳಲ್ಲಿ ಸರಾಸರಿ 9,526 ವಿದ್ಯಾರ್ಥಿಗಳು ಬಿಸಿಯೂಟ ಸವಿದಿದ್ದಾರೆ ಎಂದು ಅಕ್ಷರದಾಸೋಹ ನಿರ್ದೇಶಕ ಸುರೇಶ್ ತಿಳಿಸಿದರು. ಮಧ್ಯಾಹ್ನ 12 ಗಂಟೆಯಿಂದ 4 ಗಂಟೆಯವರೆಗೆ ಮಕ್ಕಳು ಹೊರಗಡೆ ಓಡಾಡಬಾರದು ಎಂದು ಆರೋಗ್ಯ ಇಲಾಖೆ ಜಾಗೃತಿ ಮೂಡಿಸುತ್ತಿದೆ. ಬಿಸಿಲಿ ತೀವ್ರತೆ ಹೆಚ್ಚಿರುವುದರಿಂದ ಹೊರಗಡೆ ಹೋದರೆ ಮಕ್ಕಳು ಅನಾರೋಗ್ಯಕ್ಕೆ ತುತ್ತಾಗಬಹುದು ಎಂಬ ಭಯ ಪೋಷಕರನ್ನು ಕಾಡುತ್ತಿದೆ. ಹೀಗಾಗಿ ಪೋಷಕರು ಮಕ್ಕಳನ್ನು ಶಾಲೆಗೆ ಕಳುಹಿಸುತ್ತಿಲ್ಲ. ಶಿಕ್ಷಣ ಇಲಾಖೆ ಅಧಿಕಾರಿಗಳು, ಶಿಕ್ಷಕರು ಪೋಷಕರ ಮನವೊಲಿಸಿದರೂ ಸ್ಪಂದನೆ ದೊರೆಯುತ್ತಿಲ್ಲ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 10:30 ರಿಂದ 12:00 |
| ಗುಳಿಕ ಕಾಲ | ಬೆಳಿಗ್ಗೆ | 07:30 ರಿಂದ 09:00 |
| ಯಮಗಂಡ ಕಾಲ | ಮಧ್ಯಾಹ್ನ | 03:00 ರಿಂದ 04:30 |

**ಮೇಷ:** ನಿಮ್ಮ ಮನೆಯಲ್ಲಿ ಸಾಮರಸ್ಯ ತರಲು ನಿಕಟ ಸಹಕಾರದೊಂದಿಗೆ ಕೆಲಸ ಮಾಡಬೇಕು. ಇಡೀ ಬ್ರಹ್ಮಾಂಡದ ಭಾವಪರವಶತೆ ಪ್ರೀತಿಯಲ್ಲಿರುವವರ ನಡುವೆ ನಡೆಯುತ್ತದೆ.

**ವೃಷಭ:** ನಿಮ್ಮ ಕುಟುಂಬ ಸದಸ್ಯರಿಗೆ ಧನಾತ್ಮಕ ಪ್ರಯೋಜನಗಳ ಸಲಹೆಗಳನ್ನು ನೀಡುವ ಮೂಲಕ ನಿಮ್ಮ ಉಪಯುಕ್ತತೆಯು ಬಲವನ್ನು ಅಭಿವೃದ್ಧಿಪಡಿಸಿ. ಪ್ರೇಮಪ್ರಯಾಣ ಮಧುರವಾಗಿದ್ದರೂ ಅಲ್ಪಾವಧಿಯದ್ದಾಗಿರುತ್ತದೆ.

**ಮಿಥುನ:** ಸ್ನೇಹಿತರು ಇಂದು ರಾತ್ರಿ ರೋಮಾಂಚಕವಾದದ್ದನ್ನೇನಾದರೂ ಯೋಜಿಸಿ ನಿಮಗೆ ಆನಂದ ತರುತ್ತಾರೆ. ಸಂತೋಷವನ್ನು ಅನುಭವಿಸಬಹುದು. ಸ್ವಾರ್ಥಿಗಳ ಧೋರಣೆ ನಿಮ್ಮ ಸಹೋದ್ಯೋಗಿಗಳಿಂದ ಟೀಕೆಗೆ ಗುರಿಯಾಗುತ್ತದೆ.

**ಕರ್ಕಾಟಕ:** ಕೆಲವರು ಹೊರದೇಶಗಳ ಅವಕಾಶಗಳನ್ನೂ ಪಡೆಯಬಹುದಾಗಿದೆ. ಅನೇಕ ಕೆಲಸಗಳನ್ನು ಬಿಟ್ಟು ಇಂದು ನೀವು ನಿಮಗೆ ನೆಚ್ಚಿದ ಕೆಲಸಗಳನ್ನು ಮಾಡಲು ಮನಸ್ಸು ಮಾಡುತ್ತೀರಿ.

**ಸಿಂಹ:** ಸಂಜೆಯಲ್ಲಿ ವಿಶ್ರಾಂತಿ ತೆಗೆದುಕೊಳ್ಳಿ. ಹಣಕಾಸು ಲಾಭಗಳು ವಿವಿಧ ಮೂಲಗಳಿಂದ ಬರುತ್ತದೆ. ಮನೆ ಅಥವಾ ಸಾಮಾಜಿಕ ಸಮಾರಂಭಗಳಲ್ಲಿನ ಒಂದು ದುರಸ್ತಿ ಕೆಲಸ ನಿಮ್ಮನ್ನು ವ್ಯಸ್ತವಾಗಿರಿಸುವ ಸಾಧ್ಯತೆಯಿದೆ.

**ಕನ್ಯಾ:** ಹತಾಶೆಯ ಭಾವನೆ ನಿಮ್ಮನ್ನು ಆವರಿಸಲು ಬಿಡಬೇಡಿ. ನಿಮ್ಮ ಸಹೋದರ ಅಥವಾ ಸಹೋದರಿಯ ಸಹಾಯದಿಂದ ಹಣದ ಲಾಭವಾಗುವ ಸಾಧ್ಯತೆ ಇದೆ. ಒಬ್ಬ ಹಿರಿಯ ವ್ಯಕ್ತಿಯ ಆರೋಗ್ಯ ಕೊಂಚ ಆತಂಕಕ್ಕೆ ಕಾರಣವಾಗುತ್ತದೆ.

**ತುಲಾ:** ನಿಮ್ಮ ನಿರಂತರ ಸಕಾರಾತ್ಮಕ ಚಿಂತನೆಯನ್ನು ಪ್ರಶಂಸಿಸಲಾಗುತ್ತದೆ. ನಿಮ್ಮ ಪ್ರಯತ್ನದಲ್ಲಿ ನೀವು ಯಶಸ್ವಿಯಾಗಬಹುದು. ಇತರರ ಮೇಲೆ ಹೆಚ್ಚು ಖರ್ಚು ಮಾಡಬಯಸುತ್ತೀರಿ. ಕೌಟುಂಬಿಕ ಜವಾಬ್ದಾರಿಗಳು ಹೆಚ್ಚಾಗುತ್ತವೆ.

**ವೃಶ್ಚಿಕ:** ಚಾಲನೆ ಮಾಡುವಾಗ ಎಚ್ಚರವಹಿಸಿ. ಈ ರಾಶಿಚಕ್ರದ ದೊಡ್ಡ ಉದ್ಯಮಿಗಳು ಇಂದು ತುಂಬಾ ಯೋಚಿಸಿ ಅರ್ಥಮಾಡಿಕೊಂಡು ಹಣದ ಹೂಡಿಕೆ ಮಾಡುವ ಅಗತ್ಯವಿದೆ. ಕೌಟುಂಬಿಕ ಸಂತೋಷ ಕಾಣುತ್ತಿಲ್ಲ.

**ಧನಸ್ಸು:** ಒತ್ತಡ ಸಣ್ಣ ಅನಾರೋಗ್ಯಕ್ಕೆ ಕಾರಣವಾಗಬಹುದು. ಆರಾಮವಾಗಿರಲು ಸ್ನೇಹಿತರು ಮತ್ತು ಕುಟುಂಬದ ಸದಸ್ಯರ ಜೊತೆಗಿರಿ. ಇಂದು ಮಾಡಿದ ಹೂಡಿಕೆ ನಿಮ್ಮ ಅಭ್ಯುದಯ ಮತ್ತು ಆರ್ಥಿಕ ಭದ್ರತೆಯನ್ನು ಹೆಚ್ಚಿಸುತ್ತದೆ.

**ಮಕರ:** ಸ್ನೇಹಿತರೊಂದಿಗಿನ ಸಂಜೆ ಆಹ್ಲಾದಕರವಾಗಿದ್ದರೂ ಆದರೆ ವಿವರಿಸಲಾಗದ ತಿನ್ನುವುದು ನಿಮ್ಮ ಮರುದಿನದ ಮುಂಜಾನೆಗೆ ಅಸಮಾಧಾನವುಂಟು ಮಾಡಬಹುದು. ಆರ್ಥಿಕವಾಗಿ ಇಂದು ನೀವು ಸಾಕಷ್ಟು ಬಲವಾಗಿ ಕಾಣುವಿರಿ.

**ಕುಂಭ:** ಈಗ ತಾನೇ ಪರಿಚಯವಾದವರ ಜೊತೆ ನಿಮ್ಮ ವೈಯಕ್ತಿಕ ವಿಷಯಗಳನ್ನು ಹಂಚಿಕೊಳ್ಳಬೇಡಿ. ನಿಮ್ಮ ಸಂಗಾತಿಯ ಕುಟುಂಬದ ಸದಸ್ಯರ ಅಡ್ಡಿಯ ಕಾರಣದಿಂದ ನಿಮ್ಮ ದಿನ ಸ್ವಲ್ಪ ಏರುಪೇರಾಗಬಹುದು.

**ಮೀನ:** ಅತ್ಯಂತ ಪ್ರಭಾವಿ ಜನರ ಬೆಂಬಲ ನಿಮ್ಮ ನೈತಿಕ ಸ್ಥೈರ್ಯವನ್ನು ಹೆಚ್ಚಿಸುತ್ತದೆ. ಹಣದ ಪ್ರಾಮುಖ್ಯತೆ ನಿಮಗೆ ಚೆನ್ನಾಗಿ ಗೊತ್ತಿದೆ, ಆದ್ದರಿಂದ ಇಂದು ನಿಮ್ಮ ಮೂಲಕ ಉಳಿಸಲಾಗಿರುವ ಹಣ ನಿಮ್ಮ ತುಂಬಾ ಕೆಲಸಕ್ಕೆ ಬರಬಹುದು.

# ರಸ್ತೆ ಬದಿಯಲ್ಲೇ ತರಕಾರಿ, ಹಣ್ಣಿನ ಮಾರಾಟ: ಟ್ರಾಫಿಕ್ ಕಿರಿಕಿರಿ

### ರಸ್ತೆಯ ಬದಿಯಲ್ಲಿ ತರಕಾರಿ ಹಾಗೂ ಹಣ್ಣಿನ ಮಾರಾಟಕ್ಕೆ ಅವಕಾಶ ಕಲ್ಪಿಸಿರುವುದು ಸಂಚಾರ ದಟ್ಟಣೆ ಮತ್ತು ಕಿರಿಕಿರಿಗೆ ಕಾರಣ

• **ಉದಯವಾಹಿನಿ ಸಾಗರ**

ನಗರದ ಹೃದಯ ಭಾಗದಲ್ಲಿರುವ ಚಾಮರಾಜಪೇಟೆ ಬಡಾವಣೆಯಲ್ಲಿ ಗಾಂಧಿ ಮಂದಿರದ ಎದುರಿನ ರಸ್ತೆಯ ಬದಿಯಲ್ಲಿ ತರಕಾರಿ ಹಾಗೂ ಹಣ್ಣಿನ ಮಾರಾಟಕ್ಕೆ ಅವಕಾಶ ಕಲ್ಪಿಸಿರುವುದು ಸಂಚಾರ ದಟ್ಟಣೆ ಮತ್ತು ಕಿರಿಕಿರಿಗೆ ಕಾರಣವಾಗಿದೆ. ಈ ರಸ್ತೆಯಲ್ಲಿ ವಾಹನಗಳ ಸಂಚಾರ ದಟ್ಟಣೆ ಹೆಚ್ಚಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ ಎಂಬ ದೂರು ಕೇಳಿಬರುತ್ತಿದೆ. ಆರಂಭದಲ್ಲಿ ಸಾಗರ ನಗರಕ್ಕೆ ಹೊಂದಿಕೊಂಡಿರುವ, ಹತ್ತಿರದ ಗ್ರಾಮಗಳಲ್ಲಿ ತಾಜಾ ತರಕಾರಿ ಬೆಳೆಯುತ್ತಿದ್ದ ರೈತರು ಸ್ವತಃ ಇಲ್ಲಿಗೆ ಬಂದು ತರಕಾರಿ ಮಾರಲು ಅವಕಾಶ ಮಾಡಿಕೊಡಲಾಗಿತ್ತು. ಬೆಳಿಗ್ಗೆ 8ರಿಂದ ಮಧ್ಯಾಹ್ನ 12ರವರೆಗೆ ಮಾತ್ರ ಇದಕ್ಕೆ ಅವಕಾಶವಿತ್ತು.

ರೈತರು ಬೆಳೆದ ತರಕಾರಿಗಳಿಗೆ ಉತ್ತಮ ಬೆಲೆ ಸಿಗಲಿ' ಎಂಬ ಸದುದ್ದೇಶದಿಂದ ಸ್ಥಳೀಯ ಆಡಳಿತ ಈ ಕ್ರಮ ಕೈಗೊಂಡಿತ್ತು. ತಾಜಾ ತರಕಾರಿಯು ರೈತರಿಂದ ನೇರವಾಗಿ ಗ್ರಾಹಕರಿಗೆ ದೊರಕುತ್ತದೆ ಎನ್ನುವ ಕಾರಣಕ್ಕೆ ಈ ವ್ಯವಸ್ಥೆಗೆ ಯಾರದ್ದೂ ತಕರಾರು ವ್ಯಕ್ತವಾಗಿರಲಿಲ್ಲ, ಹಳ್ಳಿಗಳಿಂದ ಬರುತ್ತಿದ್ದ ರೈತರು ಉತ್ತಮ ವ್ಯಾಪಾರ ಮಾಡುತ್ತಿರುವುದನ್ನು ಗಮನಿಸಿದ ಕೆಲವು ತರಕಾರಿ ವ್ಯಾಪಾರಸ್ಥರು ತಾವೂ ರೈತರ ಸೋಗಿನಲ್ಲಿ ಈ ಸ್ಥಳಕ್ಕೆ ಬಂದು ವ್ಯಾಪಾರ ಆರಂಭಿಸಿದ್ದು, ಸಮಸ್ಯೆ ಸೃಷ್ಟಿಗೆ ಕಾರಣವಾಗಿದೆ ಎಂಬ ಅಭಿಪ್ರಾಯ ಕೇಳಿಬರುತ್ತಿದೆ. ರೈತರಲ್ಲದವರು ಶಿವಮೊಗ್ಗದ ತರಕಾರಿ ಮಾರುಕಟ್ಟೆಯಿಂದ ಬೆಳಗಿನ ಜಾವ ಸಗಟು ರೂಪದಲ್ಲಿ ತರಕಾರಿ ಖರೀದಿಸಿ ಅದನ್ನು ಸಾಗರಕ್ಕೆ ತಂದು ರಸ್ತೆಯ ಬದಿಗೆ ರೈತರ ಪಕ್ಕದಲ್ಲೇ ಕುಳಿತು ತಾವೇ ಬೆಳೆದ ತರಕಾರಿ ಎನ್ನುವ ರೀತಿಯಲ್ಲಿ ಮಾರಾಟ ಮಾಡುವವರ ಸಂಖ್ಯೆ ಹೆಚ್ಚಾಗಿದೆ.

ಈ ಕಾರಣಕ್ಕೆ ಬೆರಳೆಣಿಕೆಯಷ್ಟಿದ್ದ ತರಕಾರಿ ಮಾರಾಟಗಾರರ ಸಂಖ್ಯೆ ಈಗ ತೀರಾ ಹೆಚ್ಚಾಗಿದ್ದು, ಅಂಚೆ ಕಚೇರಿ ವೃತ್ತದಿಂದ ನಗರಸಭೆ ಕಚೇರಿ ಸಮೀಪದವರೆಗೂ ಮಾರಾಟಗಾರರ ಸಾಲು ಮುಂದುವರಿದಿದೆ. ತರಕಾರಿ ಮಾರಾಟಕ್ಕೆ ಉತ್ತಮ ಸ್ಪಂದನೆ ದೊರಕುತ್ತಿರುವುದನ್ನು ಗಮನಿಸಿದ ಹಣ್ಣಿನ ವ್ಯಾಪಾರಿಗಳು ಕೂಡ ಈಗ ಇದೇ ಸ್ಥಳದಲ್ಲಿ ವ್ಯಾಪಾರಕ್ಕೆ ಮುಂದಾಗಿದ್ದಾರೆ. ಹೀಗೆ ತರಕಾರಿ ಮತ್ತು ಹಣ್ಣುಗಳನ್ನು ಕೊಳ್ಳಲು ಬರುವ ಗ್ರಾಹಕರು ತಮ್ಮ ವಾಹನಗಳನ್ನು ಮಾರಾಟಗಾರರ ಮುಂದೆಯೇ ನಿಲ್ಲಿಸಿ ವ್ಯಾಪಾರ ಮಾಡುವುದು ಸಾಮಾನ್ಯವಾಗಿದೆ.

ಇದರ ಜೊತೆಗೆ ಎಲ್ಲೆಂದರಲ್ಲಿ ವಾಹನಗಳನ್ನು ನಿಲುಗಡೆ ಮಾಡುತ್ತಿರುವುದರಿಂದ ನಾಲ್ಕು ರಸ್ತೆಗಳು ಸೇರುವ ಈ ವೃತ್ತದ ರಸ್ತೆಯಲ್ಲಿ ಪಾದಚಾರಿಗಳು ಓಡಾಡುವುದೇ ಕಷ್ಟ ಎನ್ನುವಂತಾಗಿದೆ. ಅಲ್ಲದೇ ಪದೇಪದೇ ಟ್ರಾಫಿಕ್ ಜಾಮ್ ಆಗಿ ವಾಹನ ಸವಾರರಿಗೂ ಕಿರಿಕಿರಿಯಾಗುತ್ತಿದೆ. ಯಾರಾದರೂ ವಾಹನ ಸವಾರರು ಅಡ್ಡಾದಿಡ್ಡಿ ವಾಹನ ಚಲಾಯಿಸಿದರೆ ಎಲ್ಲರಿಗೂ ತೊಂದರೆಯಾಗುವ ಸಾಧ್ಯತೆ ಇದೆ. ರೈತರಿಗೆ ರಸ್ತೆಬದಿ ಹೊರತುಪಡಿಸಿ ಸೂಕ್ತ ಸ್ಥಳದಲ್ಲಿ ವ್ಯಾಪಾರಕ್ಕೆ ಅವಕಾಶ ಕಲ್ಪಿಸಬೇಕು.

**ಸಾರ್ವಜನಿಕರ ಅಸಮಾಧಾನ**

**ಗಣಪತಿ ಸಹಕಾರಿ ಬ್ಯಾಂಕ್‌ನ ವೃತ್ತಕ್ಕೆ ಹೊಂದಿಕೊಂಡಂತೆ ಇರುವ ನೆಹರೂ ಮೈದಾನದಲ್ಲಿ ರಸ್ತೆಯ ಇಕ್ಕೆಲಗಳಲ್ಲಿ ಬೀದಿ ಬದಿ ತರಕಾರಿ ವ್ಯಾಪಾರಸ್ಥರಿಗಾಗಿಯೇ ಸ್ಥಳಾವಕಾಶ ಕಲ್ಪಿಸಲಾಗಿದೆ. ಆದರೆ, ಅಲ್ಲಿಗೆ ತೆರಳದ ವ್ಯಾಪಾರಸ್ಥರು ನಗರದ ಪ್ರಮುಖ ಬೀದಿಯ ರಸ್ತೆ ಬದಿಯಲ್ಲಿ ವ್ಯಾಪಾರಕ್ಕೆ ಮುಂದಾಗಿರುವುದು ಸಾರ್ವಜನಿಕರ ಅಸಮಾಧಾನಕ್ಕೆ ಕಾರಣವಾಗಿದೆ.**


ಉದಯವಾಹಿನಿ ಚಿತ್ರ

**ಸಾರ್ವಜನಿಕರ ದೂರು**

**ಕೆಲವು ತಿಂಗಳ ಹಿಂದೆ ಸಾರ್ವಜನಿಕರ ದೂರು ಆಧರಿಸಿ ನಗರಸಭೆ ಹಾಗೂ ಪೊಲೀಸ್ ಅಧಿಕಾರಿಗಳು ಇಲ್ಲಿಂದ ರಸ್ತೆ ಬದಿ ವ್ಯಾಪಾರಸ್ಥರನ್ನು ತೆರವುಗೊಳಿಸಿದ್ದರು. ಆದರೆ, ಈಗ ಪುನಃ ಇದೇ ಸ್ಥಳದಲ್ಲಿ ವ್ಯಾಪಾರ ಆರಂಭಗೊಂಡಿರುವುದು ಸಾರ್ವಜನಿಕ ಉಪದ್ರವಕ್ಕೆ ಕಾರಣವಾಗಿದೆ.**

**ಬಡಾವಣೆಯ ರಸ್ತೆ ಬದಿಯಲ್ಲಿ ರೈತರಿಗೆ ಅನುಕೂಲವಾಗಲಿ ಎನ್ನುವ ಕಾರಣಕ್ಕೆ ವ್ಯಾಪಾರಕ್ಕೆ ಅವಕಾಶ ಕಲ್ಪಿಸಲಾಗಿತ್ತು. ಈಗ ರೈತರಲ್ಲದವರೂ ಅಲ್ಲಿ ವ್ಯಾಪಾರಕ್ಕೆ ಮುಂದಾಗಿರುವುದು ಸಮಸ್ಯೆ ಸೃಷ್ಟಿಸಿದೆ. ನಗರಸಭೆಯಿಂದ ಸೂಕ್ತ ಕ್ರಮ ಕೈಗೊಳ್ಳಲಾಗುವುದು. ನವೀನ್ ಕುಮಾರ್ ಚಾಮರಾಜಪೇಟೆ ಬಡಾವಣೆ ನಿವಾಸಿ ರಸ್ತೆ ಬದಿಯಲ್ಲಿ ತರಕಾರಿ ಹಣ್ಣಿನ ವ್ಯಾಪಾರಕ್ಕೆ ಅವಕಾಶ ನೀಡಿರುವುದು ಸಾರ್ವಜನಿಕ ಸುರಕ್ಷತೆ ದೃಷ್ಟಿಯಿಂದಲೂ ಸೂಕ್ತವಲ್ಲ. -ಎಚ್.ಕೆ.ನಾಗಪ್ಪ, ಸಹಾಯಕ ಕಾರ್ಯಪಾಲಕ**

**ಸಂಚಾರ ದಟ್ಟಣೆ ಮತ್ತು ಕಿರಿಕಿರಿ**

## ಎರಡು ಶಿಕ್ಷಕರ ಕ್ಷೇತ್ರ, ಒಂದು ಪದವೀಧರ ಕ್ಷೇತ್ರಕ್ಕೆ ನಾಮಪತ್ರ ಸಲ್ಲಿಕೆ ಆರಂಭ

• **ಉದಯವಾಹಿನಿ ದಾವಣಗೆರೆ**

ಚುನಾವಣಾ ಆಯೋಗವು ವಿಧಾನ ಪರಿಷತ್ತಿನ ದ್ವೈವಾರ್ಷಿಕ ಚುನಾವಣೆಗೆ ವೇಳಾಪಟ್ಟಿ ಪ್ರಕಟಿಸಿದ್ದು ದಾವಣಗೆರೆ ಜಿಲ್ಲೆ ಎರಡು ಶಿಕ್ಷಕರ ಕ್ಷೇತ್ರ ಹಾಗೂ ಒಂದು ಪದವೀಧರರ ಕ್ಷೇತ್ರದ ವ್ಯಾಪ್ತಿಯನ್ನು ಹೊಂದಿದೆ. ಮೇ 9ರಿಂದ ನಾಮಪತ್ರ ಸಲ್ಲಿಕೆ ಆರಂಭವಾಗಲಿದೆ ಎಂದು ಜಿಲ್ಲಾಧಿಕಾರಿ ಹಾಗೂ ಸಹಾಯಕ ಚುನಾವಣಾಧಿಕಾರಿ ಡಾ.ವೆಂಕಟೇಶ್ ಎಂ.ವಿ ತಿಳಿಸಿದ್ದಾರೆ.

ಜೂನ್ 21 ಕ್ಕೆ ವಿಧಾನ ಪರಿಷತ್ತಿನ 3 ಪದವೀಧರರ ಹಾಗೂ 3 ಶಿಕ್ಷಕರ ಕ್ಷೇತ್ರದ ಸ್ಥಾನಗಳ ಅವಧಿ ಮುಕ್ತಾಯವಾಗಿದೆ. ಆದ್ದರಿಂದ ದ್ವೈವಾರ್ಷಿಕ ಚುನಾವಣೆಗೆ ವೇಳಾಪಟ್ಟಿ ಪ್ರಕಟಿಸಲಾಗಿದೆ. ಮೇ 9 ರಂದು ಅಧಿಸೂಚನೆ ಪ್ರಕಟವಾಗಲಿದ್ದು ಮೇ 16 ರವರೆಗೆ ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನವಾಗಿರುತ್ತದೆ. ಮೇ 17 ರಂದು ನಾಮಪತ್ರಗಳ ಪರಿಶೀಲನೆ, ಮೇ 20 ರಂದು ನಾಮಪತ್ರಗಳ ವಾಪಸ್ ಪಡೆಯಲು ಕೊನೆಯ ದಿನವಾಗಿರುತ್ತದೆ.


ಉದಯವಾಹಿನಿ ಚಿತ್ರ

ಜೂನ್ 3 ರಂದು ಬೆಳಗ್ಗೆ 8 ರಿಂದ ಸಂಜೆ 4 ಗಂಟೆಯವರೆಗೆ ಮತದಾನ ನಡೆಯಲಿದೆ. ಮತ ಎಣಿಕೆಯು ಜೂನ್ 6 ರಂದು ನಡೆಯಲಿದ್ದು. ಜೂನ್ 12 ರವರೆಗೆ ನೀತಿ ಸಂಹಿತೆ ಜಾರಿಯಲ್ಲಿರುತ್ತದೆ. ವಿಧಾನ ಪರಿಷತ್ ಚುನಾವಣಾ ವೇಳಾಪಟ್ಟಿ ಪ್ರಕಟವಾಗಿರುವುದರಿಂದ ನೀತಿಸಂಹಿತೆ ಜಾರಿಯಲ್ಲಿರುತ್ತದೆ.

**ಕರ್ನಾಟಕ ಆಗ್ನೇಯ ಶಿಕ್ಷಕರ ಕ್ಷೇತ್ರದ ವ್ಯಾಪ್ತಿ:** ಚಿತ್ರದುರ್ಗ, ತುಮಕೂರು, ಕೋಲಾರ, ಚಿಕ್ಕಬಳ್ಳಾಪುರ ಜಿಲ್ಲೆಗಳು ಹಾಗೂ ದಾವಣಗೆರೆ ಜಿಲ್ಲೆಯ ದಾವಣಗೆರೆ, ಹರಿಹರ, ಜಗಳೂರು ತಾಲ್ಲೂಕುಗಳು ಸೇರಲಿವೆ.

**ಕರ್ನಾಟಕ ನೈರುತ್ಯ ಶಿಕ್ಷಕರ ಕ್ಷೇತ್ರದ ವ್ಯಾಪ್ತಿ:** ಶಿವಮೊಗ್ಗ, ದಕ್ಷಿಣ ಕನ್ನಡ, ಉಡುಪಿ, ಚಿಕ್ಕಮಗಳೂರು, ಕೊಡಗು ಜಿಲ್ಲೆಗಳು ಹಾಗೂ ದಾವಣಗೆರೆ ಜಿಲ್ಲೆಯ ಚನ್ನಗಿರಿ, ಹೊನ್ನಾಳಿ, ನ್ಯಾಮತಿ ತಾಲ್ಲೂಕುಗಳು ಈ ಕ್ಷೇತ್ರದಲ್ಲಿ ಬರಲಿವೆ.

**ಒಟ್ಟು 3 ವಿಧಾನ ಪರಿಷತ್**

**ದಾವಣಗೆರೆ ಜಿಲ್ಲೆಯಲ್ಲಿ ಒಟ್ಟು 3 ವಿಧಾನ ಪರಿಷತ್ ಸದಸ್ಯರ ಆಯ್ಕೆಗೆ ಚುನಾವಣೆ ನಡೆಯಲಿದೆ. ಕರ್ನಾಟಕ ನೈರುತ್ಯ ಪದವೀಧರರ ಕ್ಷೇತ್ರಕ್ಕೆ ಶಿವಮೊಗ್ಗ, ದಕ್ಷಿಣ ಕನ್ನಡ, ಉಡುಪಿ, ಚಿಕ್ಕಮಗಳೂರು, ಕೊಡಗು ಜಿಲ್ಲೆಗಳು ಹಾಗೂ ದಾವಣಗೆರೆ ಜಿಲ್ಲೆಯ ಚನ್ನಗಿರಿ, ಹೊನ್ನಾಳಿ, ನ್ಯಾಮತಿ ತಾಲೂಕುಗಳು ಸೇರಲಿವೆ.**

## ಬಿರುಗಾಳಿ ಮಳೆಗೆ ಅಪಾರ ಪ್ರಮಾಣದ ಹಾನಿ

• **ಉದಯವಾಹಿನಿ ಗಂಗಾವತಿ**

ಬಿರುಗಾಳಿ ಮಳೆಗೆ ಗಂಗಾವತಿ ನಗರ ಸೇರಿದಂತೆ ತಾಲ್ಲೂಕಿನಾದ್ಯಂತ ಅಪಾರ ಪ್ರಮಾಣದಲ್ಲಿ ಹಾನಿಯಾಗಿದೆ . ಗಂಗಾವತಿ ನಗರದಲ್ಲಿ ರಾತ್ರಿ 10 ಗಂಟೆಯಿಂದ ಆರಂಭವಾದ ಬಿರುಗಾಳಿ ಮಳೆಗೆ ಗಂಗಾವತಿಯಲ್ಲಿ 25ಕ್ಕೂ ಹೆಚ್ಚು ವಿದ್ಯುತ್ ಕಂಬಗಳು, ಗ್ರಾಮೀಣ ಭಾಗದಲ್ಲಿ 15 ವಿದ್ಯುತ್ ಕಂಬಗಳು, 8 ಟ್ರಾನ್ಸ್‌ಫಾರ್ಮಾರಗಳು ನೆಲಕ್ಕುರುಳಿವೆ.

ತಾಲ್ಲೂಕಿನ ಆನೆಗೊಂದಿ ಭಾಗದಲ್ಲಿ ಭತ್ತ ಕಟಾವು ಮಾಡಿ ಉತ್ಸವ ಜಾಗದಲ್ಲಿ ಒಣಗಿಸಲು ಹಾಕಿದ್ದ ಭತ್ತದ ರಾಶಿಗಳಿಗೆ ಮಳೆ ನೀರು ನುಗ್ಗಿ ಅಪಾರ ನಷ್ಟವಾಗಿದೆ. ಬಾಳೆ ಬೆಳೆ ಬಿರುಗಾಳಿಗೆ ನೆಲಕ್ಕೆ ಉರುಳಿದ್ದು ಅಪಾರ ಪ್ರಮಾಣದಲ್ಲಿ ನಷ್ಟವಾಗಿದೆ. ಗಂಗಾವತಿ ನಗರ ಮತ್ತು ಗ್ರಾಮೀಣ ಭಾಗದಲ್ಲಿ ರಾತ್ರಿ 10 ಗಂಟೆಯಿಂದ ವಿದ್ಯುತ್ ಸಂಪರ್ಕ ಕಡಿತವಾಗಿದ್ದು ಗುರುವಾರ ಬೆಳಿಗ್ಗೆ 10 ಗಂಟೆಯಾದರೂ ಇನ್ನೂ ವಿದ್ಯುತ್ ಬಂದಿಲ್ಲ. ಇದರಿಂದ ಗಂಗಾವತಿ ಹಾಗೂ ಸುತ್ತಲಿನ ಗ್ರಾಮಗಳ ಜನರಿಗೆ ಕುಡಿಯುವ ನೀರು, ತೊಂದರೆಯಾಗಿದೆ.


ಉದಯವಾಹಿನಿ ಚಿತ್ರ

ಗಂಗಾವತಿ ನಗರದ ಕೋರ್ಟ್ ಎದುರಿಗಿನ ಬೃಹತ್ ಮರ ಹಾಗೂ ಜಯನಗರ ಮತ್ತು ಸರೋಜನಗರ ಸೇರಿದಂತೆ ಹಲವು ಭಾಗದಲ್ಲಿ ಗಿಡಮರಗಳು ಧರೆಗೆ ಉರುಳಿವೆ .ಇದರಿಂದ ಸಂಚಾರ ಅಸ್ತವ್ಯಸ್ತವಾಗಿದ್ದು ನಗರ ಸಭೆ ಮತ್ತು ಅರಣ್ಯ ಇಲಾಖೆಯವರು ಸಮರೋಪಾದಿಯಲ್ಲಿ ಮರಗಳನ್ನು ಕಡಿತು ಸಂಚಾರಕ್ಕೆ ರಸ್ತೆಗಳನ್ನು ಮುಕ್ತ ಮಾಡುತ್ತಿದ್ದಾರೆ.

## ಸ್ಟ್ರಾಂಗ್ ರೂಮ್‌ನಲ್ಲಿ ಮತಯಂತ್ರ: ಬಿಗಿ ಭದ್ರತೆ

• **ಉದಯವಾಹಿನಿ ಕಲಬುರಗಿ**

ಲೋಕಸಭಾ ಚುನಾವಣೆಯ ಕಲಬುರಗಿ ಎಸ್‌ಸಿ ಮೀಸಲು ಕ್ಷೇತ್ರದ ಮತದಾನದ ಬಳಿಕ ಎಲ್ಲಾ ಬ್ಯಾಲೆಟ್ ಬ್ಯಾಕ್ಸ್‌ಗಳನ್ನು ಗುಲಬರ್ಗಾ ವಿಶ್ವವಿದ್ಯಾಲಯದ ಕ್ಯಾಂಪಸ್‌ನಲ್ಲಿ ಸ್ಥಾಪಿಸಿರುವ ಭದ್ರತಾ ಕೊಠಡಿಗಳಲ್ಲಿ ಇರಿಸಿ, ಬಿಗಿ ಭದ್ರತೆ ಕಲ್ಪಿಸಲಾಗಿದೆ.

ಕಲಬುರಗಿ ಉತ್ತರ, ಕಲಬುರಗಿ ದಕ್ಷಿಣ, ಕಲಬುರಗಿ ಗ್ರಾಮೀಣ, ಚಿತ್ತಾಪುರ, ಅಫಜಲಪುರ, ಜೇವರ್ಗಿ ಹಾಗೂ ಯಾದಗಿರಿ ಜಿಲ್ಲೆಯ ಗುರುಮಠಕಲ್ ಕ್ಷೇತ್ರಗಳಲ್ಲಿನ 2,166 ಮತಗಟ್ಟೆಗಳಲ್ಲಿನ ವಿದ್ಯುನ್ಮಾನ ಮತಯಂತ್ರಗಳನ್ನು ಪೊಲೀಸ್ ಸರ್ಪಗಾವಲಿನಲ್ಲಿ ತಂದು ಭದ್ರತಾ ಕೊಠಡಿಗಳಲ್ಲಿ ಸಂಗ್ರಹಿಸಿ ಇಡಲಾಗಿದೆ.

ವಿಶ್ವವಿದ್ಯಾಲಯ ಕ್ಯಾಂಪಸ್‌ನ ವಿವಿಧ ವಿಭಾಗಗಳು, ಕಟ್ಟಡಗಳಲ್ಲಿನ ಸ್ಟ್ರಾಂಗ್ ರೂಮ್‌ಗಳಲ್ಲಿ ಮತ ಯಂತ್ರಗಳನ್ನು ಇರಿಸಲಾಯಿತು. ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ಫೌಜಿಯಾ ತರನ್ನುಮ್, ಪೊಲೀಸ್ ಕಮಿಷನರ್ ಚೇತನ್ ಆರ್. ಸೇರಿದಂತೆ ಚುನಾವಣಾ ವೀಕ್ಷಕರು, ರಾಜಕೀಯ ಪಕ್ಷಗಳ ಮುಖಂಡರ ಸಮ್ಮುಖದಲ್ಲಿ ಭದ್ರತಾ ಕೊಠಡಿಗಳನ್ನು ಸೀಲ್ ಮಾಡಲಾಯಿತು.

ವಿಶ್ವವಿದ್ಯಾಲಯದ ಗಣಿತ ವಿಭಾಗದಲ್ಲಿ ಅಫಜಲಪುರ, ಪರೀಕ್ಷಾ ಕೇಂದ್ರದಲ್ಲಿ (ಸೆಲ್ಯುಲರ್ ಹಾಲ್) ಜೇವರ್ಗಿ, ಒಳಾಂಗಣ ಕ್ರೀಡಾಂಗಣದ ಬಲಗಡೆ ಗುರುಮಠಕಲ್ ಮತ್ತು ಎಡಗಡೆ ಕಲಬುರಗಿ ಉತ್ತರ, ಕನ್ನಡ ಅಧ್ಯಯನ ಕೇಂದ್ರದ ಹರಿಹರ ಸಭಾಂಗಣದಲ್ಲಿ ಸೇಡಂ, ಪರೀಕ್ಷಾ ಕೇಂದ್ರದಲ್ಲಿ ಚಿತ್ತಾಪುರ ಮತ್ತು ಕಲಬುರಗಿ ಗ್ರಾಮೀಣ ಹಾಗೂ ಸಸ್ಯವಿಜ್ಞಾನ ವಿಭಾಗದಲ್ಲಿ ಕಲಬುರಗಿ ದಕ್ಷಿಣ ಮತ ಕ್ಷೇತ್ರದ ಮತಯಂತ್ರಗಳನ್ನು ಇರಿಸಲಾಗಿದೆ.


ಉದಯವಾಹಿನಿ ಚಿತ್ರ

**ಮತಯಂತ್ರಗಳನ್ನು ಇರಿಸಿದ ವಿಶ್ವವಿದ್ಯಾಲಯ ಆವರಣದಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿದೆ. ಮತಯತ್ರ ಇರಿಸಲಾದ ಭದ್ರತಾ ಕೇಂದ್ರಗಳ ವ್ಯಾಪ್ತಿಯಲ್ಲಿ ಸಾರ್ವಜನಿಕರು ಅನಗತ್ಯವಾಗಿ ಓಡಾಡಬಾರದು**
**-ಚೇತನ್ ಆರ್, ಪೊಲೀಸ್ ಕಮಿಷನರ್**

## ವಿವಿಧೆಡೆ ಸಾಧಾರಣ ಮಳೆ

• **ಉದಯವಾಹಿನಿ ರಾಯಚೂರು**

ಜಿಲ್ಲೆಯ ಕವಿತಾಳ, ಮಾನ್ವಿ ಸೇರಿದಂತೆ ವಿವಿಧೆಡೆ ಗುರುವಾರ ಸಾಧಾರಣ ಮಳೆಯಾಗಿದೆ.

ಲಿಂಗಸುಗೂರು ತಾಲ್ಲೂಕಿನ ಮುದಗಲ್‌ನಲ್ಲಿ 10.4 ಮಿ.ಮೀ, ಹಟ್ಟಿಯಲ್ಲಿ 1 ಮಿ.ಮೀ, ರಾಯಚೂರು ತಾಲ್ಲೂಕಿನ ಗಿಲ್ಲೆಸುಗೂರಲ್ಲಿ 1.5 ಮಿ.ಮೀ, ದೇವಸುಗೂರಲ್ಲಿ 6.8 ಮಿ.ಮೀ, ಮಾನ್ವಿ ತಾಲ್ಲೂಕಿನ ರಾಜಲಬಂಡಾದಲ್ಲಿ 10 ಮಿ.ಮೀ ಮಳೆ ದಾಖಲಾಗಿದೆ

ರಾಯಚೂರಲ್ಲಿ ಗರಿಷ್ಠ ಉಷ್ಣಾಂಶ 43 ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ. ರಾತ್ರಿ 8 ಕಿ.ಮೀ. ವೇಗದಲ್ಲಿ ಗಾಳಿ ಬೀಸುತ್ತಿರುವ ಕಾರಣ ಸ್ವಲ್ಪ ಮಟ್ಟಿಗೆ ಧಗೆ ಕಡಿಮೆಯಾಗಿದೆ.


ಉದಯವಾಹಿನಿ ಚಿತ್ರ

## ಪವಿತ್ರಾ, ಕಣ್ಣೂರು ಜಿಲ್ಲೆಗೆ ಪ್ರಥಮ ಸ್ಥಾನ

• **ಉದಯವಾಹಿನಿ ಮುದ್ದೇಬಿಹಾಳ**

ಮುದ್ದೇಬಿಹಾಳ ತಾಲ್ಲೂಕಿನ ಬಿದರಕುಂದಿ ಸರ್ಕಾರಿ ಆದರ್ಶ ಆರ್‌ಎಂಎಸ್‌ಎ ಶಾಲೆಯ ವಿದ್ಯಾರ್ಥಿನಿ ಢವಳಗಿ ಗ್ರಾಮದ ಪವಿತ್ರಾ ಮಡಿವಾಳಪ್ಪಗೌಡ ಕೊಣ್ಣೂರ ಎಸ್ಸೆಸ್ಸೆಲ್ಸಿ ಪರೀಕ್ಷೆಯ ಇಂಗ್ಲೀಷ್ ಮಾಧ್ಯಮ ವಿಭಾಗದಲ್ಲಿ 623 ಅಂಕ ಪಡೆದು ರಾಜ್ಯಕ್ಕೆ 3ನೇ ಮತ್ತು ವಿಜಯಪುರ ಜಿಲ್ಲೆಗೆ ಮೊದಲ ಸ್ಥಾನ ಪಡೆದಿದ್ದಾಳೆ. ಇಂಗ್ಲೀಷ ಮತ್ತು ವಿಜ್ಞಾನದಲ್ಲಿ ತಲಾ 99 ಅಂಕ, ಕನ್ನಡಕ್ಕೆ 125, ಉಳಿದೆಲ್ಲ ವಿಷಯಗಳಿಗೆ 100 ಅಂಕಗಳಿಸಿದ್ದಾಳೆ.

ಇವರ ತಂದೆ ಪಿಯುಸಿವರೆಗೆ ಓದಿದ್ದು ಕಲಬುರ್ಗಿ ಸಾರಿಗೆ ಘಟಕದಲ್ಲಿ ಕಂಡಕ್ಟರ್ ಆಗಿದ್ದಾರೆ. ತಾಯಿ ಎಸ್ಸೆಸ್ಸೆಲ್ಸಿವರೆಗೆ ಓದಿದ್ದು ಗೃಹಿಣಿಯಾಗಿದ್ದಾರೆ.

ಹಾರ್ಡ್ ವರ್ಕಗಿಂತ ಸ್ಮಾರ್ಟ ವರ್ಕ್‌ಗೆ ಒತ್ತು ಕೊಟ್ಟಿದ್ದು ಈ ಸಾಧನೆಗೆ ಅವಕಾಶವಾಗಿದೆ ಎಂದಿರು ವ ಆಕೆ ಉತ್ತಮ ಮಾರ್ಗದರ್ಶನ ನೀಡಿದ ಶಾಲೆಯ ಎಚ್‌ಎಂ, ಶಿಕ್ಷಕರನ್ನು ಸ್ಮರಿಸುತ್ತಾಳೆ. ಪಿಯುಸಿ ವಿಜ್ಞಾನದ ನಂತರ ಎಂಬಿಬಿಎಸ್ ಮಾಡುವ ಕನಸು ಈಕೆಯದ್ದಾಗಿದೆ.


ಫಲಿತಾಂಶ ಹೊರಬಿದ್ದ ಕೂಡಲೇ ತಂದೆ, ತಾಯಿ ಜೊತೆ ಶಾಲೆಗೆ ಬಂದಿದ್ದ ಪವಿತ್ರಾಳನ್ನು ಬಿಇಓ ಬಿ.ಎಸ್.ಸಾವಳಗಿ, ಇಸಿಓ ಮತ್ತು ಎಸ್‌ಎಸ್‌ಎಲ್ಸಿ ನೋಡಲ್ ಅಧಿಕಾರಿ ಎಚ್.ಎ.ಮೇಟಿ, ಮುಖ್ಯ ಶಿಕ್ಷಕಿ ನೀಲಮ್ಮ ತೆಗ್ಗಿನಮಠ, ಶಿಕ್ಷಕರು ಸನ್ಮಾನಿಸಿ, ಸಿಹಿ ತಿನ್ನಿಸಿ ಶುಭ ಕೋರಿದರು.


ಉದಯವಾಹಿನಿ ಚಿತ್ರ

**ವಿಜಯಪುರ ಜಿಲ್ಲೆಗೆ ಮೊದಲ ಸ್ಥಾನ**

## ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ 625ಕ್ಕೆ 624 ಅಂಕ: ರೈತನ ಮಗ ರಾಜ್ಯಕ್ಕೆ ದ್ವಿತೀಯ

• **ಉದಯವಾಹಿನಿ ಬೆಳಗಾವಿ**



ಶಾಲಾ ಶಿಕ್ಷಣ ಇಲಾಖೆಯಿಂದ ಎಸ್ ಎಸ್ ಎಲ್ ಸಿ ಪರೀಕ್ಷೆ-1ರ ಫಲಿತಾಂಶವನ್ನು ಪ್ರಕಟಿಸಲಾಗಿದೆ. ಈ ಪರೀಕ್ಷೆಯಲ್ಲಿ 625ಕ್ಕೆ 624 ಅಂಕಗಳಿಸುವ ಮೂಲಕ ರೈತನ ಮಗನೊಬ್ಬ ರಾಜ್ಯಕ್ಕೆ ದ್ವಿತೀಯ ಸ್ಥಾನ ಪಡೆದಿದ್ದಾನೆ. ಹೌದು. ಬೆಳಗಾವಿ ಜಿಲ್ಲೆಯ ಕಾಗವಾಡ ತಾಲ್ಲೂಕಿನ ಶೇಡಬಾಳ ಗ್ರಾಮದ ಸಿದ್ಧಾಂತ ನಾಯಿಕ ಬಾಗಡಗೆ ಅವರು 625 ಅಂಕಗಳಿಗೆ 624 ಅಂಕವನ್ನು ಗಳಿಸುವ ಮೂಲಕ ರಾಜ್ಯಕ್ಕೆ ದ್ವಿತೀಯ ಸ್ಥಾನವನ್ನು ಪಡೆದುಕೊಂಡಿದ್ದಾನೆ. ಅಂದಹಾಗೇ ಬೆಳಗಾವಿ ಜಿಲ್ಲೆಯ ಕಾಗವಾಡ ತಾಲೂಕಿನ ಶೇಡಬಾಳ ಗ್ರಾಮ ಮಹಾರಾಷ್ಟ್ರ ಗಡಿಗೆ ಹೊಂದಿಕೊಂಡಿದೆ. ಇಲ್ಲಿನ ಸುಬಲಸಾಗರ ಪ್ರೌಢ ವಿದ್ಯಾಮಂದಿರದ ಶಾಲೆಯಲ್ಲಿ ಸಿದ್ಧಾಂತ ನಾಯಿಕಬಾ ಗಡಗೆ ಎಸ್ ಎಸ್ ಎಲ್ ಸಿ ವ್ಯಾಸಂಗ ಮಾಡುತ್ತಿದ್ದರು. ಈತ ರೈತನ ಮಗ ಎಂಬುದಾಗಿ ತಿಳಿದು ಬಂದಿದೆ. ಹೀಗಿದ್ದೂ ಇಂಗ್ಲೀಷ್‌ನಲ್ಲಿ 99 ಪಡೆದಿದ್ದು, ಉಳಿದ ವಿಷಯಗಳಲ್ಲಿ ಔಟ್ ಆಫ್ ಔಟ್ ಅಂಕ ಪಡೆದಿದ್ದಾನೆ.

## ಪೂಜೆಯ ಹಕ್ಕಿಗಾಗಿ ಕಿತ್ತಾಡಿಕೊಂಡ ಗೋಕರ್ಣ ಮಹಾಬಲೇಶ್ವರದ ಅರ್ಚಕರು

• **ಉದಯವಾಹಿನಿ ಗೋಕಾರ್ಣ**

ಗೋಕರ್ಣ ಮಹಾಬಲೇಶ್ವರ ದೇವಸ್ಥಾನದಲ್ಲಿಪೂಜೆಯ ಹಕ್ಕಿಗಾಗಿ ಅರ್ಚಕರ ನಡುವೆ ಗಲಾಟೆ ಮಾಡಿಕೊಂಡಿರುವ ಘಟನೆ ನಡೆದಿದೆ. ಈ ನಡುವೆ ದೇವಸ್ಥಾನದ ಗರ್ಭಗುಡಿಯಲ್ಲಿ ಭಕ್ತರಿಗೆ ದೇವರ ದರ್ಶನಕ್ಕೆ ಅವಕಾಶ ನೀಡದೇ ಇದ್ದ ಸನ್ನಿವೇಶ ಕಂಡು ಬಂದಿದೆ, ಅಂತ ಭಕ್ತರು ಆರೋಪಿಸಿದ್ದಾರೆ. ನಂದಿ ಮಂಟಪದಲ್ಲಿ ತೀರ್ಥ ನೀಡುವ ಬಾರಿಗಾಗಿ ಎರಡು ಕುಟುಂಬದವರು ದೇವಸ್ಥಾನದಲ್ಲಿ ಜಗಳವಾಡಿಕೊಂಡಿದ್ದಾರೆ ಅಂತ ಆರೋಪಿಸಲಾಗಿದೆ. ನಂದಿ ಮಂಟಪದಲ್ಲಿ ತೀರ್ಥ ನೀಡುವ ಹಕ್ಕು ನಮ್ಮ ಬಾರಿ ಎಂದು ದೇವಸ್ಥಾನದ ಗರ್ಭಗುಡಿಯಲ್ಲಿ ಗೋಪಿ ಕುಟುಂಬ ತಗಾದೆ ತೆಗೆದಿದ್ದ ಕಾರಣಕ್ಕೆ ಈ ಗಲಾಟೆ ನಡೆದಿದೆಯಂತೆ. ಅಂದ ಹಾಗೇ ಜಂಬೆ ಕುಟುಂಬ ಹಾಗೂ ಗೋಪಿ ಕುಟುಂಬ ಹಕ್ಕಿಗಾಗಿ ಕೋರ್ಟ್ ಮೊರೆ ಹೋಗಿದ್ದನ್ನು ಸ್ಮರಿಸಬಹುದಾಗಿದೆ.


ಉದಯವಾಹಿನಿ ಚಿತ್ರ

## ಬಿಸಿಲಿನ ಬಿಸಿ: ತಂಪು ಪಾನೀಯ ದರ ಏರಿಕೆ

• **ಉದಯವಾಹಿನಿ ಭದ್ರಾವತಿ**

ಲೋಕಸಭೆ ಚುನಾವಣೆ ಕಾವು ಇಳಿದಿದೆ. ಆದರೆ, ಬಿರುಬಿಸಿಲಿನ ಕಾವು ಹೆಚ್ಚುತ್ತಲೇ ಸಾಗಿದೆ. ನಗರದ ತಾಪಮಾನವು ಕಳೆದ ಒಂದು ವಾರದಿಂದ 37ರಿಂದ 38 ಡಿಗ್ರಿ ಸೆಲ್ಸಿಯಸ್‌ವರೆಗೂ ಇದ್ದು, ಜನರು ಬಿಸಿಲಿನ ತಾಪಕ್ಕೆ ಹೈರಾಣಾಗಿ ತಂಪು ಪಾನೀಯಗಳತ್ತ ಮುಖ ಮಾಡುತ್ತಿದ್ದಾರೆ. ಆದರೆ, ಎಳನೀರು, ಕಬ್ಬಿನ ಹಾಲು ಹಾಗೂ ಹಣ್ಣಿನ ಜೂಸ್‌ಗಳ ದರ ಏರಿಕೆಯಾಗಿದ್ದು, ಸಾರ್ವಜನಿಕರಿಗೆ ಬೆಲೆ ಏರಿಕೆ ತಾಪವೂ ತಟ್ಟುತ್ತಿದೆ. ಬಿಸಿಲಿನ ಧಗೆ ಹೆಚ್ಚಾಗಿರುವುದರಿಂದ ಆರೋಗ್ಯದ ಕಾಳಜಿ ಇರುವವರು ಹೆಚ್ಚಾಗಿ ಹಣ್ಣಿನ ಜೂಸ್, ಕಬ್ಬಿನ ಹಾಲು ಹಾಗೂ ಎಳನೀರು ಸೇವಿಸುತ್ತಿದ್ದಾರೆ. ಇನ್ನು ಮಕ್ಕಳು, ಮಹಿಳೆಯರು ಐಸ್‌ಕ್ರೀಂ ಅನ್ನೇ ಹೆಚ್ಚಾಗಿ ಖರೀದಿ ಮಾಡುತ್ತಿದ್ದಾರೆ. ಬೇಡಿಕೆ ಹೆಚ್ಚಾಗುತ್ತಿದ್ದಂತೆ ಅವುಗಳ ಬೆಲೆಯೂ ಗಗನಕ್ಕೆ ಏರಿದೆ.

ನಗರದ ಕೆಲವೆಡೆ ಕೆಲವು ದಿನಗಳ ಹಿಂದೆ ತುಂತುರು ಮಳೆಯಾಗಿದ್ದು ಬಿಟ್ಟರೆ ಮತ್ತೆ ಮಳೆಯ ಸುಳಿವಿಲ್ಲ. ನಗರದ ಜನರು ಸುಡು ಬಿಸಿಲಿಗೆ ತತ್ತರಿಸಿ ಹೋಗಿದ್ದಾರೆ. ಇನ್ನು ಕೆಲಸದ ನಿಮಿತ್ತ ಮನೆ, ಕಚೇರಿಗಳಿಂದ ಹೊರಬರುವ ಜನ ಕೊಡೆ, ಟೋಪಿಗಳ ಮೊರೆ ಹೋಗಿದ್ದಾರೆ. ರಸ್ತೆ ಬದಿ, ಬಸ್ ನಿಲ್ದಾಣ ಸೇರಿ ಸಾರ್ವಜನಿಕ ಸ್ಥಳಗಳಲ್ಲಿ ಎಳನೀರು, ಮಜ್ಜಿಗೆ, ಜ್ಯೂಸ್, ಕಬ್ಬಿನ ಹಾಲು ಸೇವಿಸಿ ಬಾಯಾರಿಕೆ ನೀಗಿಸಿಕೊಳ್ಳುತ್ತಿದ್ದಾರೆ. ತಂಪಾದ ಪಾನೀಯ ಸೇವನೆ ಮಾಡಿ ದೇಹವನ್ನ ತಂಪು ಮಾಡಿಕೊಳ್ಳುತ್ತಿದ್ದಾರೆ.


ಉದಯವಾಹಿನಿ ಚಿತ್ರ

## ಪ್ರತ್ಯೇಕ ಸ್ಥಳದಲ್ಲಿ ನ್ಯಾಯಾಲಯ ವಿಚಾರಣೆ ನಡೆಸಲು ಪತ್ರ

• **ಉದಯವಾಹಿನಿ ಗದಗ**

ಪೆನ್ ಡ್ರೈವ್ ಪ್ರಕರಣಗಳ ದೂರುದಾರರ, ನೊಂದ ಮಹಿಳೆಯರ, ಸಾಕ್ಷಿದಾರರ ಗೌಪ್ಯತೆ ಕಾಪಾಡುವುದು, ರಕ್ಷಣೆ ನೀಡುವ ಸಲುವಾಗಿ ವಿಚಾರಣೆ ದಿನಗಳಂದು ಎಸ್‌ಐಟಿ ವಿಚಾರಣೆ ನಡೆಸುವ ನ್ಯಾಯಾಲಯಗಳನ್ನು ಗುರುನಾನಕ ಭವನಕ್ಕೆ ಸ್ಥಳಾಂತರಿಸಲು ಹೈಕೋರ್ಟ್ ರಿಜಿಸ್ಟ್ರಾರ್‌ಗೆ ಪತ್ರ ಬರೆಯಲಾಗಿದೆ ಎಂದು ಕಾನೂನು ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹಾಸನ ಜಿಲ್ಲೆಯಲ್ಲಿ ಮಹಿಳೆಯರ ಮೇಲೆ ನಡೆದ ದೌರ್ಜನ್ಯ ಪ್ರಕರಣಕ್ಕೆ ಸಂಬಂಧಿಸಿದಂತೆ ಈಗಾಗಲೇ ಎಸ್‌ಐಟಿ ಸೂಕ್ಷ್ಮವಾಗಿ ತನಿಖೆ ಮಾಡುತ್ತಿದೆ. ಪೆನ್ ಡ್ರೈವ್ ಪ್ರಕರಣಗಳ ವಿಚಾರಣೆ ಸಲುವಾಗಿ ಪ್ರಕರಣಗಳ ವಿಚಾರಣೆ ದಿನಗಳಂದು ಮಾತ್ರ ಬೆಂಗಳೂರಿನ ಯುಜನ ಸೇವಾ ಹಾಗೂ ಕ್ರೀಡಾ ಇಲಾಖೆಯ ಗುರುನಾನಕ ಭವನಕ್ಕೆ 42ನೇ ಎಸಿಎಂಎಂ ನ್ಯಾಯಾಲಯ, ಜನಪ್ರತಿನಿಧಿಗಳ ವಿಶೇಷ ನ್ಯಾಯಲಯ, ಸಿವಿಲ್ ಕೋರ್ಟ್ ಆಂಡ್ ಸೆಷನ್ ಜಡ್ಜ್ ನ್ಯಾಯಾಲಯಗಳನ್ನು ತಾತ್ಕಾಲಿಕವಾಗಿ ಸ್ಥಳಾಂತರಿಸುವಂತೆ ಪತ್ರ ಬರೆಯಲಾಗಿದೆ ಎಂದರು. ಶಾಂತಿಯುತ ಚುನಾವಣೆ ನಡೆದಿದ್ದು, ಬಹುದೊಡ್ಡ ಸಂಖ್ಯೆಯಲ್ಲಿ ಮತದಾರ ಶಾಂತಿ, ಶಿಸ್ತು ಕಾಪಾಡಿಕೊಂಡು ಮತದಾನ ಮಾಡಿದ್ದಾರೆ. ಯಾವುದೇ ಗದ್ದಲ, ಗಲಾಟೆ, ಪ್ರಕರಣ ದಾಖಲಾಗದೇ ಶಾಂತಿಯುತ ಮತದಾನ ನಡೆದಿದ್ದಕ್ಕೆ ಜನತೆಗೆ ಕೃತಜ್ಞತೆ ಸಲ್ಲಿಸುತ್ತೇನೆ. ಮಹಿಳೆಯರು ಈಬಾರಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದಾರೆ. ಬೆಳಿಗ್ಗೆ 7ರಿಂದಲೇ ಮತಗಟ್ಟೆಗೆ ಹೋಗಿ ಮತ ಚಲಾಯಿಸಿದ್ದಾರೆ. ಬದುಕು-ಭಾವನೆ, ಬಡವ-ಶ್ರೀಮಂತರ ನಡುವೆ ನಡೆದ ಚುನಾವಣೆಯಾಗಿದ್ದು, ಈ ಚುನಾವಣೆ ಗ್ಯಾರಂಟಿ ಯೋಜನೆಗೆ ರೆಫರೆಂಡಂ ಇದ್ದಹಾಗೆ ಎಂದು ಎಚ್.ಕೆ ಪಾಟೀಲ್ ಹೇಳಿದರು.



ಉದಯವಾಹಿನಿ ಚಿತ್ರ

## ತಲೆಗೆ ಬೀಯರ್ ಬಾಟಲಿಯಿಂದ ಹೊಡೆದು ಯುವಕನ ಹತ್ಯೆ: ಗೆಳೆಯರ ಜೊತೆ ಪಾರ್ಟಿ ಮಾಡಿದ್ದ ಯುವಕ

• **ಉದಯವಾಹಿನಿ ಮುಂಡರಗಿ**

ಗದಗ ಜಿಲ್ಲೆಯ ಮುಂಡರಗಿ ಪಟ್ಟಣದ ಹೊರವಲಯದ ಹೌಸಿಂಗ್ ಬೋರ್ಡ್ ಕಾಲೋನಿಯಲ್ಲಿ ಯುವಕನೋರ್ವನ ತಲೆಗೆ ಬೀಯರ್ ಬಾಟಲಿಯಿಂದ ಹೊಡೆದು ಹತ್ಯೆ ಮಾಡಿರುವ ಘಟನೆಯು ಗುರುವಾರ ನಡೆದಿದೆ.

ಹತ್ಯೆಯಾಗಿರುವ ಯುವಕ ಸುಭಾಸ ನಾಯಕನು ಕೊಪ್ಪಳ ಜಿಲ್ಲೆಯ ಹೈದರ ನಗರ ತಾಂಡಾದ ನಿವಾಸಿ ಆಗಿದ್ದು. ರಾತ್ರಿ ಮುಂಡರಗಿ ಹೊರವಲಯದ ಹೌಸೀಂಗ್ ಬೋರ್ಡ್ ನ ಕಾಲೋನಿಯ ಬಯಲಿನಲ್ಲಿ ಇಬ್ಬರು ಗೆಳೆಯರ ಜೊತೆಗೆ ಕೂಡಿಕೊಂಡು ಪಾರ್ಟಿ ಮಾಡಿದ್ದಾನೆ. ಆದರೆ ಅದೆ ಬಯಲಿನಲ್ಲಿ ತಡರಾತ್ರಿ ಸುಭಾಸ ನಾಯಕನನ್ನು ಬೀಯರ್ ಬಾಟಲಿಯಿಂದ ತಲೆಗೆ ಹೊಡೆದು ಹತ್ಯೆ ಮಾಡಿರುವ ಘಟನೆ ನಡೆದಿರುವ ಬಗ್ಗೆ ಗುರುವಾರ ಬೆಳಗ್ಗೆ ಬೆಳಕಿಗೆ ಬಂದಿದೆ.

ಸುಭಾಸ ನಾಯಕ ಜೊತೆ ಇದ್ದ ಗೆಳೆಯರು ತಾಂಡಾಕ್ಕೆ ಹೋಗಿ ಹತ್ಯೆಯ ಘಟನೆಯ ಕುರಿತು ಮಾಹಿತಿ ನೀಡಿದ್ದಾರೆ. ಘಟನಾ ಸ್ಥಳದಲ್ಲಿ ಪೋಲೀಸರು ಪರಿಶೀಲನೆ ನಡೆಸಿದ್ದಾರೆ. ಅಲ್ಲದೆ ಘಟನೆಯ ಕುರಿತು ತನಿಖೆಯನ್ನು ನಡೆಸುತ್ತಿದ್ದಾರೆ.


ಉದಯವಾಹಿನಿ ಚಿತ್ರ

# ನನ್ನ ವಿರುದ್ಧ ಷಡ್ಯಂತ್ರ ನಡೆಸಿದ ರಾಘವೇಂದ್ರ ಬಂಧನವಾಗಬೇಕು: ಈಶ್ವರಪ್ಪ

### ಸಾಮಾಜಿಕ ಜಾಲತಾಣದಲ್ಲಿ ತಿರುಚಿದ ವಿಡಿಯೋ ಮಾಡಿ ನನ್ನ ಪರವಾಗಿ ಬಿಜೆಪಿಗೆ ಮತ ಹಾಕಿ ಎನ್ನುವ ರೀತಿಯಲ್ಲಿ ಸುದ್ದಿ ಹಬ್ಬಿಸಿದ್ದಾರೆ

• **ಉದಯವಾಹಿನಿ ಶಿವಮೊಗ್ಗ**

ಈ ಚುನಾವಣೆಯಲ್ಲಿ ಸಂಸದ, ಬಿಜೆಪಿ ಅಭ್ಯರ್ಥಿ ರಾಘವೇಂದ್ರ ಅವರಿಂದ ಷಡ್ಯಂತ್ರ ನಡೆದಿದೆ. ವಾಮಾಚಾರ, ಸಭೆ ನಡೆಸಲು ಬಿಡದೆ ಇರುವ ಕೆಲಸ ಮಾಡಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ತಿರುಚಿದ ವಿಡಿಯೋ ಮಾಡಿದ್ದಾರೆ. ನನ್ನ ಪರವಾಗಿ ಬಿಜೆಪಿಗೆ ಮತ ಹಾಕಿ ಎನ್ನುವ ರೀತಿಯಲ್ಲಿ ಸುದ್ದಿ ಹಬ್ಬಿಸಿದ್ದಾರೆ.

ಅವರ ವಿರುದ್ಧ ಕ್ರಮ ಕೈಗೊಳ್ಳದೆ ಇದ್ದರೆ ಹೋರಾಟ ಮಾಡುತ್ತೇನೆ ಎಂದು ಪಕ್ಷೇತರ ಅಭ್ಯರ್ಥಿ ಕೆ.ಎಸ್ ಈಶ್ವರಪ್ಪ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಬಗ್ಗೆ ಡಿಸಿ,ಎಸ್ಪಿಗೆ ನಾನು ದೂರು ನೀಡಿದ್ದೇನೆ. ಈ ಸುಳ್ಳು ಸುದ್ದಿಯಿಂದ ನನಗೆ ಅನೇಕ ವೋಟ್ ಅನ್ಯಾಯ ಆಗಿದೆ. ನನಗೆ ಮತ ನೀಡಲು ಬಂದವರಿಗೆ ಗೊಂದಲವಾಗಿದೆ. ಸುಳ್ಳು ಸುದ್ದಿಯಿಂದ ನನಗೆ ಮತದಾನ ಕಡಿಮೆಯಾಗಿದೆ. ಇದು ರಾಘವೇಂದ್ರ ಅವರ ಕುತಂತ್ರ, ಷಡ್ಯಂತ್ರ. ತಕ್ಷಣ ಸಂಸದ ರಾಘವೇಂದ್ರ ಅವರನ್ನು ಬಂಧಿಸಬೇಕು. ಒಂದು ವಾರ ಗಡುವು ನೀಡುತ್ತೇನೆ. 15 ನೇ ತಾರೀಖಿನೊಳಗೆ ಕ್ರಮ ಕೈಗೊಳ್ಳದೆ ಹೋದರೆ ಹೋರಾಟ ಮಾಡುತ್ತೇವೆ. ಈ ಬಗ್ಗೆ ಸಮಗ್ರ ತನಿಖೆ ಆಗಬೇಕು, ರಾಘವೇಂದ್ರ ಮೇಲೆ ಎಫ್‌ಐಆರ್ ದಾಖಲಿಸಬೇಕು ಎಂದು ಆಗ್ರಹಿಸಿದರು.

**ಹಿಂದೂ ಸಮಾಜ ಗಮನಿಸಬೇಕು:** ಇಡೀ ಮುಸ್ಲಿಮ್ ಸಮುದಾಯದ ಜಾಗೃತವಾಗಿದೆ. ಅತಿ ಹೆಚ್ಚು ಮುಸ್ಲಿಮರು ಈ ಬಾರಿ ಮತದಾನ ಮಾಡಿದ್ದಾರೆ. ಇದನ್ನು ಹಿಂದೂ ಸಮಾಜ ಗಮನಿಸಬೇಕು. ಹಿಂದೂ ಸಮಾಜವನ್ನು ಜಾತಿ ಹೆಸರಿನಲ್ಲಿ ರಾಷ್ಟ್ರೀಯ ಪಕ್ಷಗಳು ಹೊಡೆಯುತ್ತಿದೆ. ಮುಸ್ಲಿಮ್ ಸಮುದಾಯದ ಒಂದಾಗಿ ಮತದಾನ ಮಾಡಿದ್ದು ಈ ಬಾರಿಯ ವಿಶೇಷ ಎಂದರು.

ಕಾಂಗ್ರೆಸ್, ಬಿಜೆಪಿ ಜಾತಿ ಹೆಸರಲ್ಲಿ ಚುನಾವಣೆ ಮಾಡಿದೆ. ಎಲ್ಲಾ ಸಮುದಾಯಗಳು ನನಗೆ ಬೆಂಬಲ ನೀಡಿದೆ. ಭಾರತೀಯ ಜನತಾ ಪಾರ್ಟಿ ಶುದ್ಧೀಕರಣ ಮಾಡಲು ನನಗೆ ಮತಹಾಕಿದ್ದಾರೆ. ನನ್ನ ವಿಚಾರ ಈ ಚುನಾವಣೆಯಲ್ಲಿ ಯಶಸ್ವಿಯಾಗಿದೆ. ನಾನು ಈ ಚುನಾವಣೆಯಲ್ಲಿ ನಾನು ಗೆಲ್ಲುತ್ತೇನೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಕರ್ನಾಟಕ ಗೂಂಡಾಗಳ ರಾಜ್ಯವಾಗಿದೆ. ರಾಜ್ಯದ ಮುಸ್ಲಿಂ ಗೂಂಡಾಗಳ ಸಂಖ್ಯೆ ಹೆಚ್ಚಾಗಿದೆ. ಮಹಿಳೆಯರ ದುರ್ಬಳಕೆ ಆಗಿರುವ ದುಷ್ಕೃತ್ಯ ಇದು. ಪೊಲೀಸ್ ಇಲಾಖೆ ನಿಷ್ಕ್ರಿಯವಾಗಿದೆ ಎಂದು ಈಶ್ವರಪ್ಪ ಹೇಳಿದರು.

**ಡಿಸಿ, ಎಸ್ಪಿಗೆ ದೂರು**



**ಬೇರೆ ಪಕ್ಷ ಕಟ್ಟಲು ನಾನು ಯಡಿಯೂರಪ್ಪ ಅಲ್ಲ**

**ನನ್ನ ಚುನಾವಣೆಯ ಉದ್ದೇಶ ಯಶಸ್ವಿಯಾಗಿದೆ. ಜಿಲ್ಲೆಯ ಮತದಾರರಿಗೆ ಧನ್ಯವಾದ ತಿಳಿಸುತ್ತೇನೆ. ಬೇರೆ ಪಕ್ಷ ಕಟ್ಟಲು ನಾನು ಯಡಿಯೂರಪ್ಪ ಅಲ್ಲ. ಪಕ್ಷ ಶುದ್ಧೀಕರಣದ ಸಿದ್ಧಾಂತ ಮುಂದುವರಿಸುತ್ತೇನೆ. ಸಿದ್ಧಾಂತ, ಹಿಂದುತ್ವದ ಮುಂದೆ ಯಾರು ದೊಡ್ಡವರಲ್ಲ. ಸಿದ್ಧಾಂತಕ್ಕೆ ಪೆಟ್ಟದಾಗ ನಾನು ಚುನಾವಣೆಗೆ ಸ್ಪರ್ಧಿಸಿದ್ದೇನೆ. ಸಿಟಿ ರವಿ, ಪ್ರತಾಪ್ ಸಿಂಹ, ಅನಂತ್ ಕುಮಾರ್ ಅವರ ಧ್ವನಿಯಾಗಿ ನಾನು ನಿಂತಿದ್ದೇನೆ. ಒಂದೇ ತಿಂಗಳಲ್ಲಿ ನಾನು ಸಾಕಷ್ಟು ಪರಿವರ್ತನೆ ತಂದಿದ್ದೇನೆ ಎಂದು ಈಶ್ವರಪ್ಪ ಹೇಳಿದರು.**

**ಪ್ರಜ್ವಲ್ ರೇವಣ್ಣ ಪ್ರಕರಣ ವಿಚಾರವಾಗಿ ಮಾತನಾಡಿದ ಅವರು, ಈ ಬಗ್ಗೆ ನಾನು ಏನು ಮಾತನಾಡಲ್ಲ. ಈ ಪ್ರಕರಣವನ್ನು ಸಿಬಿಐಗೆ ನೀಡಲಿ. ದೇಶದ ಹೆಣ್ಣಿನ ಕುಲಕ್ಕೆ ಅಪಮಾನ ಆಗಿದೆ. ಕರ್ನಾಟಕ ರಾಜ್ಯದ ಮೂಲಕ ಅಪಮಾನ ಆಗಿದೆ. ಸಿಎಂ, ಗೃಹ ಸಚಿವರಿಗೆ ನಾನು ಒತ್ತಾಯ ಮಾಡುತ್ತೇನೆ. ಪ್ರಜ್ವಲ್ ರೇವಣ್ಣ ಪ್ರಕರಣದಲ್ಲಿ ಕುಮಾರಸ್ವಾಮಿ ಇದ್ದಾರೋ, ಡಿ.ಕೆ ಶಿವಕುಮಾರ್ ಇದ್ದಾರೋ ಗೊತ್ತಿಲ್ಲ. ಕೂಡಲೇ ಸಿಬಿಐಗೆ ಈ ಪ್ರಕರಣ ನೀಡಬೇಕು**
**-ಕೆ.ಎಸ್ ಈಶ್ವರಪ್ಪ**

# ಲೋಕಸಭೆ ಚುನಾವಣೆ ವೇಳೆ ಭಾರತವನ್ನು ಅಸ್ಥಿರಗೊಳಿಸಲು ಪ್ರಯತ್ನ

## ● ಲೋಕಸಭೆ ಚುನಾವಣೆ ವೇಳೆ ಭಾರತವನ್ನು ಅಸ್ಥಿರಗೊಳಿಸಲು ಅಮೆರಿಕ ಪ್ರಯತ್ನ: ರಷ್ಯಾ ಗಂಭೀರ ಆರೋಪ

**ಮಾಸ್ಕೋ:** 2024ರ ಲೋಕಸಭೆ ಚುನಾವಣೆ ವೇಳೆ ಭಾರತವನ್ನು ಅಸ್ಥಿರಗೊಳಿಸಲು ಅಮೆರಿಕ ಗುರಿ ಹೊಂದಿದೆ ಎಂದು ರಷ್ಯಾದ ವಿದೇಶಾಂಗ ಸಚಿವಾಲಯ ಗಂಭೀರ ಆರೋಪ ಮಾಡಿದೆ. ಧಾರ್ಮಿಕ ಸ್ವಾತಂತ್ರ್ಯದ ಹರಣ ಕುರಿತಂತೆ ಅಮೆರಿಕದ ಫೆಡರಲ್ ಕಮಿಷನ್ ವರದಿಯನ್ನು ಭಾರತವನ್ನು ಟೀಕಿಸಿದ ಬೆನ್ನಲ್ಲೇ ರಷ್ಯಾ ಈ ಹೇಳಿಕೆ ನೀಡಿದೆ.

ರಷ್ಯಾ ಸರ್ಕಾರಿ ಸ್ವಾಮ್ಯದ ನ್ಯೂಸ್ ನೆಟ್‌ವರ್ಕ್ ಆರ್‌ಟಿ ನ್ಯೂಸ್, ರಷ್ಯಾ ವಿದೇಶಾಂಗ ಸಚಿವಾಲಯದ ವಕ್ತಾರೆ ಮರಿಯಾ ಜಖರೋವಾ ಅವರ ಹೇಳಿಕೆಯನ್ನು ಉಲ್ಲೇಖಿಸಿದೆ. ಭಾರತದ ರಾಷ್ಟ್ರೀಯ ಮನಸ್ಥಿತಿ ಮತ್ತು ಇತಿಹಾಸದ ಅರಿವಿನ ಕೊರತೆ ಹೊಂದಿರುವ ವಾಷಿಂಗ್ಟನ್, ಭಾರತದಲ್ಲಿನ ಧಾರ್ಮಿಕ ಸ್ವಾತಂತ್ರ್ಯದ ಕುರಿತು ಆಧಾರರಹಿತ ಆರೋಪಗಳನ್ನು ಮಾಡುತ್ತಿದೆ ಎಂದು ಅವರು ಆರೋಪಿಸಿದ್ದಾರೆ. ಒಂದು ದೇಶವಾಗಿ ಭಾರತಕ್ಕೆ ಇದು ಅಗೌರವವಾಗಿದೆ ಎಂದು ಜಖರೋವಾ ಹೇಳಿದ್ದಾರೆ. ಅಮೆರಿಕದ ಆರೋಪಗಳ ಹಿಂದಿರುವ ಕಾರಣವು ಭಾರತದಲ್ಲಿನ ಆಂತರಿಕ ರಾಜಕೀಯ



ಪರಿಸ್ಥಿತಿಯನ್ನು ಅಸಮತೋಲನಗೊಳಿಸುವುದು, ಸಾರ್ವತ್ರಿಕ ಚುನಾವಣೆಯನ್ನು ಸಂಕೀರ್ಣಗೊಳಿಸುವುದಾಗಿದೆ ಎಂದು ಅವರು ದೂರಿದ್ದಾರೆ. ಅಮೆರಿಕದ ಕ್ರಿಯೆಗಳು ಭಾರತದ ಆಂತರಿಕ ವ್ಯವಹಾರಗಳಲ್ಲಿ ಮೂಗು ತೂರಿಸುವ ಉದ್ದೇಶಗಳನ್ನು ಸ್ಪಷ್ಟವಾಗಿ ತೋರಿಸುತ್ತದೆ ಎಂದು ವಿದೇಶಾಂಗ ಸಚಿವಾಲಯದ ವಕ್ತಾರೆ ತಿಳಿಸಿದ್ದಾರೆ.

**ವರದಿಯಲ್ಲಿ ಏನಿದೆ?:** ಅಮೆರಿಕದ ಅಂತಾರಾಷ್ಟ್ರೀಯ ಧಾರ್ಮಿಕ ಸ್ವಾತಂತ್ರ್ಯದ ಆಯೋಗ ಬಿಡುಗಡೆ ಮಾಡಿರುವ ವಾರ್ಷಿಕ ವರದಿಯು, ಧಾರ್ಮಿಕ ಸ್ವಾತಂತ್ರ್ಯದ ಉಲ್ಲಂಘನೆ ಆರೋಪಕ್ಕಾಗಿ ಭಾರತವನ್ನು ಟೀಕಿಸಿದೆ. 'ಭಾರತವು ನಿರ್ದಿಷ್ಟ ಕಳವಳದ ದೇಶ' ಎಂದು ಘೋಷಿಸುವಂತೆ ಆಯೋಗವು ಅಮೆರಿಕ ವಿದೇಶಾಂಗ ಇಲಾಖೆಗೆ ತನ್ನ ಶಿಫಾರಸನ್ನು ಬದಲಾವಣೆ ಮಾಡಿದೆ. ಆಡಳಿತಾರೂಢ ಬಿಜೆಪಿಯು ತಾರತಮ್ಯದಿಂದ ಕೂಡಿದ ರಾಷ್ಟ್ರೀಯ ನೀತಿಗಳನ್ನು ಜಾರಿಗೆ ತಂದಿದೆ ಎಂದು ವರದಿ ಆರೋಪಿಸಿದೆ. ಕಾನೂನುಬಾಹಿರ ಚಟುವಟಿಕೆಗಳ ಕಾಯ್ದೆ, ವಿದೇಶಿ ದೇಣಿಗೆಗಳ ಕಾಯ್ದೆ, ಪೌರತ್ವ ಕಾಯ್ದೆ ಮತ್ತು ಮತಾಂತರ ವಿರೋಧಿ ಹಾಗೂ ಗೋಹತ್ಯೆ ನಿಷೇಧ ಕಾಯ್ದೆಗಳ ಜಾರಿಯನ್ನು ವರದಿ ಉಲ್ಲೇಖಿಸಿದೆ. ಈ ಕಾನೂನುಗಳ ಅನುಷ್ಠಾನವು ಧಾರ್ಮಿಕ ಅಲ್ಪಸಂಖ್ಯಾತರ ನಿರಂಕುಶ ಬಂಧನ, ನಿಗಾವಣೆ ಮತ್ತು ಅವರ ಪರವಾಗಿ ವಕಾಲತ್ತು ವಹಿಸುವವರನ್ನು ಗುರಿಯಾಗಿಸುವ ಘಟನೆಗಳಿಗೆ ಕಾರಣವಾಗಿದೆ ಎಂದು ಹೇಳಿದೆ. ಧಾರ್ಮಿಕ ಅಲ್ಪಸಂಖ್ಯಾತರ ಕುರಿತು ವರದಿ ನೀಡುವ ಸುದ್ದಿ ಮಾಧ್ಯಮ ಮತ್ತು ಸರ್ಕಾರೇತರ ಸಂಸ್ಥೆಗಳನ್ನು ಎಫ್‌ಸಿಆರ್‌ಎ ನಿಯಂತ್ರಣಗಳ ಅಡಿಯಲ್ಲಿ ಕಟ್ಟುನಿಟ್ಟಿನ ನಿಗಾವಣೆಗೆ ಒಳಪಡಿಸಲಾಗುತ್ತಿದೆ ಎಂದು ವರದಿ ಆರೋಪಿಸಿದೆ.


**ಪ್ರಸ್ತುತ ನಡೆಯುತ್ತಿರುವ ಲೋಕಸಭೆ ಚುನಾವಣೆಯ ವೇಳೆ ಭಾರತವನ್ನು ಅಸ್ಥಿರಗೊಳಿಸಲು ಅಮೆರಿಕ ಪ್ರಯತ್ನಿಸುತ್ತಿದೆ ಎಂದು ರಷ್ಯಾ ಆರೋಪಿಸಿದೆ. ಹಾಗೆಯೇ ಖಲಿಸ್ತಾನಿ ಉಗ್ರ, ಗುರುಪತ್ವಂತ್ ಸಿಂಗ್ ಪನ್ನು ಹತ್ಯೆ ಪ್ರಯತ್ನದಲ್ಲಿನ ಅಮೆರಿಕದ ಆರೋಪಗಳು ಆಧಾರರಹಿತ ಎಂದು ಅದು ಭಾರತದ ಬೆಂಬಲಕ್ಕೆ ನಿಂತಿದೆ.**

**ಪನ್ನು ಹತ್ಯೆ ಪ್ರಯತ್ನ**

**ಖಲಿಸ್ತಾನಿ ಉಗ್ರ ಗುರುಪತ್ವಂತ್ ಸಿಂಗ್ ಪನ್ನುನ್ ಹತ್ಯೆಗೆ ನಡೆದ ವಿಫಲ ಪ್ರಯತ್ನದಲ್ಲಿ ಭಾರತದ ಅಧಿಕಾರಿ ಭಾಗಿಯಾಗಿದ್ದಾರೆ ಎಂಬ ಅಮೆರಿಕದ ಆರೋಪವನ್ನು ಕೂಡ ರಷ್ಯಾ ತಳ್ಳಿಹಾಕಿದೆ. ನಮಗೆ ತಿಳಿದಿರುವ ಮಾಹಿತಿ ಪ್ರಕಾರ, ಜಿಎಸ್ ಪನ್ನುನ್ ಹತ್ಯೆಗೆ ತಯಾರಿ ನಡೆಸುವಲ್ಲಿ ಭಾರತೀಯ ಪ್ರಜೆಯ ಕೈವಾಡ ಇರುವುದಕ್ಕೆ ಯಾವುದೇ ವಿಶ್ವಾಸಾರ್ಹ ಪುರಾವೆಯನ್ನು ಅಮೆರಿಕ ಈವರೆಗೂ ಒದಗಿಸಿಲ್ಲ. ಸಾಕ್ಷ್ಯಗಳಿಲ್ಲದ ಈ ಬಗ್ಗೆ ಊಹಾಪೋಹ ಹರಡುವುದು ಒಪ್ಪುವಂತಹದ್ದಲ್ಲ ಎಂದು ಜಖರೋವಾ ಹೇಳಿದ್ದಾರೆ.**

**ಭಾರತದ ತಿರುಗೇಟು:** 'ಇದಕ್ಕೆ ತಿರುಗೇಟು ನೀಡಿರುವ ವಿದೇಶಾಂಗ ವ್ಯವಹಾರಗಳ ಸಚಿವಾಲಯವು ಅಮೆರಿಕ ಆಯೋಗವು ಭಾರತದ ಚುನಾವಣಾ ಪ್ರಕ್ರಿಯೆಯಲ್ಲಿ ಹಸ್ತಕ್ಷೇಪ ಮಾಡಲು ಪ್ರಯತ್ನಿಸುತ್ತಿದೆ ಮತ್ತು ದೇಶದ ವಿರುದ್ಧ ಅಪಪ್ರಚಾರ ನಡೆಸುವುದನ್ನು ಮುಂದುವರಿಸಿದೆ ಎಂದು ಕಿಡಿಕಾರಿದೆ. ಅಮೆರಿಕದ ಅಂತಾರಾಷ್ಟ್ರೀಯ ಧಾರ್ಮಿಕ ಸ್ವಾತಂತ್ರ್ಯದ ಆಯೋಗವು ರಾಜಕೀಯ ಅಜೆಂಡಾ ಹೊಂದಿರುವ ಪಕ್ಷಪಾತಿ ಸಂಸ್ಥೆ. ಅದು ತನ್ನ ವಾರ್ಷಿಕ ವರದಿಯ ಸೋಗಿನಲ್ಲಿ ಭಾರತದ ವಿರುದ್ಧದ ಅಪಪ್ರಚಾರವನ್ನು ಪ್ರಕಟಿಸುವುದನ್ನು ಮುಂದುವರಿಸಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಕಳೆದ ವಾರ ಟೀಕಿಸಿದ್ದರು.

# ಅಮೆರಿಕದಲ್ಲಿ ಹಿಂದೂಧರ್ಮದ ಅಭಿವೃದ್ಧಿಗೆ 1 ಮಿಲಿಯನ್ ಡಾಲರ್ ದೇಣಿಗೆ



**ವಾಷಿಂಗ್ಟನ್:** ಭಾರತೀಯ ಮೂಲದ ಅಮೆರಿಕನ್ ಉದ್ಯಮಿ ರಮೇಶ್ ಭೂತಾಡ ಅವರು ಅಮೆರಿಕದಲ್ಲಿ ಹಿಂದೂ ಧರ್ಮದ ಉದ್ದೇಶಗಳಿಗಾಗಿ ಹಿಂದೂ ಅಮೇರಿಕನ್ ಫೌಂಡೇಶನ್‌ಗೆ 1 ಮಿಲಿಯನ್ ಅಮೆರಿಕನ್ ಡಾಲರ್ ದೇಣಿಗೆ ನೀಡಿದ್ದಾರೆ. ಹಿಂದೂ ಅಮೇರಿಕನ್ ಫೌಂಡೇಶನ್‌ನ ಇತ್ತೀಚಿನ ಸಮಾರಂಭದಲ್ಲಿ ಹೂಸ್ಟನ್ ಮೂಲದ ಉದ್ಯಮಿ ಭೂತಾಡ ಅವರು ಮುಂದಿನ ನಾಲ್ಕು ವರ್ಷಗಳಲ್ಲಿ 1 ಮಿಲಿಯನ್ ಡಾಲರ್ ನೀಡುವುದಾಗಿ ಘೋಷಿಸಿದ್ದಾರೆ.

ಮಾರ್ಚ್ 2023 ರಲ್ಲಿ ಅವರು ಫ್ಲೋರಿಡಾ ಮೂಲದ ಹಿಂದೂ ಯೂನಿವರ್ಸಿಟಿ ಆಫ್ ಅಮೇರಿಕಾಕ್ಕೆ 1 ಮಿಲಿಯನ್ ಡಾಲರ್ ದೇಣಿಗೆ ನೀಡಿದ್ದರು, ಇದು ಹಿಂದೂ ತತ್ವಶಾಸ್ತ್ರದ ಆಧಾರದ ಮೇಲೆ ಶಿಕ್ಷಣವನ್ನು ಒದಗಿಸುವ ಉದ್ದೇಶವನ್ನು ಹೊಂದಿರುವ ಅಮೆರಿಕದಲ್ಲಿನ ಏಕೈಕ ಸಂಸ್ಥೆಯಾಗಿದೆ. ಸಭೆಯನ್ನುದ್ದೇಶಿಸಿ ಮಾತನಾಡಿದ ಸಿಲಿಕಾನ್ ವ್ಯಾಲಿಯ ಟೆಕ್ ಉದ್ಯಮಿ ಸುಂದರ್ ಅಯ್ಯರ್ ಜಾತಿ ಆಧಾರಿತ ತಾರತಮ್ಯದ ಆರೋಪಗಳ ಬಗ್ಗೆ ತಮ ಭಯಾನಕ ಅನುಭವವನ್ನು ಹಂಚಿಕೊಂಡರು. ಗವರ್ನರ್ ಗೇವಿನ್ ನ್ಯೂಸಮ್ ವೀಟೋ ಮಾಡಿದ ಉದ್ದೇಶಿತ ಎಸ್‌ಬಿ 403 ಮಸೂದೆ ಯೊಂದಿಗೆ ಕ್ಯಾಲಿಫೋರ್ನಿಯಾ ಭಾರತೀಯ, ಹಿಂದೂ ಸಮುದಾಯಗಳ ಬೆನ್ನಿನ ಮೇಲೆ ಗುರಿಯನ್ನು ಹಾಕುವ ತೀವ್ರತೆಗೆ ತೆಗೆದುಕೊಂಡಿದೆ ಎಂದು ಅಯ್ಯರ್ ಹೇಳಿದರು. ಸಂಸ್ಥೆಯ ಕಾರ್ಯನಿರ್ವಾಹಕ ನಿರ್ದೇಶಕ ಸು ಹಾಗ್ ಶುಕ್ಲಾ, ಅಯ್ಯರ್ ಸಮುದಾಯವು ಇಂತಹ ಸನ್ನಿವೇಶಗಳ ವಿರುದ್ಧ ಜಾಗರೂಕರಾಗಿರಬೇಕಾದ ಅಗತ್ಯವನ್ನು ಒತ್ತಿಹೇಳಿದ್ದಾರೆ ಎಂದು ಮಾಧ್ಯಮ ಪ್ರಕಟಣೆ ತಿಳಿಸಿದೆ.

# ಆಸ್ಟ್ರೇಲಿಯಾದಲ್ಲಿ ಎಂಟೆಕ್ ವಿದ್ಯಾರ್ಥಿ ಕೊಂದಿದ್ದ ಸಹೋದರರ ಬಂಧನ

**ನವದೆಹಲಿ:** ಭಾರತದ 22 ವರ್ಷದ ಎಂಟೆಕ್ ವಿದ್ಯಾರ್ಥಿಯೊಬ್ಬನನ್ನು ಇರಿದು ಕೊಂದ ಹರಿಯಾಣ ಮೂಲದ ಇಬ್ಬರು ಸಹೋದರರನ್ನು ಆಸ್ಟ್ರೇಲಿಯಾದಲ್ಲಿ ಬಂಧಿಸಲಾಗಿದೆ. ಮೆಲ್ಬೋರ್ನ್ ಉಪನಗರ ಒರ್ಮಂಡ್‌ನಲ್ಲಿ ನವಜೀತ್ ಸಂಧು ಅವರನ್ನು ಮಾರಣಾಂತಿಕವಾಗಿ ಇರಿದ ಎರಡು ದಿನಗಳ ನಂತರ ನ್ಯೂ ಸೌತ್ ವೇಲ್ಸ್‌ನ ಗೌಲ್ಬರ್ನ್‌ನಲ್ಲಿ ಅಭಿಜೀತ್ ಮತ್ತು ರಾಬಿನ್ ಗಾರ್ಟನ್ ಅವರನ್ನು ಬಂಧಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಎನ್‌ಎಸ್‌ಡಬ್ಲ್ಯೂ ಪೊಲೀಸರ ನೆರವಿನೊಂದಿಗೆ ಸಹೋದರರಾದ ಅಭಿಜೀತ್ ಮತ್ತು ರಾಬಿನ್ ಗಾರ್ಟನ್ ಅವರನ್ನು ಗೌಲ್‌ಬರ್ನ್‌ನಲ್ಲಿ ಬಂಧಿಸಲಾಗಿದೆ ಎಂದು ವಿಕ್ಟೋರಿಯಾ ಪೊಲೀಸರು ಅಧಿಕೃತ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಹತ್ಯೆಗೀಡಾದ ಸಂಧು ಮತ್ತು ಆರೋಪಿಗಳು ಹರಿಯಾಣದ ಕರ್ನಾಲ್ ನಿವಾಸಿಗಳು. ಭಾರತೀಯ ವಿದ್ಯಾರ್ಥಿಗಳ ಗುಂಪಿನ ನಡುವಿನ ಬಾಡಿಗೆ ಸಂಬಂಧಿತ ವಿವಾದದಲ್ಲಿ ಘರ್ಷಣೆಗೆ ಮಧ್ಯಸ್ಥಿಕೆ ವಹಿಸಲು ಪ್ರಯತ್ನಿಸುತ್ತಿದ್ದಾಗ ಸಂಧುವನ್ನು ಇನ್ನೊಬ್ಬ ವಿದ್ಯಾರ್ಥಿಯು ಚಾಕುವಿನಿಂದ ಎದೆಗೆ ಮಾರಣಾಂತಿಕವಾಗಿ ಇರಿದಿದ್ದಾನೆ. ಘಟನೆಯಲ್ಲಿ ನವಜೀತ್ ಅವರ 30 ವರ್ಷದ ಸ್ನೇಹಿತನಿಗೂ ಗಾಯಗಳಾಗಿವೆ ಎಂದು ಬಲಿಪಶುವಿನ ಚಿಕ್ಕಪ್ಪ ತಿಳಿಸಿದ್ದಾರೆ. ನವಜೀತ್‌ನ ಸ್ನೇಹಿತ (ಮತ್ತೊಬ್ಬ ಭಾರತೀಯ ವಿದ್ಯಾರ್ಥಿ) ತನ್ನ ಬಳಿ ಕಾರನ್ನು ಹೊಂದಿದ್ದರಿಂದ ಅವನ ಸಾಮಾನುಗಳನ್ನು ತೆಗೆದುಕೊಳ್ಳಲು ಅವನ ಮನೆಗೆ ಹೋಗುವಂತೆ ಕೇಳಿದ್ದನು. ಅವನ ಸ್ನೇಹಿತ ಒಳಗೆ ಹೋದಾಗ, ನವಜೀತ್ ಕೆಲವು ಕೂಗುಗಳನ್ನು ಕೇಳಿದನು ಮತ್ತು ಜಗಳವಾಡುವುದನ್ನು ನೋಡಿದನು.



**ನವಜೀತ್ ಒಂದೂವರೆ ವರ್ಷಗಳ ಹಿಂದೆ ಅಧ್ಯಯನ ವೀಸಾದ ಮೇಲೆ ಆಸ್ಟ್ರೇಲಿಯಾಕ್ಕೆ ತೆರಳಿದ್ದರು ಮತ್ತು ಅವರ ತಂದೆ, ಕೃಷಿಕರು ತಮ ಒಂದೂವರೆ ಎಕರೆ ಜಮೀನನ್ನು ಮಾರಾಟ ಮಾಡಿದ್ದು, ಅವರ ಶಿಕ್ಷಣಕ್ಕೆ ಹಣ ನೀಡಿದ್ದರು.**

ನವಜೀತ್ ಮಧ್ಯಪ್ರವೇಶಿಸಲು ಪ್ರಯತ್ನಿಸಿದಾಗ ಜಗಳವಾಡಬೇಡಿ ಎಂದು ಹೇಳಿ ಎದೆಗೆ ಚಾಕುವಿನಿಂದ ಮಾರಣಾಂತಿಕವಾಗಿ ಇರಿದಿದ್ದಾರೆ ಎಂದು ಸಂಧು ಅವರ ಚಿಕ್ಕಪ್ಪ ಯಶ್ವೀರ್ ಹೇಳಿದ್ದಾರೆ ಎಂದು ಸುದ್ದಿ ಸಂಸ್ಥೆ ಪಿಟಿಐ ವರದಿ ಮಾಡಿದೆ.

# ಆಂಧ್ರಪ್ರದೇಶದ ವೈಎಸ್‌ಆರ್‌ಸಿಪಿ ಸರ್ಕಾರ ಮಾಯವಾಗಲಿದೆ

**ವಿಜಯವಾಡ:** ಭ್ರಷ್ಟಾಚಾರ, ಸ್ವಜನ ಪಕ್ಷಪಾತ ಮತ್ತು ಮಾಫಿಯಾರಾಜ್‌ನಿಂದ ಆಂಧ್ರಪ್ರದೇಶದ ಜನತೆ ಬೇಸತ್ತಿದ್ದಾರೆ. ಇದರಿಂದ ಜೂನ್ 4ರ ನಂತರ ವೈಎಸ್‌ಆರ್‌ಸಿಪಿ ಸರ್ಕಾರ ಮಾಯವಾಗಲಿದೆ ಎಂದು ಪ್ರಧಾನಿ ನರೇಂದ್ರಮೋದಿ ವಾಗ್ದಾಳಿ ನಡೆಸಿದ್ದಾರೆ. ಆಂಧ್ರಪ್ರದೇಶದ 25 ಲೋಕಸಭಾ ಕ್ಷೇತ್ರಗಳು ಮತ್ತು 175 ವಿಧಾನಸಭಾ ಕ್ಷೇತ್ರಗಳಿಗೆ ಮೇ 13ರಂದು ಏಕಕಾಲಕ್ಕೆ ಚುನಾವಣೆ ನಡೆ ಯಲಿದೆ. ಈ ಹಿನ್ನೆಲೆಯಲ್ಲಿ ವಿಜಯವಾಡದಲ್ಲಿ ಪ್ರಧಾನಿ ನರೇಂದ್ರ ಮೋದಿ, ಟಿಡಿಪಿ ಅಧ್ಯಕ್ಷ ಎನ್.ಚಂದ್ರಬಾಬು ನಾಯ್ಡು, ಜನಸೇನಾ ಮುಖ್ಯಸ್ಥ, ನಟ ಪವನ್ ಕಲ್ಯಾಣ್ ಅವರೊಂದಿಗೆ ರೋಡ್ ಶೋ ನಡೆಸಿದ್ದಾರೆ. ರೋಡ್ ಶೋ ಬಳಿಕ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಸಿಎಂ ವೈ.ಎಸ್. ಜಗನ್ ಮೋಹನ್ ರೆಡ್ಡಿ ನೇತೃತ್ವದ ಸರ್ಕಾರದ ಆಡಳಿತದ ಬಗ್ಗೆ ಟೀಕಿಸಿದ್ದಾರೆ.

ಕಾಂಗ್ರೆಸ್ ಸಂಸ್ಕೃತಿಯೊಂದಿಗೆ ಗಟ್ಟಿಯಾದ ನಂಟಿನಿಂದಾಗಿ ವೈಎಸ್‌ಆರ್‌ಸಿಪಿಯು ಭ್ರಷ್ಟಾಚಾರ, ಕುತಂತ್ರ ಮತ್ತು ಮಾಫಿಯಾ ರಾಜ್ ಹೆಚ್ಚಿಸಿದೆ.



ಆಂಧ್ರಪ್ರದೇಶವು ವೈಎಸ್‌ಆರ್‌ಸಿಪಿಯಿಂದ ಸಂಪೂರ್ಣವಾಗಿ ಬೇಸತ್ತಿದೆ. ಜೂನ್ 4ರಂದು ಈ ಸರ್ಕಾರವು ಕಳೆದುಹೋಗಲಿದೆ. ಅಲ್ಲದೇ, ಇತ್ತೀಚಿಗೆ ರಾಜ್ಯದಾದ್ಯಂತ ಪ್ರವಾಸ ಮಾಡಿದ ನಂತರ ಜನರು ಟಿಡಿಪಿ, ಬಿಜೆಪಿ ಮತ್ತು ಜನಸೇನಾ ಎನ್‌ಡಿಎ ಮೈತ್ರಿಕೂಟಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಮತ ಹಾಕುತ್ತಿದ್ದಾರೆ ಎಂದು ನನಗೆ ಮನವರಿಕೆಯಾಗಿದೆ ಎಂದಿದ್ದಾರೆ.

ಬಿಜೆಪಿ, ಟಿಡಿಪಿ ಈ ಹಿಂದೆ ಒಟ್ಟಿಗೆ ಕೆಲಸ ಮಾಡಿದೆ. ನಮ್ಮ ಮೈತ್ರಿ ಭವಿಷ್ಯದ ಅಭಿವೃದ್ಧಿಗೆ ಬದ್ಧವಾಗಿದೆ. ಈಗ ಜನ ಸೇನೆಯ ಸಕ್ರಿಯ ಬೆಂಬಲವು ನಮ್ಮ ಒಕ್ಕೂಟವನ್ನು ಮತ್ತಷ್ಟು ಬಲಪಡಿಸಿದೆ. ಆಂಧ್ರಪ್ರದೇಶದ ಜನರ ಆಕಾಂಕ್ಷೆಗಳನ್ನು ಈಡೇರಿಸುವ ಸಾಮರ್ಥ್ಯವನ್ನು ಎನ್‌ಡಿಎ ಮೈತ್ರಿಕೂಟ ಹೊಂದಿದೆ. ಪ್ರಗತಿಗಾಗಿ ಆಂಧ್ರಪ್ರದೇಶದ ಕರಾವಳಿಯನ್ನು ಎನ್‌ಡಿಎ ಮೈತ್ರಿಕೂಟ ಸದುಪಯೋಗಪಡಿಸಿಕೊಳ್ಳುತ್ತದೆ. ರಾಜ್ಯದ ಬಂದರು ಪ್ರದೇಶವು ಅಭಿವೃದ್ಧಿ ಕೆಲಸಕ್ಕೆ ನೇತೃತ್ವ ವಹಿಸುತ್ತದೆ ಮತ್ತು ಮೀನುಗಾರಿಕೆ ಕ್ಷೇತ್ರವನ್ನು ಉತ್ತೇಜಿಸುತ್ತದೆ. ಜೊತೆಗೆ ಮೂಲಸೌಕರ್ಯಗಳಿಗೆ ಒತ್ತು ನೀಡಲಾಗುವುದು. ರಸ್ತೆ, ರೈಲು, ವಿಮಾನ ಸಂಪರ್ಕ, ಡಿಜಿಟಲ್ ಮೂಲಸೌಕರ್ಯ ಕ್ಷೇತ್ರದಲ್ಲಿ ಹೆಚ್ಚಿನ ಕೆಲಸಗಳನ್ನು ಮಾಡಬೇಕಾಗಿದೆ ಎಂದು ಅವರು ವಿವರಿಸಿದ್ದಾರೆ.


**ನಾವು ಕೃಷಿ ಉತ್ಪಾದಕತೆಯನ್ನು ಸುಧಾರಿಸಲು, ಕೈಗಾರಿಕಾ ಬೆಳವಣಿಗೆಯನ್ನು ಹೆಚ್ಚಿಸಲು ಮತ್ತು ಆಂಧ್ರಪ್ರದೇಶದ ಸೇವಾ ವಲಯ ದಲ್ಲಿಯೂ ಛಾಪು ಮೂಡಿಸುವುದನ್ನು ಖಚಿತಪಡಿಸಿ ಕೊಳ್ಳಲು ಬಯಸುತ್ತೇವೆ. ಈ ರಾಜ್ಯದ ಜನರು ಆಶೀರ್ವದಿಸಿರುವ ಉದ್ಯಮಶೀಲ ಶಕ್ತಿಗೆ ರೆಕ್ಕೆಗಳನ್ನು ಒದಗಿಸಲು ನಾವು ಸಿದ್ಧವಾಗಿದ್ದೇವೆ**

**-ನರೇಂದ್ರ ಮೋದಿ, ಪ್ರಧಾನ ಮಂತ್ರಿ**

# 74 ವಿಮಾನಗಳ ಹಾರಾಟ ರದ್ದು

**ನವದೆಹಲಿ:** ಏರ್‌ಲೈನ್ಸ್‌ನ ಸುಮಾರು 300 ಉದ್ಯೋಗಿಗಳ ಸಾಮೂಹಿಕ ಸಿಕ್ ಲೀವ್‌ನಿಂದಾಗಿ ಇಂದು ಕೂಡ 74 ವಿಮಾನಗಳ ಹಾರಾಟ ರದ್ದಾಗಿದೆ. ಆರೋಗ್ಯ ಸರಿ ಇಲ್ಲ ಎಂದು ಸಿಕ್ ಲೀವ್ ಪಡೆದ ನಂತರ ಅವರುಗಳು ತಮ ಫೋನ್‌ಗಳನ್ನು ಸ್ವಿಚ್ ಆಫ್ ಮಾಡಿದ ಒಂದು ದಿನದ ಏರ್ ಇಂಡಿಯಾ ಎಕ್ಸ್ ಪ್ರೆಸ್ ಗುರುವಾರ ಕನಿಷ್ಠ 74 ವಿಮಾನಗಳನ್ನು ರದ್ದುಗೊಳಿಸಿದೆ.

ರದ್ದಾದ ವಿಮಾನಗಳು ದೇಶೀಯ ಮತ್ತು ಅಂತರಾಷ್ಟ್ರೀಯ ಮಾರ್ಗಗಳಲ್ಲಿವೆ ಮತ್ತು ಚೆನ್ನೈನಿಂದ ಕೋಲ್ಕತ್ತಾಗೆ, ಚೆನ್ನೈನಿಂದ ಸಿಂಗಾಪುರಕ್ಕೆ, ತಿರುಚ್ಚಿಯಿಂದ ಸಿಂಗಾಪುರಕ್ಕೆ ಮತ್ತು ಜೈಪುರದಿಂದ ಮುಂಬೈಗೆ ಹಾರಲು ನಿರ್ಧರಿಸಲಾಗಿತ್ತು. ಇದರ ಜತೆಗೆ ಪ್ರಮುಖ ಮಾರ್ಗಗಳಲ್ಲಿ ಹಲವಾರು ವಿಮಾನಗಳು ವಿಳಂಬಗೊಂಡವು. ಇದೀಗ ಟಾಟಾ ಸಮೂಹದ ಒಡೆತನದಲ್ಲಿರುವ ಏರ್ ಇಂಡಿಯಾದ ಅಂಗಸಂಸ್ಥೆಯಾದ ಕಡಿಮೆ ದರದ ಏರ್‌ಲೈನ್‌ನಲ್ಲಿ ಕ್ಯಾಬಿನ್ ಸಿಬ್ಬಂದಿ ಕೊರತೆಯಿಂದಾಗಿ ಮೂರು ದಿನಗಳಿಂದ 100 ಕ್ಕೂ ಹೆಚ್ಚು ವಿಮಾನಗಳು ರದ್ದಾಗಿವೆ ಮತ್ತು ಸುಮಾರು 15,000 ಪ್ರಯಾಣಿಕರ ಮೇಲೆ ಪರಿಣಾಮ ಬೀರಿದೆ




ಎಂದು ವರದಿಯಾಗಿದೆ. ಮೂಲಗಳ ಪ್ರಕಾರ ಏರ್ ಇಂಡಿಯಾ ಎಕ್ಸ್‌ಪ್ರೆಸ್ ಉದ್ಯೋಗಿಗಳು ಹೊಸ ಉದ್ಯೋಗ ನಿಯಮಗಳ ವಿರುದ್ಧ ಪ್ರತಿಭಟನೆ ನಡೆಸುತ್ತಿದ್ದಾರೆ ಎಂದು ತಿಳಿದುಬಂದಿದೆ. ಸಿಬ್ಬಂದಿಯ ಚಿಕಿತ್ಸೆಯಲ್ಲಿ ಸಮಾನತೆಯ ಕೊರತೆಯನ್ನು ಆರೋಪಿಸಿದ್ದಾರೆ ಮತ್ತು ಹಿರಿಯ ಹುದ್ದೆಗಳಿಗೆ ಸಂದರ್ಶನಗಳನ್ನು ತೆರವುಗೊಳಿಸಿದರೂ ಕೆಲವು ಸಿಬ್ಬಂದಿಗೆ ಕಡಿಮೆ ಕೆಲಸದ ಪಾತ್ರಗಳನ್ನು ನೀಡಲಾಗಿದೆ ಎಂದು ಸಿಬ್ಬಂದಿಗಳು ಆರೋಪಿಸಿದ್ದಾರೆ.

ವಿಮಾನ ವಿಳಂಬ, ರದ್ದತಿಗಳು ಪೂರ್ಣ ಪ್ರಮಾಣದ ಬಿಕ್ಕಟ್ಟಿಗೆ ಸಿಲುಕಿರುವುದರಿಂದ, ಮುಂದಿನ ಕೆಲವು ದಿನಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿಮಾನಗಳ ಸಂಖ್ಯೆಯನ್ನು ಕಡಿಮೆಗೊಳಿಸಲಾಗುವುದು ಎಂದು ಏರ್ ಇಂಡಿಯಾ ಎಕ್ಸ್‌ಪ್ರೆಸ್ ಸಿಇಒ ಅಲೋಕ್ ಸಿಂಗ್ ಹೇಳಿದ್ದಾರೆ.

# ಚರ್ಚೆಗೆ ರಾಹುಲ್, ಪ್ರಿಯಾಂಕಾಗೆ ಸ್ಮೃತಿ ಇರಾನಿ ಪಂಥಾಹ್ವಾನ

**ಅಮೇಥಿ:** ಪ್ರಧಾನಿ ನರೇಂದ್ರ ಮೋದಿ ಅವರು ದೇಶದ ಪ್ರಮುಖ ವಿಷಯಗಳ ಬಗ್ಗೆ ಮಾತನಾಡುವುದಿಲ್ಲ ಎಂಬ ಪ್ರಿಯಾಂಕಾ ಗಾಂಧಿ ಹೇಳಿಕೆಗೆ ತಿರುಗೇಟು ನೀಡಿದ ಕೇಂದ್ರ ಸಚಿವೆ ಸ್ಮೃತಿಇರಾನಿ ಈ ಕುರಿತಂತೆ ಮಾತನಾಡಲು ಚರ್ಚೆಗೆ ಬರುವಂತೆ ಗಾಂಧಿಗಳಿಗೆ ಪಂಥಾಹ್ವಾನ ನೀಡಿದ್ದಾರೆ. ಈ ಕುರಿತ ಚರ್ಚೆಗೆ ನಾನು ಯಾವುದೇ ದೂರದರ್ಶನ ವಾಹಿನಿಗಳಿಗೆ ಬರಲು ಸಿದ್ಧಳಿದ್ದೇನೆ ನೀವೆ ಸಮಯ ಮತ್ತು ಸ್ಥಳ ನಿಗದಿಪಡಿಸಿ ಎಂದು ಅವರು ಸವಾಲು ಹಾಕಿದ್ದಾರೆ.ಬಿಜೆಪಿಯೊಂದಿಗೆ ಚರ್ಚೆಗೆ ಯಾವುದೇ ಚಾನೆಲ್, ಆಂಕರ್, ಸ್ಥಳ, ಸಮಯ ಮತ್ತು ಸಮಸ್ಯೆಯನ್ನು ಆಯ್ಕೆ ಮಾಡಿಕೊಳ್ಳುವಂತೆ ನಾನು ಅವರಿಗೆ ಸವಾಲು ಹಾಕುತ್ತೇನೆ.

ದೋನೋ ಭಾಯಿ-ಬೆಹೆನ್ ಏಕ್ ತರಫ್ ಔರ್ ಬಿಜೆಪಿ ಕಾ ಏಕ್ ಪ್ರವಕ್ತ ಏಕ್ ತರಫ್, ದೂದ್ ಕಾ ದೂಧ್ ಪಾನಿ ಕಾ ಪಾನಿ ಹೋ ಜಾಯೇಗಾ ನಮ ಪಕ್ಷದಿಂದ ಸುಧಾಂಶು ತ್ರಿವೇದಿ ಅವರೇ ಸಾಕು ಅವರಿಂದಲೇ ಉತ್ತರವನ್ನು ಪಡೆಯಿರಿ ಎಂದು ಉತ್ತರ ಪ್ರದೇಶದ ಅಮೇಥಿಯಿಂದ ಸ್ಪರ್ಧಿಸುತ್ತಿರುವ ಇರಾನಿ ಕರೆ ನೀಡಿದ್ದಾರೆ. ಅಮೇಥಿಯಲ್ಲಿ ಸ್ಮೃತಿ ಇರಾನಿ ಅವರು 2019 ರ ಲೋಕಸಭೆ ಚುನಾವಣೆಯಲ್ಲಿ ರಾಹುಲ್ ಗಾಂಧಿಯನ್ನು 55,000 ಮತಗಳಿಂದ ಸೋಲಿಸಿ ಗಾಂಧಿ ಕುಟುಂಬದ ಸ್ಥಾನವನ್ನು ಕೊನೆಗೊಳಿಸಿದ್ದರು. ಅಮೇಥಿ ಮತ್ತು ರಾಯ್‌ಬರೇಲಿ ಕ್ಷೇತ್ರಗಳು ಗಾಂಧಿ ಕುಟುಂಬದ ಹಳೆಯ ಟರ್ಫ್‌ಗಳೆಂದು ಪರಿಗಣಿಸಲಾದ ಎರಡು ಕ್ಷೇತ್ರಗಳು ಮತ್ತೆ ಕೇಂದ್ರಬಿಂದುವಾಗಿದ್ದು, ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ರಾಯ್ ಬರೇಲಿಯಲ್ಲಿ ಅಖಾಡಕ್ಕೆ ಇಳಿದಿದ್ದಾರೆ ಮತ್ತು ಕುಟುಂಬದ ಆಪ್ತ ಸಹಾಯಕ ಕಿಶೋರಿ ಲಾಲ್ ಶರ್ಮಾ ಅಮೇಥಿಯಲ್ಲಿ ಸತಿ ಇರಾನಿ ವಿರುದ್ಧ ಕಣಕ್ಕಿಳಿದಿದ್ದಾರೆ.

# ಶೂಟರ್‌ಗಳಿಗೆ ತಮ್ಮ ಗುರಿ ಸಲ್ಮಾನ್ ನಿವಾಸ ಎಂದು ಗೊತ್ತಾಗಿದ್ದು ಕೊನೆ ಕ್ಷಣದಲ್ಲಿ

**ಮುಂಬೈ:** ಬಾಲಿವುಡ್ ಸೂಪರ್‌ಸ್ಟಾರ್ ಸಲ್ಮಾನ್ ಖಾನ್ ಅವರ ಮುಂಬೈನ ನಿವಾಸದ ಹೊರಗೆ ಗುಂಡಿನ ದಾಳಿ ನಡೆಸಿದ ಆರೋಪದಲ್ಲಿ ಬಂಧಿಸಲಾದ ಇಬ್ಬರಿಗೆ ಪನ್ವೇಲ್‌ನಲ್ಲಿರುವ ಅವರ ಬಾಡಿಗೆ ಮನೆಗೆ ಶಸ್ತ್ರಾಸ್ತ್ರಗಳು ಮತ್ತು ಗುಂಡುಗಳನ್ನು ತಲುಪಿಸುವವರೆಗೆ ಗುರಿಯ ಬಗ್ಗೆ ತಿಳಿದಿರಲಿಲ್ಲ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಆಪಾದಿತ ಶೂಟರ್‌ಗಳಾದ ಬಿಹಾರದ ಸಾಗರ್ ಪಾಲ್ ಮತ್ತು ವಿಕ್ಕಿ ಗುಪ್ತಾ ಅವರನ್ನು ಗುಜರಾತ್‌ನಿಂದ ಏಪ್ರಿಲ್ 14 ರಂದು ಉನ್ನತ ಮಟ್ಟದ ಬಾಂದ್ರಾದ ಗ್ಯಾಲಕ್ಸಿ ಅಪಾರ್ಟ್‌ಮೆಂಟ್‌ನಲ್ಲಿರುವ ಖಾನ್ ಅವರ ಮನೆಯ ಹೊರಗೆ ಗುಂಡು ಹಾರಿಸಿದ 48 ಗಂಟೆಗಳ ಒಳಗೆ ಬಂಧಿಸಲಾಗಿತ್ತು. ಮುಂಬೈ ಪೊಲೀಸ್ ಕ್ರೈಂ ಬ್ರಾಂಚ್‌ನ ವಿಚಾರಣೆಯ ಸಮಯದಲ್ಲಿ, ಪಾಲ್ ಮತ್ತು ಗುಪ್ತಾ ಅವರಿಗೆ ಜೈಲಿನಲ್ಲಿರುವ ದರೋಡೆಕೋರ ಲಾರೆನ್ಸ್ ಬಿಷ್ಣೋ ಯ್ ಅವರ ಕಿರಿಯ ಸಹೋದರ ಅನೋಲ್ ಬಿಷ್ಣೋಯ್ ಅವರು ಈ ಕೆಲಸವನ್ನು ನೀಡಿದ್ದರು. ಆದರೆ ಶಸ್ತ್ರಾಸ್ತ್ರಗಳನ್ನು ತ ಲುಪಿಸುವವರೆಗೆ ಸಲಾನ್ ಖಾನ್ ಅವರ ನಿವಾಸದ ಮೇಲೆ ಗುಂಡು ಹಾರಿಸಬೇಕೆಂದು ಅವರಿಗೆ ತಿಳಿದಿರಲಿಲ್ಲ ಎಂದು ಅಧಿಕಾರಿ ಹೇಳಿದರು.

ಪಾಲ್ ಅವರನ್ನು ಲಾರೆನ್ಸ್ ಬಿಷ್ಣೋಯ್ ಗ್ಯಾಂಗ್‌ನಲ್ಲಿ ಅಂಕಿತ್ ಎಂಬಾತ ನೇಮಿಸಿಕೊಂಡಿದ್ದಾನೆ. ಪಾಲ್ ಮತ್ತು ಅಂಕಿತ್ ಒಟ್ಟಿಗೆ ಕ್ರಿಕೆಟ್ ಆಡುತ್ತಿದ್ದರು ನಂತರ ಆತ ಪಾಲ್‌ನನ್ನು ವಾಟ್ಸಾಪ್ ಗ್ರೂಪ್‌ಗೆ ಸೇರಿಸಿದ್ದ.ಕೆಲವು ದಿನಗಳ ನಂತರ,



**ಉತ್ತಮ ಮೊತ್ತದ ಭರವಸೆ**

ಗ್ಯಾಂಗ್‌ಗೆ ಇನ್ನೂ ಒಬ್ಬ ವ್ಯಕ್ತಿಯ ಅಗತ್ಯ ವಿರುವ ನಿಯೋಜನೆಯ ಬಗ್ಗೆ ಅಂಕಿತ್ ಪಾಲ್‌ಗೆ ತಿಳಿಸಿದರು. ನಂತರ ಎರಡನೇ ಶೂಟರ್ ಗುಪ್ತಾ ಅವರನ್ನು ಗುಂಪಿಗೆ ಸೇರಿಸಲಾಯಿತು. ಅಂಕಿ ತ್ ಟಾಸ್ಕ್ ಪೂರ್ಣಗೊಳಿಸಲು ಮುಂಬೈಗೆ ಹೋಗುವಂತೆ ಇಬ್ಬರಿಗೆ ಹೇಳಿದನು, ಪ್ರತಿಯಾಗಿ ಉತ್ತಮ ಮೊತ್ತದ ಭರವಸೆ ನೀಡಿದನು. ಇಬ್ಬರೂ ಶೂಟರ್‌ಗಳನ್ನು ವಿದೇಶದಲ್ಲಿರುವ ಅ ನೋಲ್ ಬಿಷ್ಣೋಯ್ ಅವರ ಸೂಚನೆಯ ಮೇರೆಗೆ ವ್ಯಕ್ತಿಯೊಬ್ಬರು ಈ ಕಾರ್ಯ ನಿರ್ವಹಿಸಿದ್ದಾರೆ ಎಂದು ಅಧಿಕಾರಿ ತಿಳಿಸಿದ್ದಾರೆ.

ಆರಂಭದಲ್ಲಿ ಅವರಿಗೆ 30,000 ನೀಡಲಾಯಿತು ಮತ್ತು ಕಳೆದ ವರ್ಷ ಅಕ್ಟೋಬರ್‌ನಲ್ಲಿ ಮುಂಬೈಗೆ ಹೋಗಿ ಮುಂಬೈನ ಹೊರವಲಯದಲ್ಲಿರುವ ಖಾನ್ ಅವರ ತೋಟದ ಮನೆ ಇರುವ ಪನ್ವೇಲ್ ಬಳಿ ಬಾಡಿಗೆ ಮನೆಯನ್ನು ಹುಡುಕುವಂತೆ ಸೂಚಿಸಲಾಗಿತ್ತು. ಪಾಲ್, ಗುಪ್ತಾ ನಗರಕ್ಕೆ ಬಂದು ಎರಡು ತಿಂಗಳಿಗೂ ಹೆಚ್ಚು ಕಾಲ ಇಲ್ಲಿಯೇ ಇದ್ದರು, ಈ ಸಮಯದಲ್ಲಿ ಅವರು ವಿವಿಧ ಸ್ಥಳಗಳಿಗೆ ಭೇಟಿ ನೀಡಿದರು ಮತ್ತು ಅವರ ಹಣ ಖಾಲಿಯಾದಾಗ ಬಿಹಾರದ ತಮ ಹಳ್ಳಿಗೆ ಮರಳಿದರು ಎಂದು ಅಧಿಕಾರಿ ಹೇಳಿದರು.

ಫೆಬ್ರವರಿಯಲ್ಲಿ ಇಬ್ಬರನ್ನೂ ಮತ್ತೆ ಗ್ಯಾಂಗ್ ಸಂಪರ್ಕಿಸಿ 40,000 ನೀಡಿ ವಾಸಕ್ಕೆ ಬಾಡಿಗೆ ಮನೆ ಕೊಡಿಸುವಂತೆ ಹೇಳಿದ್ದರು. ಈ ಬಾರಿ ಅವರು ಮುಂಬೈನಿಂದ 60 ಕಿಮೀ ದೂರದಲ್ಲಿರುವ ಪನ್ವೆಲ್‌ಗೆ ಬಂದು ಹರಿಗ್ರಾಮ್ ಪ್ರದೇಶದಲ್ಲಿ ಬಾಡಿಗೆಗೆ ಮನೆ ಮಾಡಿಕೊಂಡಿದ್ದರು. ಕೆಲವು ದಿನಗಳ ನಂತರ, ಮೋಟಾರುಬೈಕನ್ನು ಖರೀದಿಸಲು ಅವರನ್ನು ಕೇಳಲಾಯಿತು, ಅದಕ್ಕಾಗಿ ಅವರ ಬ್ಯಾಂಕ್ ಖಾತೆಗೆ ಹಣವನ್ನು ಜಮಾ ಮಾಡಲಾಗಿದೆ ಮತ್ತು ಸ್ವಲ್ಪ ಹಣವನ್ನು ಸಹ ಅವರಿಗೆ ನೀಡಲಾಯಿತು ಎಂದು ಅಧಿಕಾರಿ ಮಾಹಿತಿ ನೀಡಿದರು.

**ಶಸ್ತ್ರಾಸ್ತ್ರಗಳನ್ನು ತಲುಪಿಸುವ ಕೆಲವು ದಿನಗಳ ಮೊದಲು, ಬಾಂದ್ರಾದಲ್ಲಿರುವ 58 ವರ್ಷದ ನಟನ ನಿವಾಸ ಮತ್ತು ಪನ್ವೇಲ್‌ನಲ್ಲಿರುವ ಅವರ ಫಾರ್ಮ್ ಹೌಸ್‌ನಲ್ಲಿ ಸಮೀಕ್ಷೆ ನಡೆಸಲು ಅವರನ್ನು ಕೇಳಲಾಯಿತು. ಎರಡು ಪಿಸ್ತೂಲ್‌ಗಳು, ಲೈವ್ ರೌಂಡ್‌ಗಳನ್ನು ಮಾರ್ಚ್ 15 ರಂದು ಇಬ್ಬರು ವ್ಯಕ್ತಿಗಳಾದ ಸೋನು ಬಿಷ್ಣೋಯ್, ಅನುಜ್ ಥಾಪನ್ ಅವರ ಬಾಡಿಗೆ ಮನೆಯಲ್ಲಿ ಅವರಿಗೆ ತಲುಪಿಸಿದರು, ಈ ಹಂತದಲ್ಲಿ ಅವರಿಗೆ ಗುರಿಯ ಬಗ್ಗೆ ತಿಳಿಸಲಾಯಿತು ಎಂದು ತಿಳಿದುಬಂದಿದೆ.**

# ಇಸ್ಲಾಂಧರ್ಮದಲ್ಲಿ ಲಿವ್ ಇನ್ ರಿಲೇಶನ್‌ಶಿಪ್‌ಗೆ ಅವಕಾಶವಿಲ್ಲ

## ವಿವಾಹಿತ ಮುಸ್ಲಿಮರಿಗೆ 'ಲಿವ್ ಇನ್ ರಿಲೇಷನ್‌ಶಿಪ್' ಹಕ್ಕು ಇಲ್ಲ; ಅಲಹಾಬಾದ್ ಹೈಕೋರ್ಟ್ ಮಹತ್ವದ ಆದೇಶ

**ಅಲಹಾಬಾದ್:** ಇಸ್ಲಾಂ ಧರ್ಮಕ್ಕೆ ಸೇರಿದ ವಿವಾಹಿತ ವ್ಯಕ್ತಿಯು 'ಲಿವ್- ಇನ್ ರಿಲೇಶನ್ ಶಿಪ್' ಹಕ್ಕುಗಳನ್ನು ಕೇಳುವಂತಿಲ್ಲ. ವಿವಾಹಿತ ವ್ಯಕ್ತಿಗೆ ಈ ರೀತಿಯ ಸಮ್ಮತಿಯ ಸಹಜೀವನಕ್ಕೆ ಇಸ್ಲಾಂ ಧರ್ಮದಲ್ಲಿ ಅವಕಾಶವೇ ಇಲ್ಲ ಎಂದು ಅಲಹಾಬಾದ್ ಹೈಕೋರ್ಟ್ ಹೇಳಿದೆ.



**ಪ್ರಾಪ್ತ ವಯಸ್ಕರ ರಾಗಿರಬೇಕು**

ಅಲಹಾಬಾದ್‌ನವರೇ ಆದ, ಸ್ನೇಹಾ ದೇವಿ ಹಾಗೂ ಮೊಹಮ್ಮದ್ ಶಬದ್ ಖಾನ್ ಎಂಬ ಜೋಡಿಯೊಂದು ತಮಗೆ ಲಿವ್ ಇನ್ ರಿಲೇಷನ್ ಶಿಪ್‌ಗೆ ಅವಕಾಶ ಕಲ್ಪಿಸಬೇಕು ಹಾಗೂ ತಮಗೆ ಪೊಲೀಸ್ ಭದ್ರತೆಯನ್ನು ಒದಗಿಸಬೇಕು ಎಂದು ನ್ಯಾಯಾಲಯಕ್ಕೆ ಮನವಿ ಸಲ್ಲಿಸಿದ್ದರು. ಅವರ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ಎ.ಆರ್.ಮಸೂದಿ ಹಾಗೂ ಎ.ಕೆ. ಶ್ರೀವತ್ಸ ಅವರುಳ್ಳ ನ್ಯಾಯಪೀಠ ಈ ತೀರ್ಪು ನೀಡಿದೆ.

**ಏನಿದು ಪ್ರಕರಣ?:** ಸ್ನೇಹಾ ಎಂಬ ಯುವತಿಯು ಖಾನ್ ಜೊತೆಗೆ ಲಿವ್ - ಇನ್ ರಿಲೇಷನ್ ಶಿಪ್ ಇದ್ದು, ಅದಕ್ಕೆ ಸ್ನೇಹಾಳ ಕುಟುಂಬದಿಂದ ಭಾರೀ ವಿರೋಧ ವ್ಯಕ್ತವಾಗಿತ್ತು. ಆ ಹಿನ್ನೆಲೆಯಲ್ಲಿ, ನ್ಯಾಯಾಲಯದ ಮೊರೆ ಹೋಗಿದ್ದ ಇವರಿಬ್ಬರೂ, ತಮಗೆ ಲಿವ್ ಇನ್ ರಿಲೇಷನ್ ಶಿಪ್‌ನಲ್ಲಿ ಇರಲು ಅವಕಾಶ ಕಲ್ಪಿಸಬೇಕು, ಸ್ನೇಹಾಳ ಕುಟುಂಬದಿಂದ ಏನೂ ತೊಂದರೆಯಾಗದಂತೆ ತಮಗೆ ಪೊಲೀಸ್ ಭದ್ರತೆ ನೀಡಬೇಕು. ಸಂವಿಧಾನದ 21ನೇ ಪರಿಚ್ಛೇದದ ಅಡಿಯಲ್ಲಿ (ಜೀವನದ ಭದ್ರತೆ ಹಾಗೂ ವೈಯಕ್ತಿಕ ಸ್ವಾತಂತ್ರ್ಯದ ಹಕ್ಕು) ತಮಗೆ ಭದ್ರತೆ ಒದಗಿಸಬೇಕು ಎಂದು ನ್ಯಾಯಾಲಯವನ್ನು ಪ್ರಾರ್ಥಿಸಿದ್ದರು.

ವಿಚಾರಣೆಯ ವೇಳೆ, ಖಾನ್ ಅವರು 2000 ಇಸವಿಯಲ್ಲೇ ವಿವಾಹವಾಗಿದ್ದು ತಮ್ಮ ಪತ್ನಿಯೊಂದಿಗೆ ಒಂದು ಮಗುವನ್ನೂ ಪಡೆದಿದ್ದಾರೆ. ಆನಂತರ ಸ್ನೇಹಾ ದೇವಿಯವರ ಲಿವ್ ಇನ್ ರಿಲೇಷನ್ ಶಿಪ್‌ನಲ್ಲಿ ಇರಲು ಮನಸ್ಸು ಮಾಡಿದ್ದಾರೆ ಎಂಬ ಅಂಶ ನ್ಯಾಯಪೀಠಕ್ಕೆ ತಿಳಿದುಬಂದಿತ್ತು.

ಇದನ್ನು ಪರಿಗಣಿಸಿದ ನ್ಯಾಯಪೀಠ, 'ಇಸ್ಲಾಂ ಧರ್ಮಕ್ಕೆ ಸೇರಿದ ವಿವಾಹಿತ ವ್ಯಕ್ತಿಗಳಿಗೆ ಆತನ ಪತ್ನಿ ಇನ್ನೂ ಜೀವಂತವಾಗಿದ್ದರೆ ಅಂಥ ವ್ಯಕ್ತಿಗೆ 'ಲಿವ್ - ಇನ್ ರಿಲೇಶನ್ ಶಿಪ್' ನಲ್ಲಿ ಇರಲು ಇಸ್ಲಾಂನ ಧಾರ್ಮಿಕ ತತ್ವಗಳು ಅವಕಾಶ ನೀಡುವುದಿಲ್ಲ. ಇಂಥ ಸಂಬಂಧದಲ್ಲಿ ಮುಂದುವರಿಯುವ ಮುಸ್ಲಿಂ ವ್ಯಕ್ತಿಗಳು ಅವಿವಾಹಿತರಾಗಿರಬೇಕು ಹಾಗೂ ಅವರು ಪ್ರಾಪ್ತ ವಯಸ್ಕರಾಗಿರಬೇಕು. ಹಾಗಿದ್ದರೆ ಮಾತ್ರ ಇಂಥ ಸಂಬಂಧಕ್ಕೆ ಕಾನೂನಿನ ಪ್ರಕಾರ ಅವಕಾಶ ಸಿಗುತ್ತದೆ' ಎಂದು ಸ್ಪಷ್ಟವಾಗಿ ತಿಳಿಸಿದೆ.

**ಇಸ್ಲಾಂ ಧರ್ಮದಲ್ಲಿ ವಿವಾಹಿತ ವ್ಯಕ್ತಿಗಳಿಗೆ ಲಿವ್ ಇನ್ ರಿಲೇಷನ್ ನಡೆಸಲು ಅವಕಾಶವಿಲ್ಲ ಎಂದು ಅಲಹಾಬಾದ್ ಹೈಕೋರ್ಟ್ ಹೇಳಿದೆ. ಖಾನ್ ಎಂಬ ವಿವಾಹಿತ ಮುಸ್ಲಿಂ ವ್ಯಕ್ತಿ ಹಾಗೂ ಆತನ ಪ್ರೇಯಸಿ ಸ್ನೇಹಾ ಎಂಬುವರು ತಮಗೆ ಒಟ್ಟಿಗೆ ಸಹಜೀವನ ನಡೆಸಲು ಅವಕಾಶ ಕೊಡುವಂತೆ ಕೇಳಿ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಪೀಠ ಈ ರೀತಿಯಾಗಿ ಹೇಳಿದೆ. ಒಂದೇ ವೇಳೆ, ಮುಸ್ಲಿಂ ವ್ಯಕ್ತಿಗಳು ಅವಿವಾಹಿತರಾಗಿದ್ದರೆ ಹಾಗೂ ಅವರು ಪ್ರಾಪ್ತ ವಯಸ್ಸಿನವರಾಗಿದ್ದರೆ ಅವರು ಇಂಥ ಸಂಬಂಧದಲ್ಲಿ ಇರಬಹುದು ಎಂದು ನ್ಯಾಯಪೀಠ ತಿಳಿಸಿದೆ.**

## ಮಿನಿ ನ್ಯೂಸ್

### 10ನೇ ತರಗತಿ ಪರೀಕ್ಷೆ ಬರೆದು ಉತ್ತೀರ್ಣಳಾದ ಅತ್ಯಾಚಾರ ಸಂತ್ರಸ್ತೆ

**ಹೈದರಾಬಾದ್:** ತೆಲಂಗಾಣದಲ್ಲಿ ಅತ್ಯಾಚಾರಕ್ಕೊಳಗಾಗಿದ್ದ ಸಂತ್ರಸ್ತ ಬಾಲಕಿಯೊಬ್ಬಳು 10ನೇ ತರಗತಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿದ್ದು, ತೀವ್ರ ಆಘಾತದ ಸಂದರ್ಭದಲ್ಲೂ ತಮ ದೃಢತೆಯನ್ನು ಪ್ರದರ್ಶಿಸಿದ್ದಾರೆ. 2023ರಲ್ಲಿ 15 ಬಾಲಕಿಯೊಬ್ಬಳು ತಂದೆಯಿಂದಲೇ ಅತ್ಯಾಚಾರಕ್ಕೊಳಗಾಗಿದ್ದರು. ಆಕೆಯ ಹೊಟ್ಟೆ ನೋವಿನ ಬಗ್ಗೆ ಅಜ್ಜಿಗೆ ತಿಳಿಸಿದಾಗ ಅವಳನ್ನು ಆಸ್ಪತ್ರೆಗೆ ಕರೆದೊಯ್ಯಲಾಗಿತ್ತು. ತಪಾಸಣೆ ನಡೆಸಿದ ವೈದ್ಯರು ಆಕೆ ಗರ್ಭಿಣಿಯಾಗಿದ್ದಾಳೆ ಎಂದು ತಿಳಿಸಿದ್ದರು.

ಆಕೆಯ ಗರ್ಭಾವಸ್ಥೆಯು ಮುಂದುವರಿದ ಹಂತದಲ್ಲಿದ್ದುದರಿಂದ ಅದನ್ನು ಸ್ಥಗಿತಗೊಳಿಸಲಾಗಲಿಲ್ಲ. ಆಕೆ ಒಂಬತ್ತನೇ ತಿಂಗಳಲ್ಲಿ ಮಗುವಿಗೆ ಜನ ನೀಡಿದ್ದಾಳೆ. ಇದೀಗ ಎಸ್ಸೆಸ್ಸೆಲ್ಸಿ ಪರೀಕ್ಷೆ ಬರೆದು ಉತ್ತೀರ್ಣರಾಗಿದ್ದಾಳೆ ಎಂದು ಪೊಲೀಸ್ ಅಧಿಕಾರಿ ಎಂ. ಮಹೇಂದರ್ ರೆಡ್ಡಿ ತಿಳಿಸಿದ್ದಾರೆ.

### ರಾಮಮಂದಿರಕ್ಕೆ ಭೇಟಿ ನೀಡಿದ ಕೇರಳ ರಾಜ್ಯಪಾಲ ಆರಿಫ್ ಮೊಹಮದ್

**ಅಯೋಧ್ಯೆ:** ಕೇರಳ ರಾಜ್ಯಪಾಲ ಆರಿಫ್ ಮೊಹಮದ್ ಖಾನ್ ಅವರು ಅಯೋಧ್ಯೆ, ರಾಮ ಮಂದಿರಕ್ಕೆ ಭೇಟಿ ನೀಡಿ ದೇವರಿಗೆ ನಮಿಸಿದರು. ಕೇರಳ ರಾಜಭವನದ ಎಕ್ಸ್ ನಲ್ಲಿನ ಪೋಸ್ಟ್‌ನಲ್ಲಿ ರಾಜ್ಯಪಾಲರು ರಾಮ ಮಂದಿರಕ್ಕೆ ಭೇಟಿ ನೀಡಿ ದರ್ಶನ ಪಡೆದ ಬಗ್ಗೆ ಮಾಹಿತಿ ನೀಡಲಾಗಿದೆ. ಜನವರಿಯಲ್ಲಿ ಎರಡು ಬಾರಿ ಅಯೋಧ್ಯೆಗೆ ಬಂದ್ದೆ. ಅಂದಿನ ಭಾವನೆ ಇಂದಿಗೂ ಹಾಗೆಯೇ ಇದೆ.

ನಾನು ಅಯೋಧ್ಯೆಗೆ ಹಲವು ಬಾರಿ ಬಂದಿದ್ದೇನೆ. ಇದು ನಮಗೆ ಸಂತೋಷದ ವಿಷಯವಲ್ಲ, ಬದಲಾಗಿ ಹೆಮೆಯ ವಿಷಯವಾಗಿದೆ. ಅಯೋಧ್ಯೆ ಮತ್ತು ಶ್ರೀರಾಮನನ್ನು ಪೂಜಿಸುತ್ತಿದ್ದೇನೆ ಎಂದು ರಾಜ್ಯಪಾಲರು ಸುದ್ದಿಗಾರರಿಗೆ ತಿಳಿಸಿದರು. ಕೇರಳ ರಾಜ್ಯಪಾಲರ ಅಧಿಕತ ಎಕ್ಸ್ ಹ್ಯಾಂಡಲ್‌ನಲ್ಲಿ ಪೋಸ್ಟ್ ಮಾಡಲಾದ ವೀಡಿಯೊದಲ್ಲಿ ಖಾನ್ ಅವರು, ರಾಮ್ ಲಲ್ಲಾನ ವಿಗ್ರಹದ ಮುಂದೆ ನಮಸ್ಕರಿಸುತ್ತಿರುವುದನ್ನು ತೋರಿ ಸುತ್ತಾ ಜೈ ಶ್ರೀ ರಾಮ್ ಎಂಬ ಘೋಷಣೆ ಕೇಳಿಬರುತ್ತಿರುವ ಕಂಡು ಬರುತ್ತದೆ.

### ಮಣಿಪುರದ ಕಾಮ್‌ಜಾಂಗ್ ಜಿಲ್ಲೆಯಲ್ಲಿ 5,457 ಅಕ್ರಮ ವಲಸಿಗರು ಪತ್ತೆ

**ಇಂಫಾಲ್:** ಮಣಿಪುರ ಸರ್ಕಾರವು ಕಾಮ್‌ಜಾಂಗ್ ಜಿಲ್ಲೆಯಲ್ಲಿ 5,457 ಅಕ್ರಮ ವಲಸಿಗರನ್ನು ಪತ್ತೆಹಚ್ಚಿದೆ ಮತ್ತು ಅವರನ್ನು ಗಡಿ ಪಾರು ಮಾಡಲು ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ ಎಂದು ಸಿಎಂ ಎನ್ ಬಿರೇನ್ ಸಿಂಗ್ ಹೇಳಿದ್ದಾರೆ. 5,173 ಜನರ ಬಯೋಮೆಟ್ರಿಕ್ ಡೇಟಾವನ್ನು ಸಂಗ್ರಹಿಸಲಾಗಿದೆ ಎಂದು ಅವರು ಎನಲ್ಲಿ ಅವರು ಬರೆದಿದ್ದಾರೆ. ಫೈಕೋಹ್, ಹುಯಿಮಿ ಥಾನಾ, ಸಂಗಲೋಕ್ ನಿರಾಶ್ರಿತರ ಶಿಬಿರಗಳಲ್ಲಿ ತಂಗಿರುವವರ ಬಯೋಮೆಟ್ರಿಕ್‌ಗಳನ್ನು ಪಡೆಯಲಾಗುತ್ತಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ತಮ್ಮ ಸರ್ಕಾರ ಎಲ್ಲಾ ಅಕ್ರಮ ವಲಸಿಗರಿಗೆ ಮಾನವೀಯ ನೆರವು ನೀಡುತ್ತಿದೆ ಎಂದು ಸಿಎಂ ಹೇಳಿದರು. ನಾವು ಈ ಪರಿಸ್ಥಿತಿಯನ್ನು ಅತ್ಯಂತ ಸೂಕ್ಷ್ಮತೆಯಿಂದ ನಿಭಾಯಿಸುತ್ತಿದ್ದೇವೆ ಎಂದು ಅವರು ಹೇಳಿದರು. ಈ ತಿಂಗಳ ಆರಂಭದಲ್ಲಿ, ಮಣಿಪುರಕ್ಕೆ ದಾಟಿದ ಮ್ಯಾನ್ಮಾರ್‌ನಿಂದ ಕನಿಷ್ಠ 38 ಅಕ್ರಮ ವಲಸಿಗರನ್ನು ತೆಂಗ್ನೌಪಾಲ್ ಜಿಲ್ಲೆಯ ಮೊರೆಹ್ ಪಟ್ಟಣದ ಮೂಲಕ ಗಡೀಪಾರು ಮಾಡಲಾಗಿದೆ ಎಂದು ಸಿಂಗ್ ಮಾಹಿತಿ ನೀಡಿದ್ದಾರೆ. ಮೊದಲ ಹಂತದಲ್ಲಿ ಒಟ್ಟು 77 ವಲಸಿಗರನ್ನು ಗಡಿಪಾರು ಮಾಡಲಾಗಿದೆ ಎಂದು ಅವರು ಹೇಳಿದರು ಮಣಿಪುರ ಸರ್ಕಾರವು ಕಾಮ್‌ಜಾಂಗ್ ಜಿಲ್ಲೆಯಲ್ಲಿ 5,457 ಅಕ್ರಮ ವಲಸಿಗರನ್ನು ಪತ್ತೆಹಚ್ಚಿದೆ ಮತ್ತು ಅವರನ್ನು ಗಡಿಪಾರು ಮಾಡಲು ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ ಎಂದು ಮುಖ್ಯಮಂತ್ರಿ ಎನ್ ಬಿರೇನ್ ಸಿಂಗ್ ಹೇಳಿದ್ದಾರೆ. ಫೈಕೋಹ್, ಹುಯಿಮಿ ಥಾನಾ, ಸಂಗಲೋಕ್ ನಿರಾಶ್ರಿತರ ಶಿಬಿರಗಳಲ್ಲಿ ತಂಗಿರುವವರ ಬಯೋಮೆಟ್ರಿಕ್‌ಗಳನ್ನು ಪಡೆಯಲಾಗುತ್ತಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಮೊದಲ ಹಂತದಲ್ಲಿ ಒಟ್ಟು 77 ವಲಸಿಗರನ್ನು ಗಡಿಪಾರು ಮಾಡಲಾಗಿದೆ ಎಂದು ಅವರು ಹೇಳಿದರು.

### ವಿಮಾನ ಹಾರಾಟ ರದ್ದಿಗೆ ಕಾರಣರಾದ 25 ಸಿಬ್ಬಂದಿಗಳ ವಜಾ

**ನವದೆಹಲಿ:** ಅನಾರೋಗ್ಯದ ನೆಪವೊಡ್ಡಿ ಸಾಮೂಹಿಕ ರಜೆ ಹಾಕುವ ಮೂಲಕ 90ಕ್ಕೂ ಹೆಚ್ಚು ವಿಮಾನಗಳ ಹಾರಾಟ ರದ್ದಿಗೆ ಕಾರಣಕರ್ತರು ಎನ್ನಲಾದ ಸುಮಾರು 25 ಕ್ಯಾಬಿನ್ ಸಿಬ್ಬಂದಿಗಳನ್ನು ಏರ್ ಇಂಡಿಯಾ ಸಂಸ್ಥೆ ವಜಾಗೊಳಿಸಿದೆ ಎಂದು ಏರ್‌ಲೈನ್ ಮೂಲಗಳು ತಿಳಿಸಿವೆ. ಟಾಟಾ ಗ್ರೂಪ್ ಒಡೆತನದ ವಿಮಾನಯಾನ ಸಂಸ್ಥೆಯು ಉಳಿದ ಕ್ಯಾಬಿನ್ ಸಿಬ್ಬಂದಿಗಳಿಗೆ ಇಂದು ಸಂಜೆ 4 ಗಂಟೆಯೊಳಗೆ ಮತ್ತೆ ಕರ್ತವ್ಯಕ್ಕೆ ಹಾಜರಾಗಬೇಕು ಇಲ್ಲದಿದ್ದರೆ ನಿಮನ್ನು ವಜಾಗೊಳಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಲಾಗಿದೆ.

ಕ್ಯಾಬಿನ್ ಸಿಬ್ಬಂದಿಯ ಲಭ್ಯತೆಯಿಲ್ಲದ ಕಾರಣ ಏರ್ ಇಂಡಿಯಾ ಸಂಸ್ಥೆ ಕನಿಷ್ಠ 60 ವಿಮಾನ ಯಾನಗಳನ್ನು ರದ್ದುಗೊಳಿಸಿದೆ ಎಂದು ಮೂಲಗಳು ತಿಳಿಸಿವೆ ಮತ್ತು ಕ್ಯಾಬಿನ್ ಸಿಬ್ಬಂದಿಯ ಒಂದು ವಿಭಾಗದಿಂದ ಸಾಮೂಹಿಕ ರಜೆಗಳು ಪ್ರಯಾಣಿಕರಿಗೆ ಅಪಾರ ಅನಾನುಕೂಲತೆಯನ್ನು ಉಂಟುಮಾಡಿದೆ. ಏರ್‌ಲೈನ್‌ನಲ್ಲಿ ಹಿರಿಯ ಮಟ್ಟದಲ್ಲಿ ಸುಮಾರು 500 ಮಂದಿ ಸೇರಿದಂತೆ ಸುಮಾರು 1,400 ಕ್ಯಾಬಿನ್ ಸಿಬ್ಬಂದಿ ಇದ್ದಾರೆ. 90 ಕ್ಕೂ ಹೆಚ್ಚು ವಿಮಾನಗಳ ರದ್ದತಿಗೆ ಕಾರಣವಾದ ಏರ್‌ಲೈನ್‌ನಲ್ಲಿನ ದುರುಪಯೋಗದ ವಿರುದ್ಧ ಪ್ರತಿಭಟಿಸಲು 200 ಕ್ಕೂ ಹೆಚ್ಚು ಕ್ಯಾಬಿನ್ ಸಿಬ್ಬಂದಿ ಮಂಗಳವಾರ ರಾತ್ರಿಯಿಂದ ಅಸ್ವಸ್ಥರಾಗಿದ್ದಾರೆಂದು ವರದಿ ಮಾಡಲು ಪ್ರಾರಂಭಿಸುವ ಮೂಲಕ ಸಾಮೂಹಿಕ ರಜೆ ಹಾಕಿದ್ದರಿಂದ ಇಂತಹ ಸನ್ನಿವೇಶ ನಿರ್ಮಾಣವಾಗಿತ್ತು.

### ಗ್ವಾದರ್ ಬಂದರಿನಲ್ಲಿ ಭಯೋತ್ಪಾದಕ ದಾಳಿ: 7 ಕಾರ್ಮಿಕರ ಸಾವು

**ಪಾಕಿಸ್ತಾನ:** ಬಂದರು ನಗರ ಗ್ವಾದರ್‌ನಲ್ಲಿ ಗುರುವಾರ ಅಪರಿಚಿತ ಬಂದೂಕುಧಾರಿಗಳು ನಡೆಸಿದ ಭಯೋತ್ಪಾದಕ ದಾಳಿಯಲ್ಲಿ ಕನಿಷ್ಠ ಏಳು ಕಾರ್ಮಿಕರು ಮೃತಪಟ್ಟಿದ್ದಾರೆ. ಸುರ್ಬಂದರ್ ಪ್ರದೇಶದ ಗ್ವಾದ ರ್ ಬಂದರು ಬಳಿಯ ವಸತಿ ಪ್ರದೇಶದಲ್ಲಿ ಬಂದೂಕುಧಾರಿಗಳು ಗುಂಡು ಹಾರಿಸಿದ್ದಾರೆ. ಘಟನೆಯಲ್ಲಿ 7 ಮಂದಿ ಮೃತಪಟ್ಟಿದ್ದು, ಒಬ್ಬರು ಗಾಯಗೊಂಡಿದ್ದಾರೆ' ಎಂದು ಗ್ವಾದರ್ ಪೊಲೀಸ್ ಅಧಿಕಾರಿ ಮೊನ್ ತಿಳಿಸಿದ್ದಾರೆ.

ಮೃತರು, ಗಾಯಗೊಂಡ ವ್ಯಕ್ತಿ ಈ ಪ್ರದೇಶದ ಕ್ಷೌರದ ಅಂಗಡಿಯಲ್ಲಿ ಕೆಲಸ ಮಾಡುತ್ತಿದ್ದರು. ಇವರು ಪಂಜಾಬ್‌ನ ಖನೇವಾಲ್ ಜಿಲ್ಲೆಗೆ ಸೇರಿದವರು. ಸದ್ಯ ಮೃತ ದೇಹಗಳನ್ನು ಗ್ವಾದರ್ ಆಸ್ಪತ್ರೆಗೆ ರವಾನಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ. ಕಾರ್ಮಿಕರ ಹತ್ಯೆಯನ್ನು ಬಲೂಚಿಸ್ತಾನ ಸಿಎಂ ಸಫ್ರಾಜ್ ಬುಗ್ತಿ ಖಂಡಿಸಿದ್ದಾರೆ.



# ಲಕ್ನೊ ತಂಡದ ನಾಯಕನ ಸ್ಥಾನದಿಂದ ರಾಹುಲ್ ಔಟ್

ಕನ್ನಡಿಗ ಕೆ. ಎಲ್ ರಾಹುಲ್ ಅವರ ಕ್ರಿಕೆಟ್ ವೃತ್ತಿ ಜೀವನ ಸಾಂಗವಾಗಿ ನಡೆಯುತ್ತಿಲ್ಲ. ವಾರದ ಹಿಂದೆ ಟಿ 20 ವಿಶ್ವಕಪ್ ಸ್ಥಾನ ಕಳೆದುಕೊಂಡಿದ್ದ ಅವರು ಈಗ ಲಕ್ನೋ ಸೂಪರ್ ಜೈಂಟ್ಸ್ (ಎಲ್‌ಎಸ್ಜಿ) ನಾಯಕತ್ವವನ್ನು ಕಳೆದುಕೊಳ್ಳುವ ಸಾಧ್ಯತೆಯಿದೆ ಎಂದು ವರದಿಗಳು ತಿಳಿಸಿವೆ. ಐಪಿಎಲ್ ಪ್ಲೇಆಫ್ ಅವಕಾಶದಿಂದ ಬಹುತೇಕ ವಂಚಿತರಾಗಿರುವ ಲಕ್ನೋ ತಂಡ ಮುಂದಿನೆರಡು ಪಂದ್ಯಗಳಿಗೆ ತಮ್ಮ ನಾಯಕನನ್ನು ವಜಾಗೊಳಿಸುವ ಸಾಧ್ಯತೆಯಿದೆ.

ಎಸ್‌ಆರ್‌ಎಚ್ ವಿರುದ್ಧ 62 ಎಸೆತಗಳು ಬಾಕಿ ಇರುವಾಗ 10 ವಿಕೆಟ್‌ಗಳಿಂದ ಸೋತ ನಂತರ ಎಲ್‌ಎಸ್‌ಜಿ ಮಾಲೀಕ ಸಂಜೀವ್ ಗೋಯೆಂಕಾ. ಕೆಎಲ್ ರಾಹುಲ್ ಅವರೊಂದಿಗೆ ಆಕ್ರೋಶಭರಿತ ಚರ್ಚೆ ನಡೆಸಿದ ವಿಡೀಯೊ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆದ ನಂತರ ಈ ವರದಿ ಹೊರಬಂದಿದೆ. ಐಪಿಎಲ್ 2025 ರ ಮೆಗಾ ಹರಾಜಿಗೆ ಮುಂಚಿತವಾಗಿ ತಂಡವು ಕೆಎಲ್ ರಾಹುಲ್ ಅವರನ್ನು ಉಳಿಸಿಕೊಳ್ಳುವುದಿಲ್ಲ ಎಂದು ತಿಳಿದುಬಂದಿದೆ.

ಇದರಿಂದಾಗಿ ಲಕ್ನೋ ಫ್ರಾಂಚೈಸಿಯೊಂದಿಗಿನ ಅವರ ಮೂರು ವರ್ಷಗಳ ಸುದೀರ್ಘ ಅವಧಿ ಕೊನೆಗೊಳ್ಳುತ್ತದೆ. ಆದಾಗ್ಯೂ, ಕೆಎಲ್ ತಮ್ಮ ಬ್ಯಾಟಿಂಗ್ ಕಡೆಗೆ ಹೆಚ್ಚು ಗಮನ ಹರಿಸುವ ಕಾರಣದೊಂದಿಗೆ ನಾಯಕತ್ವದಿಂದ ಕೆಳಗಿಳಿಯುವ ಸಾಧ್ಯತೆಯಿದೆ ಎಂದು ಸೂಚಿಸುವ ವದಂತಿಗಳು ಹಬ್ಬಿವೆ . ಇದು ಸಂಭವಿಸಿದಲ್ಲಿ, ಎಲ್‌ಎಸ್‌ಜಿ ಉಪನಾಯಕ ನಿಕೋಲಸ್ ಪೂರನ್ ಉಳಿದ ಪಂದ್ಯಗಳಿಗೆ ನಾಯಕತ್ವದ ಪಾತ್ರ ವಹಿಸಿಕೊಳ್ಳುವ ಸಾಧ್ಯತೆಯಿದೆ. ಡಿಸಿ ವಿರುದ್ಧದ ಮುಂದಿನ ಪಂದ್ಯಕ್ಕೆ ಮೊದಲು ಐದು ದಿನಗಳ ಅಂತರವಿದೆ. ಸದ್ಯಕ್ಕೆ ಯಾವುದೇ ನಿರ್ಧಾರ ತೆಗೆದುಕೊಂಡಿಲ್ಲ, ಆದರೆ ರಾಹುಲ್ ಉಳಿದ ಎರಡು ಪಂದ್ಯಗಳಿಗೆ ತಮ್ಮ ಬ್ಯಾಟಿಂಗ್ ಮೇಲೆ ಗಮನ ಹರಿಸಲು ಯೋಜಿಸಿದರೆ, ಮ್ಯಾನೇಜ್ಮೆಂಟ್ ಅವಕಾಶ ಕೊಡುತ್ತದೆ ಎಂದು ತಿಳಿದುಬಂದಿದೆ.

ಪ್ಯಾಟ್ ಕಮಿನ್ಸ್ ನೇತೃತ್ವದ ಎಸ್‌ಆರ್‌ಎಚ್ ವಿರುದ್ಧದ ಇತ್ತೀಚಿನ ಪಂದ್ಯದ ಬಗ್ಗೆ ಮಾತನಾಡುತ್ತಾ, ಎಲ್‌ಎಸ್‌ಜಿ ಅವಮಾನಕರ ಸೋಲನ್ನು ಎದುರಿಸಿತು. ಟ್ರಾವಿಸ್ ಹೆಡ್ ಮತ್ತು ಅಭಿಷೇಕ್ ಶರ್ಮಾ ಏಕಾಂಗಿಯಾಗಿ 167 ರನ್‌ಗಳ ಜೊತೆಯಾಟದ ಮೂಲಕ 10 ಓವರ್‌ಗಳಲ್ಲಿ 165 ರನ್‌ಗಳ ಮೊತ್ತವನ್ನು ಬೆನ್ನಟ್ಟಲು ನೆರವು ನೀಡಿದರು. ಪಂದ್ಯದಲ್ಲಿ ಕೆಎಲ್ ರಾಹುಲ್ 33 ಎಸೆತಗಳಲ್ಲಿ 29 ರನ್ ಮಾತ್ರ ಗಳಿಸಿದ್ದರು. ಕೆಎಲ್ ರಾಹುಲ್ ಈವರೆಗೆ 11 ಪಂದ್ಯಗಳಿಂದ ಒಟ್ಟು 460 ರನ್ ಗಳಿಸಿದ್ದರೂ, ಅವರ ಸ್ಟ್ರೈಕ್ ರೇಟ್ ಸಾಕಷ್ಟು ಕುಗ್ಗಿದೆ. ಅದು ಅವರ ಹಿಂಬಡ್ತಿಗೆ ಸಂಭಾವ್ಯ ಕಾರಣವಾಗಿರಬಹುದು.



# ■ಆರ್‌ಸಿಬಿಗೆ ಸತತ 4ನೇ ಜಯ ■ಕೊಹ್ಲಿ ಸ್ಫೋಟಕ ಬ್ಯಾಟಿಂಗ್

# ಆರ್‌ಸಿಬಿ ವಿರುದ್ಧ ಪಂಜಾಬ್ ಪಂಚರ್

ಆರ್‌ಸಿಬಿ ತಂಡವು ನಿಗದಿತ 20 ಓವರ್‌ಗೆ 7 ವಿಕೆಟ್ ನಷ್ಟಕ್ಕೆ ಬರೋಬ್ಬರಿ 241 ರನ್ ಸಿಡಿಸಿತು. ಈ ಬೃಹತ್ ಮೊತ್ತದ ಟಾರ್ಗೆಟ್ ಬೆನ್ನಟ್ಟಿದ ಪಂಜಾಬ್ ಕಿಂಗ್ಸ್ ತಂಡವು 17 ಓವರ್‌ಗೆ ತನ್ನೆಲ್ಲಾ ವಿಕೆಟ್ ಕಳೆದುಕೊಂಡು 181 ರನ್ ಗಳಿಸುವ ಮೂಲಕ 60 ರನ್ ಗಳಿಂದ ಸೋಲನ್ನಪ್ಪಿತು. ಈ ಮೂಲಕ ಆರ್‌ಸಿಬಿ ಪ್ಲೇಆಫ್ ಆಸೆ ಜೀವಂತವಾಗಿರಿಸಿದೆ. ಐಪಿಎಲ್ 2024ರ 58ನೇ ಪಂದ್ಯ ಪಂಜಾಬ್ ಕಿಂಗ್ಸ್ ಮತ್ತು ರಾಯಲ್ ಚಾಲೆಂಜರ್ಸ್ ಬೆಂಗಳೂರು ನಡುವೆ ನಡೆಯಿತು. ಈ ಪಂದ್ಯದಲ್ಲಿ ಆರ್‌ಸಿಬಿ ಬ್ಯಾಟ್ಸ್‌ಮನ್‌ಗಳು ಪಂಜಾಬ್ ಕಿಂಗ್ಸ್ ಭರ್ಜರಿ ಬ್ಯಾಟಿಂಗ್ ಮಾಡಿದರು. ಟಾಸ್ ಗೆದ್ದ ಪಂಜಾಬ್ ಮೊದಲು ಬೌಲಿಂಗ್ ಆಯ್ಕೆ ಮಾಡಿತು. ಹೀಗಾಗಿ ಬ್ಯಾಟಿಂಗ್ ಮಾಡಿದ ಆರ್‌ಸಿಬಿ ತಂಡವು ನಿಗದಿತ 20 ಓವರ್‌ಗೆ 7 ವಿಕೆಟ್ ನಷ್ಟಕ್ಕೆ ಬರೋಬ್ಬರಿ 241 ರನ್ ಸಿಡಿಸಿತು. ಈ ಬೃಹತ್ ಮೊತ್ತದ ಟಾರ್ಗೆಟ್ ಬೆನ್ನಟ್ಟಿದ ಪಂಜಾಬ್ ಕಿಂಗ್ಸ್ ತಂಡವು 17 ಓವರ್‌ಗೆ ತನ್ನೆಲ್ಲಾ ವಿಕೆಟ್ ಕಳೆದುಕೊಂಡು 181 ರನ್ ಗಳಿಸುವ ಮೂಲಕ 60 ರನ್ ಗಳಿಂದ ಸೋಲನ್ನಪ್ಪಿತು. ಈ ಮೂಲಕ ಆರ್‌ಸಿಬಿ ಪ್ಲೇಆಫ್ ಆಸೆ ಜೀವಂತವಾಗಿರಿಸಿದೆ.

**ಮುಗ್ಗರಿಸಿದ ಪಂಜಾಬ್ ಕಿಂಗ್ಸ್:**
ಆರ್‌ಸಿಬಿ ನೀಡಿದ ಬೃಹತ್ ಟಾರ್ಗೆಟ್ ಬೆನ್ನಟ್ಟಿದ ಪಂಜಾಬ್ ಕಿಂಗ್ಸ್ ತಂಡಕ್ಕೆ ಆರಂಭದಿಂದಲೇ ಸಂಕಷ್ಟಕ್ಕೆ ಸಿಲುಕುವಂತೆ ಆರ್‌ಸಿಬಿ ತಂಡ ಬೌಲಿಂಗ್ ಮಾಡಿತು. ಪಂಜಾಬ್ ಪರ ಪ್ರಭಸಿಮ್ರಾನ್ ಸಿಂಗ್ 6 ರನ್, ಜಾನಿ ಬೇರ್‌ಸ್ಟೋ 27 ರನ್, ರಿಲ್ಲೆ ರುಸ್ಸೋ 61 ರನ್, ಶಶಾಂಕ್ ಸಿಂಗ್ 37 ರನ್, ಜಿತೇಶ್ ಶರ್ಮಾ 5 ರನ್, ಲೀವಿಂಗ್‌ಸ್ಟನ್ ಶೂನ್ಯ, ಸ್ಯಾಮ್ ಕರನ್ 22 ರನ್, ಅಶುತೋಷ್ ಶರ್ಮಾ 8 ರನ್ ಗಳಿಸುವ ಮೂಲಕ ಪೆವೆಲಿಯನ್ ಪರೇಡ್ ನಡೆಸಿದರು.




**ಕೊಹ್ಲಿ ಭರ್ಜರಿ ಬ್ಯಾಟಿಂಗ್**

**ಆರ್‌ಸಿಬಿ ತಂಡ ಪಂಜಾಬ್ ವಿರುದ್ಧ ಗೆಲ್ಲುವ ಮೂಲಕ ಇದೀಗ ಮುಂಬೈ ಇಂಡಿಯನ್ಸ್ ಜೊತೆಗೆ ಪಂಜಾಬ್ ಕಿಂಗ್ಸ್ ಸಹ ಅಧಿಕೃತವಾಗಿ ಐಪಿಎಲ್ 17ನೇ ಸೀಸನ್‌ನಿಂದ ಹೊರಬಿದ್ದಿದೆ. ಆದರೆ ಆರ್‌ಸಿಬಿ ಪ್ಲೇಆಫ್ ರೇಸ್‌ನಲ್ಲಿ ಉಳಿದುಕೊಂಡಿದೆ.**

**ಪಂಜಾಬ್ ಕಿಂಗ್ಸ್ ಟಾಸ್ ಗೆದ್ದು ಮೊದಲು ಬೌಲಿಂಗ್ ಮಾಡಲು ನಿರ್ಧರಿಸಿದರೆ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಆರ್‌ಸಿಬಿ ನಿಗದಿತ 20 ಓವರ್‌ಗೆ 7 ವಿಕೆಟ್ ನಷ್ಟಕ್ಕೆ ಬರೋಬ್ಬರಿ 241 ರನ್ ಸಿಡಿಸಿತು. ಈ ಬೃಹತ್ ಮೊತ್ತವನ್ನು ಕಲೆಹಾಕುವಲ್ಲಿ ಪ್ರಮುಖವಾಗಿ ವಿರಾಟ್ ಕೊಹ್ಲಿ ಕಾರಣೀಕರ್ತರಾದರು. ಕೊಹ್ಲಿ 47 ಎಸೆತದಲ್ಲಿ 6 ಸಿಕ್ಸ್ ಮತ್ತು 7 ಫೋರ್ ಮೂಲಕ ಬರೋಬ್ಬರಿ 92 ರನ್ ಸಿಡಿಸಿ ಶತಕ ವಂಚಿತರಾಗಿ ಪೆವಿಲಿಯನ್ ಸೇರಿದರು. ಇವರಿಗೆ ರಜತ್ ಪಾಟಿದಾರ್ ಆರಂಭದಲ್ಲಿ ಉತ್ತಮ ಸಾಥ್ ನೀಡಿದರು. ಪಾಟಿದಾರ್ ಕೇವಲ 23 ಎಸೆತದಲ್ಲಿ 6 ಸಿಕ್ಸ್ ಮತ್ತು 3 ಬೌಂಡರಿ ಸಹಿತ 55 ರನ್ ಗಳಿಸಿದರೆ, ಕ್ಯಾಮರೂನ್ ಗ್ರೀನ್ ಸಹ 27 ಎಸೆತದಲ್ಲಿ 1 ಸಿಕ್ಸ್ 5 ಫೋರ್ ಮೂಲಕ 46 ರನ್ ಗಳಿಸಿ ಮಿಂಚಿದರು. ಉಳಿದಂತೆ ದಿನೇಶ್ ಕಾರ್ತಿಕ್ 18 ರನ್, ನಾಯಕ ಫಾಫ್ ಡುಪ್ಲೆಸಿಸ್ 9 ರನ್, ವಿಲ್ ಜ್ಯಾಕ್ಗಸ್ 12 ರನ್, ದಿನೇಶ್ ಕಾರ್ತಿಕ್ 18 ರನ್, ಮಹಿಪಾಲ್ ಲೋಮ್ರೋರ್ ಶೂನ್ಯ ಹಾಗೂ ಸ್ವಪ್ನಿಲ್ ಸಿಂಗ್ 1 ರನ್ ಸಿಡಿಸಿದರು.**

**ಮತ್ತೊಮ್ಮೆ ಅಬ್ಬರಿಸಿದ ಕಿಂಗ್ ಕೊಹ್ಲಿ**

# ಬಾಂಗ್ಲಾ ವಿರುದ್ಧ 5-0 ಕ್ಲೀನ್‌ಸ್ವೀಪ್ ಭಾರತ ಸಾಧನೆ

ಬಾಂಗ್ಲಾದೇಶ ಮಹಿಳಾ ಕ್ರಿಕೆಟ್ ವಿರುದ್ಧದ 5 ಪಂದ್ಯಗಳ ಟಿ 20 ಸರಣಿಯಲ್ಲಿ ಭಾರತ ಮಹಿಳಾ ಕ್ರಿಕೆಟ್ ತಂಡವು ಎಲ್ಲಾ ಪಂದ್ಯಗಳನ್ನು ಗೆದ್ದು 0-5 ಅಂತರದ ಗೆಲುವು ಸಾಧಿಸಿದೆ. ಪ್ರವಾಸಿ ಭಾರತ ತಂಡ ಈ ಮೂಲಕ ಆತಿಥೇಯ ತಂಡಕ್ಕೆ ಭರ್ಜರಿ ಮುಖಭಂಗ ಮಾಡಿದೆ/. ಈ ವರ್ಷದ ಕೊನೆಯಲ್ಲಿ ಬಾಂಗ್ಲಾದೇಶದಲ್ಲಿ ನಡೆಯಲಿರುವ ಮಹಿಳಾ ಟಿ 20 ವಿಶ್ವಕಪ್‌ಗೆ ತಯಾರಿ ನಡೆಸುತ್ತಿರುವ ಭಾರತಕ್ಕೆ ಈ ಸರಣಿ ವಿಶೇಷವಾಗಿ ಮಹತ್ವದ್ದಾಗಿದೆ. ಟಾಸ್ ಗೆದ್ದ ಭಾರತ ತಂಡ ಮೊದಲು ಬ್ಯಾಟಿಂಗ್ ಆಯ್ಕೆ ಮಾಡಿಕೊಂಡು ನಿಗದಿತ 20 ಒವರ್‌ಗಳಲ್ಲಿ 5 ವಿಕೆಟ್ ನಷ್ಟಕ್ಕೆ 156 ರನ್ ಬಾರಿಸಿತು. ಪ್ರತಿಯಾಗಿ ಬ್ಯಾಟ್ ಮಾಡಿದ ಬಾಂಗ್ಲಾ ತನ್ನ ಪಾಲಿನ ಓವರ್‌ಗಳು ಮುಕ್ತಾಯಗೊಂಡಾಗ 6 ವಿಕೆಟ್‌ಗೆ 135 ರನ್ ಬಾರಿಸಿ ಸೋಲೊಪ್ಪಿಕೊಂಡಿತು. ಟಾಸ್ ಗೆದ್ದು ಮೊದಲು ಬ್ಯಾಟಿಂಗ್



ಆಯ್ದುಕೊಂಡ ಭಾರತ ಐದನೇ ಓವರ್‌ನಲ್ಲಿ ಶಫಾಲಿ ವರ್ಮಾ ಅವರ ವಿಕೆಟ್ ಕಳೆದುಕೊಂಡಿತು. ನಂತರ ಉಪನಾಯಕಿ ಸ್ಮೃತಿ ಮಂದಾನ ಮತ್ತು ದಯಾಳನ್ ಹೇಮಲತಾ ಅವರು 8 ಓವರ್ ಗಳಲ್ಲಿ ಸ್ಕೋರ್ ಅನ್ನು 62-2 ಕ್ಕೆ ಕೊಂಡೊಯ್ದರು, ಸ್ಮೃತಿ ಓವರ್ ನ ಕೊನೆಯ ಎಸೆತದಲ್ಲಿ ಔಟಾದರು. ಭಾರತದ ನಾಯಕಿ ಹರ್ಮನ್ ಪ್ರೀತ್ ಕೌರ್ ಮತ್ತು ಹೇಮಲತಾ 60 ರನ್ ಗಳ ಜೊತೆಯಾಟವನ್ನು ನಿರ್ಮಿಸಿದರು, ಆದರೆ ಭಾರತವು ಸತತ ಎಸೆತಗಳಲ್ಲಿ ಎರಡೂ ವಿಕೆಟ್ ಗಳನ್ನು ಕಳೆದುಕೊಂಡಿತು. ಸಜನಾ ಸಜೀವನ್ ಕೂಡ ಅಗ್ಗವಾಗಿ ಔಟಾದರು. ಈ ವೇಳೆ ಭಾರತವು 124 ರನ್‌ಗೆ 5 ವಿಕೆಟ್ ಕಳೆದುಕೊಂಡಿತು. ರಿಚಾ ಘೋಷ್ ಅವರ ನಿರ್ಣಾಯಕ ಹಂತದಲ್ಲಿ 21 ಎಸೆತಗಳಲ್ಲಿ 28 ರನ್ ಗಳಿಸುವ ಮೂಲಕ ತಂಡವನ್ನು 156 ರನ್‌ಗಳತ್ತ ಮುನ್ನಡೆಸಿದರು. ಬಾಂಗ್ಲಾ ಪರ ಶೊರಿಫಾ ಖತುನ್ (28ಕ್ಕೆ 2) ಹಾಗೂ ನಹೀದಾ ಅಕ್ತರ್ (27ಕ್ಕೆ 2) ತಲಾ 2 ವಿಕೆಟ್ ಪಡೆದರು.

**ಬಾಂಗ್ಲಾ ಬ್ಯಾಟರ್‌ಗಳನ್ನು ಕಾಡಿದ ರಾಧಾ**

ಭಾರತೀಯ ಬೌಲರ್‌ಗಳು ನಿಯಮಿತವಾಗಿ ವಿಕೆಟ್‌ಗಳನ್ನು ಉರುಳಿಸಿದ ಕಾರಣ ಬಾಂಗ್ಲಾದೇಶದ ಬ್ಯಾಟರ್‌ಗಳಿಗೆ ಚೇತರಿಸಿಕೊಳ್ಳುವುದಕ್ಕೆ ಅವಕಾಶ ಸಿಗಲಿಲ್ಲ. ಇದು ಆತಿಥೇಯರ ಮೇಲೆ ಒತ್ತಡ ಹೇರಿತು. ಮೂರು ಬೌಂಡರಿಗಳನ್ನು ಹೊಡೆದ ನಂತರ ಅಪಾಯಕಾರಿಯಾಗಿ ಕಾಣುತ್ತಿದ್ದ ಶೋಭನಾ ಮೊಸ್ತಾರಿ ಅವರನ್ನು ಟಿಟಾಸ್ ಸಧು ತನ್ನ ಎರಡನೇ ಓವರ್‌ನಲ್ಲಿ ಔಟ್ ಮಾಡಿದರು. ರಾಧಾ ಯಾದವ್ ತಮ್ಮ ಮೊದಲ ಓವರ್‌ನಲ್ಲಿ ದಿಲಾರಾ ಅಕ್ಟರ್ ಅವರನ್ನು ಔಟ್ ಮಾಡುವ ಮೂಲಕ ಪ್ರಭಾವ ಬೀರಿದರು. 9 ನೇ ಓವರ್‌ನಲ್ಲಿ ಬಾಂಗ್ಲಾದೇಶದ ನಾಯಕಿನಿಗರ್ ಸುಲ್ತಾನಾ ಮತ್ತು ರುಬಿಯಾ ಹೈದರ್ ಅವರ ವಿಕೆಟ್‌ಗಳನ್ನು ಪಡೆದ ರಾಧಾ ಬಾಂಗ್ಲಾದೇಶವನ್ನು 48 ರನ್‌ಗಳಿಗೆ 5 ವಿಕೆಟ್ ಕಳೆದುಕೊಳ್ಳುವಂತೆ ನೋಡಿಕೊಂಡರು. ರಿತು ಮೋನಿ ಅವರ ಹೋರಾಟದ ಇನಿಂಗ್ಸ್ ಹೊರತಾಗಿಯೂ ಬಾಂಗ್ಲಾದೇಶವು 21 ರನ್‌ಗಳಿಂದ ಸೋತಿತು. ಕಳೆದ ಪಂದ್ಯದಲ್ಲಿ ಪಾದಾರ್ಪಣೆ ಮಾಡಿದ ಆಶಾ ಶೋಭನಾ ಭಾರತದ ಪರ 2 ವಿಕೆಟ್ ಪಡೆದರು. ಸಿಲ್ಹೆಟ್ ಇಂಟರ್ನ್ಯಾಷನಲ್ ಸ್ಟೇಡಿಯಂನಲ್ಲಿ ನಡೆದ ಈ ಪಂದ್ಯದಲ್ಲಿ ರಾಧಾ ಯಾದವ್ 3 ವಿಕೆಟ್ ಪಡೆದು ಮಿಂಚಿದರು. ರಾಧಾ ಯಾದವ್ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು ಮತ್ತು ಸರಣಿಯಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿದ್ದಕ್ಕಾಗಿ ಸರಣಿಯ ಆಟಗಾರ್ತಿ ಪ್ರಶಸ್ತಿಯನ್ನೂ ಪಡೆದರು.

**ಭಾರತ ಮಹಿಳಾ ತಂಡ:** 156/5 (20 ಓವರ್ )ಹೇಮಲತಾ 37(28), ಸ್ಮೃತಿ ಮಂದಾನ 33(25); ರಬೆಯಾ ಖಾನ್ 2/28 (4), ನಹೀದಾ ಅಕ್ಟರ್ 2/27 (4)
**ಬಾಂಗ್ಲಾದೇಶ ತಂಡ :** 135-6 (20 ಓವರ್ ಗಳು) ರಿತು ಮೋನಿ 37(33), ಶೋರಿಫಾ ಖತುನ್ 28(21); ರಾಧಾ ಯಾದವ್ 3/24 (4), ಆಶಾ ಶೋಭನಾ 2/25 (4) 21 ರನ್ ಗಳಿಂದ.



## ಡೈರೆಕ್ಟರ್ ವಿಕ್ರಮ್ ಭಟ್ ಸಿನಿಮಾದಲ್ಲಿ ಶ್ರುತಿ ಪ್ರಕಾಶ್

**ಬಾಲಿವುಡ್‌ಗೆ ಹಾರಿದ ಕನ್ನಡತಿ**

'ಬಿಗ್ ಬಾಸ್ ಕನ್ನಡ ಸೀಸನ್ 5'ರ ಮೂಲಕ ಗಮನ ಸೆಳೆದ ಶ್ರುತಿ ಪ್ರಕಾಶ್ ಅವರು ಸದ್ಯ ಬಾಲಿವುಡ್‌ಗೆ ಹಾರಿದ್ದಾರೆ. ಖ್ಯಾತ ನಿರ್ದೇಶಕನ ಸಿನಿಮಾದಲ್ಲಿ ನಾಯಕಿಯಾಗಿ ಬಿಟೌನ್‌ಗೆ ನಟಿ ಪಾದಾರ್ಪಣೆ ಮಾಡುತ್ತಿದ್ದಾರೆ. ಬಾಲಿವುಡ್‌ನಲ್ಲಿ ಹಲವು ಸಿನಿಮಾಗಳನ್ನು ನಿರ್ದೇಶಿಸಿ ಸೈ ಎನಿಸಿಕೊಂಡಿದ್ದ ವಿಕ್ರಮ್ ಭಟ್ ಅವರು 'ಹಾಂಟೆಡ್ 2' ಸಿನಿಮಾಗೆ ಆಕ್ಷನ್ ಕಟ್ ಹೇಳಲು ಸಜ್ಜಾಗಿದ್ದಾರೆ. ಈ ಚಿತ್ರವನ್ನು ಆನಂದ್ ಪಂಡಿತ್ ನಿರ್ಮಾಣ ಮಾಡಿದ್ದಾರೆ. ಇದು ಹಾಂಟೆಡ್ ಚಿತ್ರದ ಸೀಕ್ವೆಲ್ ಆಗಿದೆ. 'ಹಾಂಟೆಡ್ 2' ಸಿನಿಮಾದಲ್ಲಿ ಮಿಮೋಹ್ ಚಕ್ರವರ್ತಿಗೆ ಶ್ರುತಿ ಪ್ರಕಾಶ್ ನಾಯಕಿಯಾಗಿದ್ದಾರೆ. ಶ್ರುತಿ ಪಾತ್ರಕ್ಕೆ ಬಹಳಷ್ಟು ಪ್ರಾಮುಖ್ಯತೆ ಇದ್ದು, ಇದೊಂದು ಫ್ಯಾಮಿಲಿ ಎಂಟರ್‌ಟೈನರ್ ಚಿತ್ರವಾಗಿದೆ. ಈ ಚಿತ್ರದಲ್ಲಿ ಅವಕಾಶ ಸಿಕ್ಕಿರುವುದಕ್ಕೆ ನಟಿ ಸಂತಸ ವ್ಯಕ್ತಪಡಿಸಿದ್ದಾರೆ. ಅಂದಹಾಗೆ, ಬಿಗ್ ಬಾಸ್ ಶೋ ಬಳಿಕ ಕಸ್ತೂರಿ ಮಹಲ್, ಕಡಲ ತೀರದ ಭಾರ್ಗವ, ಲಂಡನ್‌ನಲ್ಲಿ ಲಂಬೋದರ, ಗ್ರೇ ಗೇಮ್ಸ್ ಸೇರಿದಂತೆ ಹಲವು ಚಿತ್ರಗಳಲ್ಲಿ ಶ್ರುತಿ ಪ್ರಕಾಶ್ ನಟಿಸಿದ್ದಾರೆ.



# ಟಾಕ್ಸಿಕ್ ಸಿನಿಮಾದಲ್ಲಿ ಐಶ್ವರ್ಯಾ ರೈ

ನ್ಯಾಷನಲ್ ಸ್ಟಾರ್ ಯಶ್ ಸದ್ಯ 'ಟಾಕ್ಸಿಕ್' ಸಿನಿಮಾದ ಕೆಲಸದಲ್ಲಿ ಬ್ಯುಸಿಯಾಗಿದ್ದಾರೆ. ಸದ್ಯ ಟಾಕ್ಸಿಕ್ ಟೀಮ್‌ನಿಂದ ಅಚ್ಚರಿಯ ಹೆಸರೊಂದು ಹೊರಬಿದ್ದಿದೆ.

ಯಶ್ ಸಿನಿಮಾದಲ್ಲಿ ಮಾಜಿ ವಿಶ್ವ ಸುಂದರಿ ಐಶ್ವರ್ಯಾ ರೈ ನಟಿಸಲಿದ್ದಾರೆ ಎಂಬ ಸುದ್ದಿ ಹರಿದಾಡುತ್ತಿದೆ. ತಡವಾದರೂ ಸರಿ ಅಂತ ಸಕಲ ಸಿದ್ಧತೆ ಮಾಡಿಕೊಂಡೆ ಯಶ್ ಅಖಾಡಕ್ಕೆ ಇಳಿಯುತ್ತಿದ್ದಾರೆ.

'ಟಾಕ್ಸಿಕ್' ಸಿನಿಮಾಗಾಗಿ ಬೆಂಗಳೂರಿನಲ್ಲಿ ಈಗಾಗಲೇ ಬೃಹತ್ ಸೆಟ್ ಹಾಕಿದ್ದಾರೆ. ಇನ್ನೇನು ಸದ್ಯದಲ್ಲೇ ಶೂಟಿಂಗ್ ಕೂಡ ಶುರುವಾಗಲಿದೆ. ಇತ್ತೀಚೆಗೆ ಯಶ್ ಸಿನಿಮಾದಲ್ಲಿ ಕರೀನಾ ಕಪೂರ್ ನಟಿಸುವ ಸುದ್ದಿ ಭಾರೀ ಚರ್ಚೆಯಾಗಿತ್ತು. ಯಶ್ ಸಹೋದರಿ ಪಾತ್ರಕ್ಕೆ ಅವರನ್ನು ಸಂಪರ್ಕಿಸಿದೆ ಎನ್ನಲಾಗಿತ್ತು. ಆದರೆ ಡೇಟ್ಸ್ ಸಮಸ್ಯೆಯಿಂದಕರೀನಾ ಹೊರನಡೆದಿದ್ದಾರೆ ಎಂಬ ಸುದ್ದಿ ಹರಿದಾಡಿತ್ತು. ಈ ಬೆನ್ನಲ್ಲೇ ನಯನ ತಾರಾ ಹೆಸರು ಚಾಲ್ತಿಗೆ ಬಂತು. ಇದರ ಬಗ್ಗೆ ಅಧಿಕೃತ ಮಾಹಿತಿ ಹೊರ ಬೀಳುವ ಮೊದಲೇ ಐಶ್ವರ್ಯಾ ರೈ ಹೆಸರು ಚರ್ಚೆಗೆ ಗ್ರಾಸವಾಗಿದೆ. 'ಟಾಕ್ಸಿಕ್' ಸಿನಿಮಾದಲ್ಲಿ ಯಶ್ ಸಹೋದರಿ ಪಾತ್ರಕ್ಕೆ ತುಂಬಾನೇ ಪ್ರಾಮುಖ್ಯತೆ ಇದೆ. ಹಾಗಾಗಿ ನಟನೆಯಲ್ಲಿ ಪಳಗಿರುವ ನಟಿಯರನ್ನೇ ಚಿತ್ರತಂಡ ಮಣೆ ಹಾಕ್ತಿದೆ. ಸದ್ಯ ಬಾಲಿವುಡ್ ಬೆಡಗಿ ಐಶ್ವರ್ಯಾ ರೈ ಅವರನ್ನು ಸಹೋದರಿ ಪಾತ್ರಕ್ಕೆ ಚಿತ್ರತಂಡ ಸಂಪರ್ಕಿಸಿದೆ. ನಯನತಾರಾ ಅಥವಾ ಐಶ್ವರ್ಯಾ ರೈ ಇಬ್ಬರಲ್ಲಿ ಒಬ್ಬರನ್ನು ಫೈನಲ್ ಮಾಡಲಿದೆ ಚಿತ್ರತಂಡ. ಹಾಗಾದ್ರೆ, ಯಾರು 'ಟಾಕ್ಸಿಕ್'ನಲ್ಲಿ ಕಾಣಿಸಿಕೊಳ್ತಾರೆ? ಎಂಬುದನ್ನು ಚಿತ್ರತಂಡ ಹೇಳುವವರೆಗೂ ಕಾದುನೋಡಬೇಕಿದೆ.



**ಸಿನಿ ವಾಹಿನಿ**

## ಮೂರನೇ ಕೃಷ್ಣಪ್ಪ ಟ್ರೈಲರ್‌ಗೆ ಲೂಸ್ ಮಾದ



ತಮ್ಮ ಅಭಿನಯದ ಮೂಲಕವೇ ಕನ್ನಡ ಸಿನಿಪ್ರೇಕ್ಷಕರನ್ನು ಗಮನಸೆಳೆದ ಸಂಪತ್ ಮೈತ್ರೇಯಾ ಮೂರನೇ ಕೃಷ್ಣಪ್ಪ ಸಿನಿಮಾ ಮೂಲಕ ನಾಯಕರಾಗಿ ಅದೃಷ್ಟ ಪರೀಕ್ಷೆಗಿಳಿದಿದ್ದಾರೆ. ಈಗಾಗ್ಲೇ ಹಾಡುಗಳ ಮೂಲಕ ನಿರೀಕ್ಷೆ ಹೆಚ್ಚಿಸಿರುವ ಈ ಚಿತ್ರದ ಟ್ರೇಲರ್ ಬಿಡುಗಡೆ ತಯಾರಿ ನಡೆದಿದೆ. ಮೂರನೇ ಕೃಷ್ಣಪ್ಪ ಸಿನಿಮಾದ ಮೊದಲ ನೋಟ ಹೊರಬೀಳಲಿದ್ದು, ಲೂಸ್ ಮಾದ ಯೋಗಿ ಟ್ರೇಲರ್‌ಗೆ ಧ್ವನಿಯಾಗಿದ್ದಾರೆ. ಈ ಮೂಲಕ ನವೀನ್ ರೆಡ್ಡಿ ಹೊಸ ಕನಸಿಗೆ ಸಿದ್ಲಿಂಗು ಸಾಥ್ ಕೊಟ್ಟಿದ್ದಾರೆ. ಲವ್ ಸ್ಟೋರಿ ಸಿನಿಮಾಗಳ ಸೂತ್ರಧಾರ ನಿರ್ದೇಶಕ ನವೀನ್ ರೆಡ್ಡಿ ಹೊಸ ಪ್ರಯತ್ನ 'ಮೂರನೇ ಕೃಷ್ಣಪ್ಪ'.. ಅಕಿರ ಹಾಗೂ ರಿಲ್ಯಾಕ್ಸ್ ಸತ್ಯ ಸಿನಿಮಾ ಮೂಲಕ ಕನ್ನಡ ಚಿತ್ರರಂಗದಲ್ಲಿ ಭರವಸೆ ಮೂಡಿಸಿರುವ ಅವರೀಗ ವಿಭಿನ್ನ ಶೀರ್ಷಿಕೆಯೊಂದಿಗೆ ಫ್ರೆಶ್ ಕಥೆ ಹೇಳೋದಿಕ್ಕೆ ಬರ್ತಿದ್ದಾರೆ. ಸದ್ಯ ಚಿತ್ರತಂಡ ಪೋಸ್ಟ್ ಪ್ರೊಡಕ್ಷನ್ ಕೆಲಸ ಮಗಿಸಿ ಪ್ರಚಾರ ಅಖಾಡಕ್ಕೆ ಎಂಟ್ರಿ ಕೊಟ್ಟಿದೆ.



## ಸಾರಾ ಜೊತೆ 'ಆಶಿಕಿ 2' ಹೀರೋ ಡೇಟಿಂಗ್?

'ಲೈಗರ್' ನಟಿ ಅನನ್ಯಾ ಪಾಂಡೆ ಮತ್ತು ಆದಿತ್ಯ ರಾಯ್ ಕಪೂರ್ ನಡುವೆ ಡೇಟಿಂಗ್ ವದಂತಿಗಳು ಹೊಸದೇನಲ್ಲ. ಆದರೆ ಈ ಜೋಡಿ ಬ್ರೇಕಪ್ ಮಾಡಿಕೊಂಡಿದ್ದಾರೆ ಎಂಬ ಸುದ್ದಿ ಹರಿದಾಡುತ್ತಿದೆ. ಈ ಬೆನ್ನಲ್ಲೇ ಆದಿತ್ಯ ರಾಯ್ ಕಪೂರ್ ಅವರು ಸಾರಾ ಅಲಿ ಖಾನ್ ಅವರೊಂದಿಗೆ ಪಾರ್ಟಿಯೊಂದರಲ್ಲಿ ಕಾಣಿಸಿಕೊಂಡಿದ್ದಾರೆ. ಈ ಪಾರ್ಟಿಯ ಹಲವು ಫೋಟೊಗಳು ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗುತ್ತಿವೆ. ವೈರಲ್ ಆದ ಫೋಟೋದಲ್ಲಿ ಆದಿತ್ಯ ಮತ್ತು ಸಾರಾ ಅವರು ನಿರ್ಮಾಪಕ ಅನುರಾಗ್ ಬಸು ಅವರೊಂದಿಗೆ ಸಮಯವನ್ನು ಕಳೆಯುತ್ತಿರುವುದು ಕಾಣಬಹುದು. 'ಮೆಟ್ರೋ ಇನ್ ಡಿನೋ' ಸಿನಿಮಾ ಸೆಟ್‌ನಲ್ಲಿ ಆಯೋಜಿಸಲಾದ ನಿರ್ದೇಶಕರ ಹುಟ್ಟುಹಬ್ಬದ ಸಂದರ್ಭದ ಫೋಟೋಗಳಿವು ಎನ್ನಲಾಗುತ್ತಿದೆ. ಆದಿತ್ಯ ಮತ್ತು ಸಾರಾ ಚಿತ್ರಗಳಲ್ಲಿ ಪರಸ್ಪರ ಹತ್ತಿರವಾಗಿ ನಿಂತಿದ್ದಾರೆ. ಅಂದಹಾಗೆ, ಅನನ್ಯಾ ಮತ್ತು ಆದಿತ್ಯ ಪರಸ್ಪರ ಪ್ರೀತಿಸುತ್ತಿದ್ದಾರೆ ಎಂಬ ವದಂತಿ 2022ರಲ್ಲಿ ಶುರುವಾಗಿತ್ತು. 2022ರಲ್ಲಿ ಕೃತಿ ಸನೂನ್ ಅವರ ದೀಪಾವಳಿ ಪಾರ್ಟಿಯಲ್ಲಿ ಜೋಡಿ ಕಾಣಿಸಿಕೊಂಡಾಗ ವದಂತಿ ಸುದ್ದಿಗಳು ಮತ್ತಷ್ಟು ಹೆಚ್ಚಾಯ್ತು. ಅಂಬಾನಿ ಮನೆ ಮಗನ ವಿವಾಹ ಪೂರ್ವ ಕಾರ್ಯಕ್ರಮದಲ್ಲಿಯೂ ಇಬ್ಬರೂ ಜೊತೆಯಾಗಿ ಕಾಣಿಸಿಕೊಂಡಿದ್ದರು.

ಕಾರ್ತಿಕ್ ಆರ್ಯನ್ ಜೊತೆ ಸಾರಾ ಬ್ರೇಕಪ್ ಮಾಡಿಕೊಂಡು ಸಿಂಗಲ್ ಲೈಫ್ ಲೀಡ್ ಮಾಡುತ್ತಾ ಇದ್ದರು. ಅನನ್ಯಾ ಪ್ರೀತಿಗೆ ಗುಡ್ ಬೈ ಹೇಳಿರೋ ಆದಿತ್ಯಾ ಇದೀಗ ಸಾರಾ ಜೊತೆ ಹೊಸ ಪ್ರೇಮ ಕಹಾನಿ ಶುರು ಮಾಡುತ್ತಾರಾ? ಎಂದು ಕಾದುನೋಡಬೇಕಿದೆ.



## ಸಿಖಂದರ್ ಸಲ್ಮಾನ್‌ಗೆ ರಶ್ಮಿಕಾ ನಾಯಕಿ

ಕೊಡಗಿನ ಬೆಡಗಿ ರಶ್ಮಿಕಾ ಮಂದಣ್ಣಗೆ ಅದೃಷ್ಟ ಖುಲಾಯಿಸಿದೆ. ಇದೀಗ ಬಾಲಿವುಡ್‌ನಲ್ಲಿ ನಟಿ ಬಂಪರ್ ಅವಕಾಶ ಬಾಚಿಕೊಂಡಿದ್ದಾರೆ. ರಣ್‌ಬೀರ್ ಕಪೂರ್ ಜೊತೆ ರೊಮ್ಯಾನ್ಸ್ ಮಾಡಿದ್ದು ಆಯ್ತು, ಈಗ ಸ್ಟಾರ್ ನಟ ಸಲ್ಮಾನ್ ಖಾನ್ ಜೊತೆ ರಶ್ಮಿಕಾ ಡ್ಯುಯೆಟ್ ಹಾಡಲು ರೆಡಿಯಾಗಿದ್ದಾರೆ. ಪುಷ್ಪ, ಅನಿಮಲ್ ಸಿನಿಮಾದಿಂದ ರಶ್ಮಿಕಾ ಮಂದಣ್ಣ ವರ್ಚಸ್ಸು ಜಾಸ್ತಿಯಾಗಿದೆ.

ಸ್ಟಾರ್ ನಟರ ಚಿತ್ರಕ್ಕೆ ರಶ್ಮಿಕಾನೇ ಬೇಕು ಎಂಬಷ್ಟರ ಮಟ್ಟಿಗೆ ಬೇಡಿಕೆ ಹೆಚ್ಚಾಗಿದೆ. ಸದ್ಯ 'ಸಿಖಂದರ್' ಸಲ್ಮಾನ್‌ಗೆ ರಶ್ಮಿಕಾ ಹೀರೋಯಿನ್ ಆಗಿ ಆಯ್ಕೆಯಾಗಿದ್ದಾರೆ. ತಮಿಳಿನ ಸೂಪರ್ ಹಿಟ್ ನಿರ್ದೇಶಕ ಮುರುಗದಾಸ್ ಜೊತೆ ಸಲ್ಮಾನ್ ಸಿನಿಮಾ ಮಾಡುವ ಬಗ್ಗೆ ಇತ್ತೀಚೆಗೆ ಅನೌನ್ಸ್ ಆಗಿತ್ತು. 'ಸಿಖಂದರ್' ಎಂಬ ಆಕ್ಷನ್ ಕಥೆಗೆ ಸಲ್ಮಾನ್ ಖಾನ್ ಕೈಜೋಡಿಸಿದ್ದಾರೆ. ನಮ್ಮ ಸಿನಿಮಾಗೆ ರಶ್ಮಿಕಾನೇ ಸೂಕ್ತ ನಾಯಕಿ ಅಂತ ಶ್ರೀವಲ್ಲಿಗೆ ಮಣೆ ಹಾಕಿದ್ದಾರೆ. ಈ ಬಗ್ಗೆ ಚಿತ್ರತಂಡ ಕೂಡ ಅಧಿಕೃತವಾಗಿ ಅನೌನ್ಸ್ ಮಾಡಿದೆ. ಸಿನಿಮಾದ ಕಥೆ, ತಮ್ಮ ಪಾತ್ರಕ್ಕೆ ಕೊಟ್ಟಿರುವ ಪ್ರಾಮುಖ್ಯತೆ ನೋಡಿ ರಶ್ಮಿಕಾಗೂ ಇಷ್ಟವಾಗಿ ಚಿತ್ರತಂಡಕ್ಕೆ ಗ್ರೀನ್ ಸಿಗ್ನಲ್ ಕೊಟ್ಟಿದ್ದಾರೆ.

ನೀವೆಲ್ಲರೂ ನನ್ನ ಮುಂದಿನ ಚಿತ್ರದ ಬಗ್ಗೆ ಅಪ್‌ಡೇಟ್ ಅನ್ನು ಕೇಳುತ್ತಿದ್ರಿ. ಇದೀಗ ಸಿಖಂದರ್ ಚಿತ್ರತಂಡವನ್ನು ಸೇರಿಕೊಳ್ಳುತ್ತಿರುವ ಬಗ್ಗೆ ಖುಷಿಯಿದೆ ಎಂದು ಸೋಷಿಯಲ್ ಮೀಡಿಯಾದಲ್ಲಿ ನಟಿ ಸಂತಸ ವ್ಯಕ್ತಪಡಿಸಿದ್ದಾರೆ. ಸದ್ಯ ಬಿಟೌನ್ ಅಡ್ಡಾದಲ್ಲಿ ಸಿಖಂದರ್ ಸಿನಿಮಾದೇ ಸುದ್ದಿ. ಕೆಲವರು ಈ ಹೊಸ ಜೋಡಿಯನ್ನು ತೆರೆಯ ಮೇಲೆ ನೋಡಲು ಥ್ರಿಲ್ ಆಗಿದ್ರೆ, ಇನ್ನೂ ಕೆಲವರು 58ರ ಹೀರೋಗೆ 28ರ ರಶ್ಮಿಕಾ ನಾಯಕಿನಾ? ಪ್ರಶ್ನೆ ಮಾಡುತ್ತಿದ್ದಾರೆ. ವಯಸ್ಸಿನ ಅಂತರ ಇಟ್ಟುಕೊಂಡು ಕಾಲೆಳೆಯುತ್ತಿದ್ದಾರೆ. ಸೋಷಿಯಲ್ ಮೀಡಿಯಾದಲ್ಲಿ ಈ ಬಗ್ಗೆ ಭಾರೀ ಚರ್ಚೆ ಶುರುವಾಗಿದೆ. ಚಿತ್ರತಂಡ ಈ ಬಗ್ಗೆ ಏನು ಪ್ರತಿಕ್ರಿಯೆ ನೀಡುತ್ತಾರೆ ಎಂಬುದನ್ನು ಕಾದುನೋಡಬೇಕಿದೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966